VOLUME: 16 | 12 JULY 2026 | ಭಾನುವಾರ | RS: 2 | PAGE: 06 ISSUE: 151 ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

ಚಿತ್ರರಂಗದಲ್ಲಿ ಆದ ಕಹಿ ಘಟನೆಗಳನ್ನು ಮರೆತು ಬಣ್ಣದ ಲೋಕದಲ್ಲಿ ಸಾಧಿಸಬೇಕು ಎನ್ನುವ ಛಲದೊಂದಿಗೆ ಮಂಡ್ಯದ ಯುವ ರೈತ ಚೇತನ್ 'ದೇವಿ' ಚಿತ್ರದ ಮೂಲಕ ಚಿತ್ರರಂಗದಲ್ಲಿ ಅದೃಷ್ಟ ಅರಸಲು ಮುಂದಾಗಿದ್ದಾರೆ. ಯುವ ನಟ ಚೇತನ್ ಅವರಿಗೆ ಬಿಗ್ ಬಾಸ್ ಬೆಡಗಿ ಭವ್ಯಗೌಡ ನಾಯಕಿಯಾಗಿ ನಟಿಸುತ್ತಿದ್ದಾರೆ ಎಂದು ಹೇಳಲಾಗಿದೆ.



BHARATHA SARATHI
KANNADA DAILY NEWS PAPER

# ಭಾರತ ಸಾರಥಿ

CALL 9740160669

RNI KARKAN2011/44806

prabhavaa.com

ಸದಾ ನಿಮ್ಮೊಂದಿಗೆ ಕನ್ನಡ ದಿನಪತ್ರಿಕೆ






## ವಂದೇ ಮಾತರಂ ನಂತರವಷ್ಟೇ ಜನಗಣಮನ

ನವದೆಹಲಿ: ಸರ್ಕಾರಿ ಅಧಿಕೃತ ಕಾರ್ಯಕ್ರಮಗಳಲ್ಲಿ ರಾಷ್ಟ್ರೀಯ ಗೀತೆ 'ವಂದೇ ಮಾತರಂ' ಮತ್ತು ರಾಷ್ಟ್ರಗೀತೆ 'ಜನಗಣಮನ' ಹಾಡುವ ಅಥವಾ ನುಡಿಸುವ ಕ್ರಮಕ್ಕೆ ಸಂಬಂಧಿಸಿದಂತೆ ಕೇಂದ್ರ ಗೃಹ ಸಚಿವಾಲಯ ಹೊಸ ಮಾರ್ಗಸೂಚಿಗಳನ್ನು ಮರುಸೂಚನೆ ಮಾಡಿದ್ದು, ಇನ್ನು ಮುಂದೆ ಎರಡನ್ನೂ ಒಟ್ಟಿಗೆ ಬಳಸುವ ಸಂದರ್ಭಗಳಲ್ಲಿ ಮೊದಲು 'ವಂದೇ ಮಾತರಂ' ಹಾಗೂ ನಂತರ 'ಜನಗಣಮನ' ಹಾಡಬೇಕು ಅಥವಾ ನುಡಿಸಬೇಕು ಎಂದು ನಿರ್ದೇಶನ ನೀಡಿದೆ.

ರಾಜ್ಯ ಸರ್ಕಾರಗಳ ಅಧಿಕೃತ ಕಾರ್ಯಕ್ರಮಗಳಲ್ಲಿ ಮೊದಲು ಆಯಾ ರಾಜ್ಯದ ರಾಜ್ಯಗೀತೆಯನ್ನು ಹಾಡಿ, ನಂತರ ವಂದೇ ಮಾತರಂ ಹಾಗೂ ಕೊನೆಯಲ್ಲಿ ಜನಗಣಮನ ಹಾಡಬೇಕು ಎಂದು ಸೂಚಿಸಲಾಗಿದೆ. ಕರ್ನಾಟಕದಲ್ಲಿ ಸರ್ಕಾರಿ ಸಮಾರಂಭಗಳಲ್ಲಿ ಮೊದಲು 'ಜಯ ಭಾರತ ಜನನಿಯ ತನುಜಾತೆ', ನಂತರ 'ವಂದೇ ಮಾತರಂ' ಹಾಗೂ ಕೊನೆಯಲ್ಲಿ 'ಜನಗಣಮನ' ಹಾಡುವ ಕ್ರಮ ಅನುಸರಿಸಬೇಕಾಗಿದೆ.

ಈ ಮಾರ್ಗಸೂಚಿಗಳನ್ನು ಎಲ್ಲಾ ರಾಜ್ಯ ಸರ್ಕಾರಗಳು, ಕೇಂದ್ರಾಡಳಿತ ಪ್ರದೇಶಗಳು ಹಾಗೂ ಕೇಂದ್ರ ಸಚಿವಾಲಯಗಳಿಗೆ ಕಳುಹಿಸಲಾಗಿದ್ದು, ಕಟ್ಟುನಿಟ್ಟಾಗಿ ಪಾಲಿಸುವಂತೆ ಸೂಚಿಸಲಾಗಿದೆ. ರಾಷ್ಟ್ರೀಯ ಗೀತೆ ಮತ್ತು ರಾಷ್ಟ್ರಗೀತೆಯನ್ನು ಹಾಡುವ ಅಥವಾ ನುಡಿಸುವಾಗ ಮೂಲ ಸಾಹಿತ್ಯ ಮತ್ತು ಸರಿಯಾದ ಉಚ್ಚಾರಣೆಯನ್ನು ಕಡ್ಡಾಯವಾಗಿ ಪಾಲಿಸಬೇಕು ಎಂದು ಸಚಿವಾಲಯ ಸ್ಪಷ್ಟಪಡಿಸಿದೆ.

ಈ ಸಂಬಂಧ ಅಧಿಕೃತ ಸಾಹಿತ್ಯ ಹಾಗೂ ಉಚ್ಚಾರಣೆಯ ಮಾರ್ಗದರ್ಶನವನ್ನು ಗೃಹ ಸಚಿವಾಲಯದ ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗಿದೆ.

ಮಾರ್ಗಸೂಚಿಗಳ ಪ್ರಕಾರ, ರಾಷ್ಟ್ರಪತಿಗಳ ಆಗಮನ ಹಾಗೂ ನಿರ್ಗಮನದ ಅಧಿಕೃತ ಸಮಾರಂಭಗಳು, ನಾಗರಿಕ ಪ್ರಶಸ್ತಿ ಪ್ರದಾನ ಸಮಾರಂಭಗಳು, ರಾಷ್ಟ್ರಪತಿಗಳ ರಾಷ್ಟ್ರವನ್ನುದ್ದೇಶಿಸಿದ ಭಾಷಣದ ಮುನ್ನ ಮತ್ತು ಬಳಿಕ, ರಾಜ್ಯಪಾಲರು ಅಥವಾ ಲೆಫ್ಟಿನೆಂಟ್ ಗವರ್ನರ್‌ಗಳ ಅಧಿಕೃತ ಕಾರ್ಯಕ್ರಮಗಳು, ರಾಷ್ಟ್ರಧ್ವಜವನ್ನು ಮೆರವಣಿಗೆಯಲ್ಲಿ ತರುವಾಗ ಹಾಗೂ ಕೇಂದ್ರ ಸರ್ಕಾರ ಸೂಚಿಸುವ ಇತರೆ ಅಧಿಕೃತ ಸಂದರ್ಭಗಳಲ್ಲಿ ರಾಷ್ಟ್ರೀಯ ಗೀತೆ ಮತ್ತು ರಾಷ್ಟ್ರಗೀತೆಯನ್ನು ನಿಗದಿತ ಕ್ರಮದಲ್ಲಿ ಹಾಡುವುದು
ಅಥವಾ ನುಡಿಸುವುದು ಕಡ್ಡಾಯವಾಗಿದೆ.

ರಾಷ್ಟ್ರೀಯ ಗೀತೆ ಅಥವಾ ರಾಷ್ಟ್ರಗೀತೆ ಹಾಡುವ ಅಥವಾ ನುಡಿಸುವ ವೇಳೆ ಸಭೆಯಲ್ಲಿ ಉಪಸ್ಥಿತರಿರುವ ಎಲ್ಲರೂ ಸಾವಧಾನ ಸ್ಥಿತಿಯಲ್ಲಿ ನಿಲ್ಲಬೇಕು ಎಂದು ಮಾರ್ಗಸೂಚಿಯಲ್ಲಿ ತಿಳಿಸಲಾಗಿದೆ. ಶಾಲೆಗಳು, ಕಾಲೇಜುಗಳು, ಸರ್ಕಾರಿ ಕಚೇರಿಗಳು ಹಾಗೂ ಇತರೆ ಸಾರ್ವಜನಿಕ ಸಂಸ್ಥೆಗಳಲ್ಲೂ ಈ ನಿಯಮಗಳನ್ನು ಪಾಲಿಸುವಂತೆ ರಾಜ್ಯ ಸರ್ಕಾರಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಿಗೆ ಕೇಂದ್ರ ಗೃಹ ಸಚಿವಾಲಯ ಸೂಚಿಸಿದೆ.

## ಔಷಧಿಗಳ ದರ ಇಳಿಕೆ

ನವದೆಹಲಿ: ಬಡ ಹಾಗೂ ಮಧ್ಯಮ ವರ್ಗದ ರೋಗಿಗಳಿಗೆ ಕೇಂದ್ರ ಸರ್ಕಾರ ಸಿಹಿಸುದ್ದಿ ನೀಡಿದ್ದು, ರಾಷ್ಟ್ರೀಯ ಔಷಧ ದರ ನಿಯಂತ್ರಣ ಪ್ರಾಧಿಕಾರ (ಎನ್‌ಪಿಪಿಎ) 39 ಅಗತ್ಯ ಔಷಧಿಗಳ ಗರಿಷ್ಠ ಬೆಲೆಯನ್ನು ಇಳಿಸಿ ಹೊಸ ದರ ನಿಗದಿಪಡಿಸಿದೆ. ಮಧುಮೇಹ, ರಕ್ತದೊತ್ತಡ, ಹೃದ್ರೋಗ, ಕಣ್ಣಿನ ಸೋಂಕು, ಉಸಿರಾಟದ ತೊಂದರೆ ಸೇರಿದಂತೆ ದೀರ್ಘಕಾಲದ ಕಾಯಿಲೆಗಳ ಚಿಕಿತ್ಸೆಗೆ ಬಳಸುವ ಹಲವು ಔಷಧಿಗಳು ಈ ಪಟ್ಟಿಯಲ್ಲಿ ಸೇರಿವೆ.

ನಿಗದಿಪಡಿಸಿರುವ ಗರಿಷ್ಠ ದರಕ್ಕಿಂತ ಹೆಚ್ಚಿನ ಬೆಲೆಗೆ ಯಾವುದೇ ಔಷಧಿಯನ್ನು ಮಾರಾಟ ಮಾಡಬಾರದು ಎಂದು ಎನ್‌ಪಿಪಿಎ ಕಟ್ಟುನಿಟ್ಟಿನ ಸೂಚನೆ ನೀಡಿದೆ. ನಿಯಮ ಉಲ್ಲಂಘಿಸಿ ಹೆಚ್ಚಿನ ದರಕ್ಕೆ ಔಷಧಿ ಮಾರಾಟ ಮಾಡಿದರೆ ಹೆಚ್ಚುವರಿ ವಸೂಲಿ ಮಾಡಿದ ಮೊತ್ತವನ್ನು ಬಡ್ಡಿ ಸಮೇತ ಮರುಪಾವತಿಸಬೇಕಾಗುತ್ತದೆ.

1950ರ ದಶಕದ ಅಂತ್ಯದಲ್ಲಿ ಚಿತ್ರರಂಗ ಪ್ರವೇಶಿಸಿದ ಅವರು ಆರು ದಶಕಗಳಿಗೂ ಹೆಚ್ಚು ಕಾಲ ಸಂಗೀತ ಲೋಕವನ್ನು ಆಳಿದರು. ಕನ್ನಡ, ತಮಿಳು, ತೆಲುಗು, ಮಲಯಾಳಂ, ಹಿಂದಿ ಸೇರಿದಂತೆ ಅನೇಕ ಭಾರತೀಯ ಭಾಷೆಗಳಲ್ಲಿ 48 ಸಾವಿರಕ್ಕೂ ಹೆಚ್ಚು ಹಾಡುಗಳನ್ನು ಹಾಡಿರುವ ಎಸ್. ಜಾನಕಿ, ಭಾವಪೂರ್ಣ ಗಾಯನ, ಧ್ವನಿಯ ವೈವಿಧ್ಯತೆ ಹಾಗೂ ಸಂಗೀತದ ಮೇಲಿನ ಅಪಾರ ಹಿಡಿತದಿಂದ ಅಪಾರ ಜನಪ್ರಿಯತೆ ಗಳಿಸಿದ್ದರು. ಶಾಸ್ತ್ರೀಯ ಸಂಗೀತ, ಜಾನಪದ, ಭಕ್ತಿಗೀತೆ, ಪ್ರೇಮಗೀತೆ, ಮಕ್ಕಳ ಹಾಡು ಸೇರಿದಂತೆ ಎಲ್ಲ ಶೈಲಿಯ ಗಾಯನದಲ್ಲೂ ಅವರು ತಮ್ಮದೇ ಆದ ಛಾಪು ಮೂಡಿಸಿದ್ದರು.

# ಹಾಡು ನಿಲ್ಲಿಸಿದ ಗಾನಕೋಗಿಲೆ...

ಮೈಸೂರು: ಭಾರತೀಯ ಚಿತ್ರರಂಗದ ದಿಗ್ಗಜ ಹಿನ್ನೆಲೆ ಗಾಯಕಿ, ದಕ್ಷಿಣ ಭಾರತದ 'ಗಾನಕೋಗಿಲೆ' ಎಂದೇ ಖ್ಯಾತರಾಗಿದ್ದ ಎಸ್. ಜಾನಕಿ ಅವರು ಶನಿವಾರ ವಯೋಸಹಜ ಅನಾರೋಗ್ಯದಿಂದ ಮೈಸೂರಿನ ಅಪೋಲೋ ಆಸ್ಪತ್ರೆಯಲ್ಲಿ ನಿಧನರಾದರು. ಅವರಿಗೆ 88 ವರ್ಷ ವಯಸ್ಸಾಗಿತ್ತು. ಅವರ ನಿಧನದಿಂದ ಭಾರತೀಯ ಸಂಗೀತ ಲೋಕವು ತನ್ನ ಅಪರೂಪದ ಧ್ವನಿಯನ್ನು ಕಳೆದುಕೊಂಡಿದೆ.

ಕೆಲವು ದಿನಗಳಿಂದ ವಯೋಸಹಜ ಆರೋಗ್ಯ ಸಮಸ್ಯೆಯಿಂದ ಚಿಕಿತ್ಸೆ ಪಡೆಯುತ್ತಿದ್ದ ಜಾನಕಿ ಅವರು ಮೈಸೂರಿನ ಅಪೋಲೋ ಆಸ್ಪತ್ರೆಯಲ್ಲಿ ಕೊನೆಯುಸಿರೆಳೆದರು. ಪುತ್ರ ಮುರಳಿ ಕೃಷ್ಣ ಅವರ ನಿಧನದ ಬಳಿಕ ಅವರು ಮೈಸೂರಿನಲ್ಲಿ ವಾಸವಾಗಿದ್ದರು ಎಂದು ತಿಳಿದುಬಂದಿದೆ.

1938ರ ಏಪ್ರಿಲ್ 23ರಂದು ಆಂಧ್ರಪ್ರದೇಶದ ಗುಂಟೂರು ಜಿಲ್ಲೆಯ ಪಲ್ಲಪಟ್ಲ ಗ್ರಾಮದಲ್ಲಿ ಜನಿಸಿದ್ದ ಎಸ್. ಜಾನಕಿ, ಯಾವುದೇ ಔಪಚಾರಿಕ ಸಂಗೀತ ಶಿಕ್ಷಣವಿಲ್ಲದಿದ್ದರೂ ತಮ್ಮ ಸಹಜ ಪ್ರತಿಭೆ, ಪರಿಶ್ರಮ ಹಾಗೂ ವಿಶಿಷ್ಟ ಧ್ವನಿಯಿಂದ ಭಾರತೀಯ ಚಿತ್ರರಂಗದ ಶ್ರೇಷ್ಠ ಹಿನ್ನೆಲೆ ಗಾಯಕಿಯರಲ್ಲಿ ಒಬ್ಬರಾಗಿ ಗುರುತಿಸಿ ಕೊಂಡರು.

1950ರ ದಶಕದ ಅಂತ್ಯದಲ್ಲಿ ಚಿತ್ರರಂಗ ಪ್ರವೇಶಿಸಿದ ಅವರು ಆರು ದಶಕಗಳಿಗೂ ಹೆಚ್ಚು ಕಾಲ ಸಂಗೀತ ಲೋಕವನ್ನು ಆಳಿದರು.



ಕನ್ನಡ, ತಮಿಳು, ತೆಲುಗು, ಮಲಯಾಳಂ, ಹಿಂದಿ ಸೇರಿದಂತೆ ಅನೇಕ ಭಾರತೀಯ ಭಾಷೆಗಳಲ್ಲಿ 48 ಸಾವಿರಕ್ಕೂ ಹೆಚ್ಚು ಹಾಡುಗಳನ್ನು ಹಾಡಿರುವ ಎಸ್. ಜಾನಕಿ, ಭಾವಪೂರ್ಣ ಗಾಯನ, ಧ್ವನಿಯ ವೈವಿಧ್ಯತೆ ಹಾಗೂ ಸಂಗೀತದ ಮೇಲಿನ ಅಪಾರ ಹಿಡಿತದಿಂದ ಅಪಾರ ಜನಪ್ರಿಯತೆ ಗಳಿಸಿದ್ದರು. ಶಾಸ್ತ್ರೀಯ ಸಂಗೀತ, ಜಾನಪದ, ಭಕ್ತಿಗೀತೆ, ಪ್ರೇಮಗೀತೆ, ಮಕ್ಕಳ ಹಾಡು ಸೇರಿದಂತೆ ಎಲ್ಲ ಶೈಲಿಯ ಗಾಯನದಲ್ಲೂ ಅವರು ತಮ್ಮದೇ ಆದ ಛಾಪು ಮೂಡಿಸಿದ್ದರು.

ಕನ್ನಡ ಚಿತ್ರರಂಗದೊಂದಿಗೆ ಜಾನಕಿ ಅವರ ನಂಟು ವಿಶೇಷವಾಗಿತ್ತು. ಜಿ.ಕೆ. ವೆಂಕಟೇಶ್, ವಿಜಯಭಾಸ್ಕರ್, ರಾಜನ್–ನಾಗೇಂದ್ರ, ಉಪೇಂದ್ರಕುಮಾರ್, ಇಳಯರಾಜ, ಹಂಸಲೇಖ ಸೇರಿದಂತೆ ಅನೇಕ ಸಂಗೀತ ನಿರ್ದೇಶಕರ ಸಂಗೀತದಲ್ಲಿ ಅವರು ಅಮರಗೀತೆಗಳನ್ನು ನೀಡಿದ್ದಾರೆ. ಡಾ. ರಾಜ್‌ಕುಮಾರ್, ಎಸ್.ಪಿ. ಬಾಲಸುಬ್ರಹ್ಮಣ್ಯಂ, ಪಿ.ಬಿ. ಶ್ರೀನಿವಾಸ್ ಸೇರಿದಂತೆ ಹಲವು ದಿಗ್ಗಜ ಗಾಯಕರೊಂದಿಗೆ ಹಾಡಿದ ಅನೇಕ ಗೀತೆಗಳು ಇಂದಿಗೂ ಸಂಗೀತಪ್ರಿಯರ ಹೃದಯದಲ್ಲಿ ಅಚ್ಚಳಿಯದೆ ಉಳಿದಿವೆ.


ತಮ್ಮ ಅದ್ವಿತೀಯ ಗಾಯನಕ್ಕಾಗಿ ಅವರು ನಾಲ್ಕು ರಾಷ್ಟ್ರೀಯ ಚಲನಚಿತ್ರ ಪ್ರಶಸ್ತಿಗಳು, ವಿವಿಧ ರಾಜ್ಯಗಳ 33ಕ್ಕೂ ಹೆಚ್ಚು ರಾಜ್ಯ ಪ್ರಶಸ್ತಿಗಳು, ಮೈಸೂರು ವಿಶ್ವವಿದ್ಯಾಲಯದ ಗೌರವ ಡಾಕ್ಟರೇಟ್ ಸೇರಿದಂತೆ ಹಲವು ಪ್ರತಿಷ್ಠಿತ ಗೌರವಗಳಿಗೆ ಭಾಜನರಾಗಿದ್ದರು. ಕರ್ನಾಟಕದೊಂದಿಗೆ ವಿಶೇಷ ಬಾಂಧವ್ಯ ಹೊಂದಿದ್ದ ಜಾನಕಿ ಅವರು ಕನ್ನಡದಲ್ಲಿ ಅತಿ ಹೆಚ್ಚು ಹಾಡುಗಳನ್ನು ಹಾಡಿದ ಹಿನ್ನೆಲೆ ಗಾಯಕಿಯರಲ್ಲಿ ಒಬ್ಬರಾಗಿದ್ದಾರೆ.

ಗಾನಕೋಗಿಲೆಯ ಅಗಲಿಕೆಗೆ ಸಂಗೀತ ಲೋಕ, ಚಿತ್ರರಂಗದ ಗಣ್ಯರು ಹಾಗೂ ಅಭಿಮಾನಿಗಳು ತೀವ್ರ ಸಂತಾಪ ವ್ಯಕ್ತಪಡಿಸಿದ್ದಾರೆ. ಅವರ ದೇಹ ಮರೆಯಾದರೂ, ಸಾವಿರಾರು ಅಮರ ಗೀತೆಗಳ ಮೂಲಕ ಎಸ್. ಜಾನಕಿ ಅವರ ಧ್ವನಿ ಎಂದೆಂದಿಗೂ ಸಂಗೀತಾಸಕ್ತರ ಮನಸ್ಸಿನಲ್ಲಿ ಜೀವಂತವಾಗಿರಲಿದೆ.

# ಸಚಿವರನ್ನೇ ಕೆಳಗಿಳಿಸಿದ ಕಂಡಕ್ಟರ್..!

ಬೆಂಗಳೂರು: ಸಾರಿಗೆ ಸಚಿವ ಬೈರತಿ ಸುರೇಶ್ ಅವರು ಶನಿವಾರ ರಾತ್ರಿ ಬಿಎಂಟಿಸಿ ಬಸ್ ಗಳಲ್ಲಿ ದಿಢೀರ್ ಪ್ರಯಾಣಿಸಿ ರಿಯಾಲಿಟಿ ಚೆಕ್ ನಡೆಸಿದರು.

ರಾತ್ರಿ 7.10 ಯಿಂದ 9.10 ರವರೆಗೆ ಜಯಮಹಲ್ ನಿಂದ ಟಿವಿ ಟವರ್, ಟಿವಿ ಟವರ್ ನಿಂದ ಆರ್ ಟಿ ನಗರ, ಆರ್ ಟಿ ನಗರದಿಂದ ಸಿಬಿಐ ರಸ್ತೆ, ಸಿಬಿಐ ಜಂಕ್ಷನ್ ನಿಂದ ಮುಂದಿನ ನಿಲ್ದಾಣ, ಸಿಬಿಐ ಸ್ಟಾಪ್ ನಿಂದ ಮಸೀದಿ ಸ್ಟಾಪ್ ನಿಂದ ಬಳ್ಳಾರಿ ಮುಖ್ಯರಸ್ತೆ, ಅಲ್ಲಿಂದ ಆಟೋದಲ್ಲಿ ಹೆಬ್ಬಾಳಕ್ಕೆ, ಹೆಬ್ಬಾಳದಿಂದ ಭೂಪಸಂದ್ರ, ಹೆಬ್ಬಾಳ ರಿಂಗ್ ರಸ್ತೆಯಿಂದ ಮಾನ್ಯತಾ ಟೆಕ್ ಪಾರ್ಕ್, ನಾಗವಾರ, ನಾಗವಾರದಿಂದ ಹೆಣ್ಣೂರು, ಹೆಣ್ಣೂರಿನಿಂದ ಹೆಣ್ಣೂರು ಬಂಡೆ, ಬಂಡೆಯಿಂದ



ಬೈರತಿ ಬಂಡೆ, ಬೈರತಿ ಬಂಡೆಯಿಂದ ಗೆದ್ದಲಹಳ್ಳಿವರೆಗೆ 10 ಕ್ಕೂ ಹೆಚ್ಚು ಬಸ್ ಗಳಲ್ಲಿ ಪ್ರಯಾಣ ಮಾಡಿ, ಬಿಎಂಟಿಸಿ ವ್ಯವಸ್ಥೆಯನ್ನು ಕಣ್ಣಾರೆ ಕಂಡು ಪರಿಶೀಲಿಸಿದರು.

ಮಾಸ್ಕ್ ಹಾಕಿ ಪ್ರಯಾಣ ಮಾಡಿದ್ದರಿಂದ ಬಸ್ ನಲ್ಲಿದ್ದ ಪ್ರಯಾಣಿಕರಿಗಾಗಲೀ ಅಥವಾ ಚಾಲಕ, ಕಂಡಕ್ಟರ್‌ಗೆ ಆಗಲೀ ಇವರು ಸಚಿವರು ಎಂಬುದು ಗಮನಕ್ಕೆ ಬರಲಿಲ್ಲ.

ಪ್ರತಿಯೊಂದು ಬಸ್ ಗೂ ನಿಗದಿತ ಹಣ ನೀಡಿ ಪ್ರಯಾಣಿಸಿದ ಸಚಿವರು, ಕೆಲವು ಪ್ರಯಾಣಿಕರೊಂದಿಗೆ ಬಸ್ ಸಂಚಾರದ ಬಗ್ಗೆ ವಿಚಾರಿಸಿದರು.

ಚಾಲಕ, ಕಂಡಕ್ಟರ್ ಅಮಾನತಿಗೆ ಸೂಚನೆ

ಜಯಮಹಲ್ ನಿಂದ ಸಾಗುತ್ತಿದ್ದ ಕೆಎ 57 ಎಫ್ 3372 ಸಂಖ್ಯೆಯ ಬಸ್ ಫನ್ ವರ್ಲ್ಡ್ ನಲ್ಲಿ ಸ್ಟಾಪ್ ನಲ್ಲಿ ಪ್ರಯಾಣಿಕರೊಬ್ಬರು ಕೈ ತೋರಿಸಿದರೂ ನಿಲುಗಡೆ ಮಾಡಲಿಲ್ಲ. ಹಿಂದಿನ ಬಸ್ ನಲ್ಲಿದ್ದ ಸಚಿವ ಬೈರತಿ ಸುರೇಶ್ ಅವರು, ಸದರಿ ಬಸ್ ನ ಕಂಡಕ್ಟರ್ ದಯಾನಂದ್ ಮತ್ತು ಚಾಲಕ ಮುಸ್ತಾಕ್ ಅವರನ್ನು ಅಮಾನತು ಮಾಡುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

ನಾಗಶೆಟ್ಟಿಯಲ್ಲಿ ಆಟೋ ಏರಿದ ಸಚಿವರು ಸುಮಾರು ಒಂದು ಕಿಲೋಮೀಟರ್ ಪ್ರಯಾಣಿಸಿ ಇಳಿದುಕೊಂಡರು. ಈ ಸಂದರ್ಭದಲ್ಲಿ ಆಟೋ ಮೀಟರ್ ನಲ್ಲಿ 30 ರೂಪಾಯಿ ತೋರಿಸಿದರೂ ಚಾಲಕ 36 ರೂಪಾಯಿ ನೀಡುವಂತೆ ಬೇಡಿಕೆ ಇಟ್ಟ. ಯಾಕೆ ಹೆಚ್ಚು ಎಂದು ಸಚಿವರು ಪ್ರಶ್ನಿಸಿದ್ದಕ್ಕೆ, ಮೀಟರ್ ಅನ್ನು ಸರಿಪಡಿಸುವುದಾಗಿ ತಿಳಿಸಿದ. ಕಡೆಗೆ 40 ರೂಪಾಯಿಗಳನ್ನು ನೀಡಿ ಸಚಿವರು ಕೆಳಗಿಳಿದರು. ಹೆಬ್ಬಾಳದಿಂದ ನಾಗಶೆಟ್ಟಿಹಳ್ಳಿಗೆ ಹೋಗುವ ಬಸ್ ಹತ್ತಿದ ಸಚಿವ ಬೈರತಿ ಸುರೇಶ್ ಅವರು ಬಸ್ ಸಂಚಾರ ಮಾಡುವಾಗ ಎರಡು ಟಿಕೆಟ್ ನೀಡುವಂತೆ ಕೇಳಿ, 100 ರೂಪಾಯಿ ನೋಟನ್ನು ನೀಡಿದರು. ಆಗ ಕಂಡಕ್ಟರ್ ಚಿಲ್ಲರೆ ಕೊಡಿ ಎಂದು ಕೇಳಿದರು. ಇದಕ್ಕೆ ಪ್ರತಿಯಾಗಿ ಸಚಿವರು ಚಿಲ್ಲರೆ ಇಲ್ಲ ಎಂದಿದ್ದಕ್ಕೆ, ತನ್ನ ಬಳಿ ಚಿಲ್ಲರೆ ಇಲ್ಲದಿರುವುದನ್ನು ಬ್ಯಾಗ್ ತೋರಿಸಿ ಹೇಳಿದ ಕಂಡಕ್ಟರ್, ಚಿಲ್ಲರೆ ಇಲ್ಲದಿದ್ದರೆ ಕೆಳಗೆ ಇಳಿಯುವಂತೆ ಸಚಿವರಿಗೆ ಸೂಚಿಸಿದ. ಇದಕ್ಕೆ ಮರುಮಾತಾನಾಡದೇ ಸಚಿವರು ಕೆಳಗಿಳಿದರು.

# ಬೋಟ್ ಮಗುಚಿ 15 ಭಾರತೀಯರ ಬಲಿ

ಹನೋಯ್: ವಿಯೆಟ್ನಾಂನ ಫು ಕ್ವಾಕ್ ದ್ವೀಪದ ಸಮೀಪ ಭಾರತೀಯ ಪ್ರವಾಸಿಗರನ್ನು ಕರೆದೊಯ್ಯುತ್ತಿದ್ದ ಸ್ಪೀಡ್‌ಬೋಟ್ ಮಗುಚಿಬಿದ್ದಿರುವ ಘಟನೆ ಸಂಭವಿಸಿದ್ದು, ರಕ್ಷಣಾ ಕಾರ್ಯಾಚರಣೆ ತೀವ್ರಗತಿಯಲ್ಲಿ ಮುಂದುವರಿದಿದೆ. ದಕ್ಷಿಣ ವಿಯೆಟ್ನಾಂ ಅಧಿಕಾರಿಗಳ ಪ್ರಾಥಮಿಕ ಮಾಹಿತಿಯ ಪ್ರಕಾರ, ಈ ದುರ್ಘಟನೆಯಲ್ಲಿ 15 ಭಾರತೀಯ ಪ್ರವಾಸಿಗರು ಮೃತಪಟ್ಟಿದ್ದು, 21 ಮಂದಿಯನ್ನು ಸುರಕ್ಷಿತವಾಗಿ ರಕ್ಷಿಸಲಾಗಿದೆ. ಘಟನೆಯ ಬಗ್ಗೆ ಭಾರತೀಯ ರಾಯಭಾರ ಕಚೇರಿ ಸ್ಥಳೀಯ ಆಡಳಿತದೊಂದಿಗೆ ನಿರಂತರ ಸಂಪರ್ಕದಲ್ಲಿದೆ.

ಹನೋಯ್‌ನಲ್ಲಿರುವ ಭಾರತೀಯ ರಾಯಭಾರ ಕಚೇರಿ ಈ ಕುರಿತು ಮಾಹಿತಿ ನೀಡಿ, ಅಪಘಾತದ ಬಳಿಕ ತುರ್ತು ನೆರವಿಗಾಗಿ ಎರಡು ನಿಯಂತ್ರಣ ಕೊಠಡಿಗಳನ್ನು ಸ್ಥಾಪಿಸಲಾಗಿದೆ ಎಂದು ತಿಳಿಸಿದೆ. ಮೃತರು ಮತ್ತು ಗಾಯಾಳುಗಳ ಕುರಿತು ಸಂಪೂರ್ಣ ಮಾಹಿತಿ ಸ್ಥಳೀಯ ಅಧಿಕಾರಿಗಳಿಂದ ಇನ್ನಷ್ಟೇ ದೃಢೀಕರಣಗೊಳ್ಳಬೇಕಿದೆ ಎಂದು ಹೇಳಿದೆ.

ಲಭ್ಯವಿರುವ ಮಾಹಿತಿಯಂತೆ, ಹಾನ್ ಮೆ ರುಟ್



ನ್ಗೋಯ್ ದ್ವೀಪದಿಂದ ಆನ್ ಥೋಯ್ ಬಂದರಿನತ್ತ ತೆರಳುತ್ತಿದ್ದ ಸ್ಪೀಡ್‌ಬೋಟ್ ಸಮುದ್ರದಲ್ಲಿ ಸುಮಾರು 400 ಮೀಟರ್ ದೂರದಲ್ಲಿ ಮಗುಚಿಬಿದ್ದಿದೆ. ದೋಣಿಯಲ್ಲಿ 32 ಭಾರತೀಯ ಪ್ರವಾಸಿಗರು ಹಾಗೂ ನಾಲ್ವರು ಸಿಬ್ಬಂದಿ ಇದ್ದರು ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಪ್ರಬಲ ಗಾಳಿ ಹಾಗೂ ಭಾರಿ ಅಲೆಗಳು ಇದ್ದುದರಿಂದ ದೋಣಿ ನಿಯಂತ್ರಣ ಕಳೆದುಕೊಂಡಿರುವ ಸಾಧ್ಯತೆ ಇದೆ ಎಂದು ಪ್ರಾಥಮಿಕ ತನಿಖೆಯಲ್ಲಿ ತಿಳಿದುಬಂದಿದೆ. ನೌಕಾಪಡೆ, ಕರಾವಳಿ ಭದ್ರತಾ ಪಡೆ ಹಾಗೂ ಸ್ಥಳೀಯ ರಕ್ಷಣಾ ತಂಡಗಳು ಶವಗಳ ಹೊರತೆಗೆದಿದೆ.

## ಶೀಘ್ರ ಗ್ರಾ.ಪಂ. ಚುನಾವಣೆ

ಬೆಂಗಳೂರು: ರಾಜ್ಯದ ಬಹುತೇಕ ಗ್ರಾಮ ಪಂಚಾಯಿತಿಗಳ ಆಡಳಿತಾವಧಿ ಮುಕ್ತಾಯಗೊಂಡಿರುವ ಹಿನ್ನೆಲೆಯಲ್ಲಿ ಅಕ್ಟೋಬರ್ ಅಥವಾ ನವೆಂಬರ್ ತಿಂಗಳಲ್ಲಿ ಗ್ರಾಮ ಪಂಚಾಯಿತಿ ಚುನಾವಣೆ ನಡೆಯುವ ಸಾಧ್ಯತೆ ಇದೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಬಿ. ಖಂಡ್ರೆ ತಿಳಿಸಿದ್ದಾರೆ.

ವಿಕಾಸಸೌಧದಲ್ಲಿರುವ ತಮ್ಮ ಕಚೇರಿಯಲ್ಲಿ ಶನಿವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕೆಲವು ಪಂಚಾಯಿತಿಗಳಲ್ಲಿ ಮೇಲ್ದರ್ಜೆಗೇರಿಸಿರುವ ಕಾರಣ ಕ್ಷೇತ್ರ ಪುನರ್‌ವಿಂಗಡಣೆ ಪ್ರಕ್ರಿಯೆ ಕೈಗೊಳ್ಳಬೇಕಾಗಿದೆ. ಈ ತಿಂಗಳ ಅಂತ್ಯ ಅಥವಾ ಮುಂದಿನ ತಿಂಗಳಲ್ಲಿ ಆ ಪ್ರಕ್ರಿಯೆ ಪೂರ್ಣಗೊಳಿಸಿ, ಮೀಸಲಾತಿ ನಿಗದಿಪಡಿಸಿ ರಾಜ್ಯ ಚುನಾವಣಾ ಆಯೋಗಕ್ಕೆ ಸಲ್ಲಿಸಲಾಗುವುದು. ಬಳಿಕ ಆಯೋಗವು 45 ದಿನಗಳೊಳಗೆ ಚುನಾವಣೆ ನಡೆಸಲಿದೆ ಎಂದು ತಿಳಿಸಿದರು.

ನಗರ ಸ್ಥಳೀಯ ಸಂಸ್ಥೆಗಳ ಚುನಾವಣೆ ವಿಳಂಬವಾಗಿರುವ ಕುರಿತು ಪ್ರತಿಕ್ರಿಯಿಸಿದ ಅವರು, ರಾಜ್ಯದಲ್ಲಿ ಮತದಾರರ ಪಟ್ಟಿ ವಿಶೇಷ ಪರಿಷ್ಕರಣೆ (ಎಸ್‌ಐಆರ್) ಪ್ರಕ್ರಿಯೆ ನಡೆಯುತ್ತಿರುವ ಹಿನ್ನೆಲೆಯಲ್ಲಿ ಸರ್ಕಾರಿ ಸಿಬ್ಬಂದಿ ಅದರಲ್ಲಿ ನಿರತರಾಗಿದ್ದು, ಆದ್ದರಿಂದ ಕಾಲಾವಕಾಶ ಕೋರಲಾಗಿದೆ ಎಂದರು. ಗ್ರಾಮ ಸ್ವರಾಜ್ಯದ ಪರಿಕಲ್ಪನೆಯನ್ನು ಮಹಾತ್ಮ ಗಾಂಧೀಜಿ ಪ್ರತಿಪಾದಿಸಿದ್ದರು. ಕರ್ನಾಟಕದಲ್ಲಿ 1980ರಲ್ಲಿ ನಸೀರ್ ಸಾಬ್ ಅಧಿಕಾರ ವಿಕೇಂದ್ರೀಕರಣಕ್ಕೆ ನಾಂದಿ ಹಾಡಿದೆ.


# 'ಕಷ್ಟ ಹೇಳಿಕೊಂಡು ಬರುವ ಜನರಿಗೆ ಮಾನವೀಯತೆಯಿಂದ ಸ್ಪಂದಿಸಿ'

ಬೆಂಗಳೂರು: "ಕಷ್ಟ ಹೇಳಿಕೊಂಡು ಬರುವ ಜನರಿಗೆ ಮಾನವೀಯತೆಯಿಂದ ಸ್ಪಂದಿಸಿ, ಕಾನೂನು ಚೌಕಟ್ಟಿನಲ್ಲಿ ಜನರ ಸಮಸ್ಯೆಗೆ ಪರಿಹಾರ ಹುಡುಕಿ" ಎಂದು ಸಿಎಂ ಡಿ ಕೆ ಶಿವಕುಮಾರ್ ಅವರು ತಿಳಿಸಿದರು.

ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ ವತಿಯಿಂದ ಅರಮನೆ ಮೈದಾನದಲ್ಲಿ ಶನಿವಾರ ನಡೆದ ನಮ್ಮಭಿಮಾನದ ಅಭಿನಂದನಾ ಸಮಾರಂಭ ಕಾರ್ಯಕ್ರಮದಲ್ಲಿ ಸಿಎಂ ಡಿ ಕೆ ಶಿವಕುಮಾರ್ ಅವರು ಮಾತನಾಡಿದರು.

"ಜನರು ದೇವರ ಬಳಿ ತಮಗೆ ಬೇಕಾಗಿರುವುದನ್ನು ಪ್ರಾರ್ಥಿಸಲು ದೇವಾಲಯಗಳಿಗೆ ಹೋಗುತ್ತಾರೆ. ಅದೇ ರೀತಿ ಜನರು ತಮ್ಮ ಕಷ್ಟಗಳಿಗೆ ಪರಿಹಾರ ಪಡೆಯಲು ಸರ್ಕಾರಿ ನೌಕರರು, ಶಾಸಕರು ಹಾಗೂ ಮಂತ್ರಿಗಳ ಬಳಿ ಬರುತ್ತಾರೆ. ನಾವು ಎಷ್ಟು ಶ್ರದ್ಧೆಯಿಂದ ಅವರ ಸೇವೆ ಮಾಡುತ್ತೇವೆ ಎಂಬುದು ಮುಖ್ಯ. ನೀವೆಲ್ಲರೂ ವಿಶ್ವರೂಪ ದರ್ಶನದ ಪ್ರತಿಮೆ ನೀಡಿ ನನಗೆ ಸನ್ಮಾನ ಮಾಡಿದಿರಿ. ಪರಮೇಶ್ವರ್ ಅವರಿಗೆ ಬುದ್ಧನ ಪ್ರತಿಮೆ ನೀಡಿದಿರಿ. ವಿಶ್ವರೂಪ ದರ್ಶನ ಬರುವುದು ಧರ್ಮದ ಪರವಾದ ಯುದ್ಧಕ್ಕೆ ನಿಂತಾಗ. ದುರ್ಯೋಧನ ಯುದ್ಧ ಮಾಡುವ ಮುನ್ನ ತಾಯಿಯ ಆಶೀರ್ವಾದ ಪಡೆಯಲು ಹೋದಾಗ ಆ ತಾಯಿ ಎಲ್ಲಿ ಧರ್ಮ ಇರುತ್ತದೆಯೋ ಅಲ್ಲಿ ಗೆಲುವು ಇದ್ದೇ ಇರುತ್ತದೆ ಎಂದು ಆಶೀರ್ವಾದ ಮಾಡುತ್ತಾಳೆ. ಅರ್ಜುನ ಯುದ್ಧದ ನಡುವೆ ತನ್ನ ಅಸ್ತ್ರವನ್ನು ಇಳಿಸಿದಾಗ ಶ್ರೀಕೃಷ್ಣ ಪರಮಾತ್ಮ ವಿಶ್ವರೂಪ ದರ್ಶನ ತೋರುತ್ತಾನೆ" ಎಂದರು.

"ನೊಂದು ಬಂದ ಜನರಿಗೆ ಸರಿಯಾದ ರೀತಿಯಲ್ಲಿ ಸೇವೆ ಮಾಡುವುದು ನಮ್ಮ ನಿಮ್ಮ ಕರ್ತವ್ಯ. ನೀವೆಲ್ಲರೂ ಕರ್ನಾಟಕದ ರಾಯಭಾರಿಗಳು. ನೀವು ಸಾರ್ವಜನಿಕರ ಬದುಕಿನಲ್ಲಿ ಸೇವೆ ಮಾಡುತ್ತಿದ್ದೀರಿ. ಈ ಅಧಿಕಾರ ಕೇವಲ ನನ್ನದಲ್ಲ, ನಿಮ್ಮೆಲ್ಲರದ್ದು. ಹುದ್ದೆಯಿಂದ ಯಾರೂ ದೊಡ್ಡವರಾಗಲು ಸಾಧ್ಯವಿಲ್ಲ. ಆ ಹುದ್ದೆಗೆ ಯಾವ ರೀತಿ ಗೌರವ ಕಾಪಾಡುತ್ತೇವೆ ಎಂಬುದು ಮುಖ್ಯ. ಪದವಿ ಮನುಷ್ಯನ ಹಿಂದೆ ಇರುತ್ತದೆ. ಆದರೆ ಮನುಷ್ಯತ್ವದ ಗುಣ ನಮ್ಮ ಮುಂದೆ ಕಾಣಲು ಅವಕಾಶವಿದೆ" ಎಂದು ತಿಳಿಸಿದರು.



"ನಾನು ಅಧಿಕಾರ ಸ್ವೀಕಾರ ಮಾಡಿದ ಬಳಿಕ ಹೊಸ ಇಲಾಖೆ ರಚನೆ ಮಾಡಿದ್ದೇನೆ. ನಮ್ಮ ರಾಜ್ಯದಲ್ಲಿ ಅನೇಕ ಹೋರಾಟಗಳು ನಡೆಯುತ್ತವೆ. ನೀವು ನಮ್ಮ ಬೇಡಿಕೆ ನಮ್ಮ ಮುಂದೆ ಇಟ್ಟಾಗ, ಇದನ್ನು ಕಾನೂನು ಚೌಕಟ್ಟಿನಲ್ಲಿ ಹೇಗೆ ಬಗೆಹರಿಸಬಹುದು, ಆರ್ಥಿಕ ಪರಿಸ್ಥಿತಿ ಏನು ಎಂದು ಪರಿಶೀಲನೆ ಮಾಡಲಾಗುವುದು. ಹೀಗೆ ಜನಸಾಮಾನ್ಯರ ನೋವು ಬಗೆಹರಿಸಲು ಪ್ರಜಾಸೇವೆ ಎಂಬ ಪ್ರತ್ಯೇಕ ಸಚಿವಾಲಯ ಪ್ರಾರಂಭಕ್ಕೆ ತೀರ್ಮಾನಿಸಲಾಗಿದೆ. ಎಲ್ಲಾ ಮಂತ್ರಿಗಳು ಮೊದಲನೇ ಹಾಗೂ ಮೂರನೇ ಶನಿವಾರ ಒಂದೊಂದು ತಾಲ್ಲೂಕು ಕಚೇರಿಗೆ ಹೋಗಿ ಅಲ್ಲಿನ ಜನರ ಸಮಸ್ಯೆ ಆಲಿಸಬೇಕು. ಜನರ ಮನೆ ಬಾಗಿಲಿಗೆ ಸರ್ಕಾರವನ್ನು ಕೊಂಡೊಯ್ಯಲು ಈ ತೀರ್ಮಾನ ಮಾಡಲಾಗಿದೆ. ನೀವುಗಳು ಯಾವಾಗ ಜನರ ಸಮಸ್ಯೆಯನ್ನು ಪ್ರಾಮಾಣಿಕವಾಗಿ ಬಗೆಹರಿಸುತ್ತೀರಾ ಆಗ ಯಶಸ್ಸು ಸಾಧಿಸಲು ಸಾಧ್ಯ" ಎಂದು ತಿಳಿಸಿದರು.

"ದೀಪದ ಬೆಳಕು ನಮ್ಮೆಲ್ಲರಿಗೂ ಕಾಣುತ್ತದೆ. ಆದರೆ ದೀಪದ ಹಿಂದೆ ಇರುವ ಬತ್ತಿ ಹಾಗೂ ಎಣ್ಣೆ ಯಾರಿಗೂ ಕಾಣುವುದಿಲ್ಲ. ನಾವು ನಿಸ್ವಾರ್ಥ ಸೇವೆ ಮಾಡಿದಾಗ, ನಮ್ಮ ಕರ್ತವ್ಯಕ್ಕೆ ಗೌರವವಿರುತ್ತದೆ. ಅವಕಾಶ ಸಿಕ್ಕಾಗ ಪುಣ್ಯ ಕಾರ್ಯ ಮಾಡಬೇಕು. ಮಗ ತಂದೆಗೆ ಸೇವೆ ಮಾಡುವುದು, ತಂದೆ ಕುಟುಂಬ ಕಾಪಾಡುವುದು ಕರ್ತವ್ಯ. ರಾಜ, ಮಂತ್ರಿ, ನೌಕರರು ಜನಸೇವೆಯನ್ನು ದೇಶಸೇವೆ ಎಂದು ಭಾವಿಸಿ ಮಾಡಿದಾಗ ಮಾತ್ರ ಗೌರವ ಸಿಕ್ಕಂತಾಗುತ್ತದೆ.

ಜನರ ಸಮಸ್ಯೆ ಬಗೆಹರಿಸಲು ಮಾರ್ಗ ಹುಡುಕಬೇಕೇ ಹೊರತು, ಕೊಂಕು ಹುಡುಕಿ ಅವರನ್ನು ತಿರುಗಿಸಬಾರದು. ಕಾನೂನು ಚೌಕಟ್ಟಿನಲ್ಲಿ ಬಡ ಜನರಿಗೆ ಯಾವ ರೀತಿ ಸಹಾಯ ಮಾಡಬಹುದು ಎಂಬುದನ್ನು ಗಮನದಲ್ಲಿಟ್ಟುಕೊಂಡು ಸೇವೆ ಮಾಡಿ. ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ನೀವುಗಳು ಆಧಾರಸ್ತಂಭ. ನೀವು ನಾವೆಲ್ಲ ಸೇರಿ ಒಟ್ಟಾಗಿ ಕೆಲಸ ಮಾಡಬೇಕು" ಎಂದು ಕರೆ ನೀಡಿದರು.

"ಮರಕ್ಕೆ ಬೇರು ಮುಖ್ಯ ಅದರಂತೆ ನಂಬಿಕೆ ಮನುಷ್ಯನಿಗೆ ಮುಖ್ಯ. ನಿಮ್ಮ ನಮ್ಮ ಸಂಬಂಧ ನಂಬಿಕೆಯ ಮೇಲೆ ನಡೆಯಬೇಕು. ನಮ್ಮ ಮೇಲೆ ನಂಬಿಕೆಯನ್ನಿಡಿ.

ದೇವರು ವರ ಹಾಗೂ ಶಆಪ ನೀಡುವುದಿಲ್ಲ. ಕೇವಲ ಅವಕಾಶ ಮಾತ್ರ ನೀಡುತ್ತಾನೆ. ಕೊಟ್ಟ ಅಕಾಶದಲ್ಲಿ ನಾವು ಯಾವ ರೀತಿ ಸೇವೆ ಮಾಡುತ್ತೇವೆ ಎಂಬುದು ಮುಖ್ಯ. ನಮಗೆ ಸಿಕ್ಕಿರುವ ಅವಕಾಶದಲ್ಲಿ ನಿಮ್ಮ ಹೃದಯ ಗೆಲ್ಲುವ ಕೆಲಸ ಮಾಡಲಾಗುವುದು. ನಿಮ್ಮ ಪ್ರೀತಿ, ವಿಶ್ವಾಸ ನಮ್ಮ ಮೇಲೆ ಹೀಗೆ ಇರಲಿ. ನಾವು ನೀವು ಜೀವನದಲ್ಲಿ ಹೋರಾಟ ಮಾಡಿಕೊಂಡೆ ಬಂದವರು. ನೀವು ನಿಮ್ಮದೇ ಆದ ಹೋರಾಟ ಮಾಡುತ್ತಿದ್ದೀರಿ. ಸಾಧನೆ ಇಲ್ಲದೇ ಸತ್ತರೆ ಸಾವಿಗೆ ಅವಮಾನ, ಆದರ್ಶ ಇಲ್ಲದೇ ಬದುಕಿದರೆ ಬದುಕಿಗೆ ಅವಮಾನ. ಸಾಧನೆ ಹಾಗೂ ಆದರ್ಶ ಎರಡೂ ಇರಬೇಕು" ಎಂದು ತಿಳಿಸಿದರು.

3S ಭಾರತ ಸಾರಥಿ
BHARATHA SARATHI KANNADA DAILY NEWS PAPER
12/07/2026
ಬೆಂಗಳೂರು । ಬೆಂ.ಗ್ರಾಮಾಂತರ । ತುಮಕೂರು । ಮೈಸೂರು । ಮಂಡ್ಯ । ರಾಮನಗರ । ಕೋಲಾರ । ಚಿಕ್ಕಬಳ್ಳಾಪುರ । ಚಿತ್ರದುರ್ಗ । ದಾವಣಗೆರೆ । ಶಿವಮೊಗ್ಗ । ಮಂಗಳೂರು । ಉಡುಪಿ । ಹುಬ್ಬಳ್ಳಿ । ಮಡಿಕೇರಿ । ಚಿಕ್ಕಮಗಳೂರು । ಹಾಸನ । ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# ಪತ್ರಿಕೆಗಳು ಮನೆ, ಮನ, ಮನಸ್ಸುಗಳನ್ನು ತಲುಪಿಸುವ ಸೇತುವೆಗಳು: ಶ್ರೀ ನಿರ್ಮಲಾನಂದನಾಥ ಸ್ವಾಮೀಜಿ

ಬೆಂಗಳೂರು: ಪತ್ರಿಕೆಗಳು ಸಮಾಜದ ಜವಾಬ್ದಾರಿಯುತ ಸೇತುವೆಗಳಾಗಿದ್ದು, ಮನೆ, ಮನ ಹಾಗೂ ಮನಸ್ಸುಗಳನ್ನು ತಲುಪಿಸುವ ಮಹತ್ವದ ಕಾರ್ಯವನ್ನು ನಿರ್ವಹಿಸುತ್ತಿವೆ ಎಂದು ಆದಿಚುಂಚನಗಿರಿ ಮಹಾಸಂಸ್ಥಾನದ ಪೀಠಾಧ್ಯಕ್ಷರಾದ ಶ್ರೀ ಶ್ರೀ ಶ್ರೀ ನಿರ್ಮಲಾನಂದನಾಥ ಸ್ವಾಮೀಜಿ ಹೇಳಿದರು.

ವಿಜಯನಗರದ ಆದಿಚುಂಚನಗಿರಿ ಕಲ್ಯಾಣ ಮಂಟಪದಲ್ಲಿ ಬೆಂಗಳೂರು ನಗರ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘ ಆಯೋಜಿಸಿದ್ದ ಪತ್ರಿಕಾ ದಿನಾಚರಣೆ ಹಾಗೂ ಹಿರಿಯ ಪತ್ರಕರ್ತರ ಸನ್ಮಾನ ಸಮಾರಂಭದಲ್ಲಿ ದಿವ್ಯ ಸಾನಿಧ್ಯ ವಹಿಸಿ ಮಾತನಾಡಿದ ಅವರು, ಪತ್ರಿಕೋದ್ಯಮವು ಸಮಾಜದ ಅಭಿವೃದ್ಧಿಗೆ ಪ್ರಮುಖ ಕೊಡುಗೆ ನೀಡುತ್ತಿದೆ ಎಂದು ಹೇಳಿದರು.

ಮಹಾಭಾರತದ ಕಾಲದಿಂದಲೂ ವಾರ್ತೆಗೆ ವಿಶೇಷ ಮಹತ್ವವಿದ್ದು, ಆಧುನಿಕ ಯುಗದಲ್ಲಿ ಕೃತಕ ಬುದ್ಧಿಮತ್ತೆ (ಎಐ) ಸೇರಿದಂತೆ ಹೊಸ ತಂತ್ರಜ್ಞಾನಗಳು ವೇಗವಾಗಿ ಬೆಳೆಯುತ್ತಿರುವ ಹಿನ್ನೆಲೆಯಲ್ಲಿ ಪತ್ರಕರ್ತರು ತಂತ್ರಜ್ಞಾನದೊಂದಿಗೆ ಹೆಜ್ಜೆ ಹಾಕಬೇಕಾಗಿದೆ. ಆದರೆ ಪತ್ರಿಕೋದ್ಯಮದ ಮೌಲ್ಯಗಳು, ನೈತಿಕತೆ ಮತ್ತು ಸಾಮಾಜಿಕ



ಜವಾಬ್ದಾರಿಯನ್ನು ಯಾವುದೇ ಕಾರಣಕ್ಕೂ ಮರೆಯಬಾರದು ಎಂದು ಸಲಹೆ ನೀಡಿದರು.

ತತ್ವಜ್ಞಾನಿ ಡಿ.ವಿ. ಗುಂಡಪ್ಪ ಅವರ ವಿಚಾರಗಳನ್ನು ಉಲ್ಲೇಖಿಸಿದ ಅವರು, ಜೀವನದಲ್ಲಿ ಸನ್ಮಾರ್ಗವನ್ನು ಗುರುಗಳಿಂದ ಕಲಿಯಬೇಕು. ಆದಿಚುಂಚನಗಿರಿ ಮಠವು ಸದಾ ಪತ್ರಿಕೆ ಹಾಗೂ ಪತ್ರಕರ್ತರನ್ನು ಗೌರವಿಸುತ್ತಾ ಬಂದಿದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಆಶೀರ್ವಚನ ನೀಡಿದ ಶ್ರೀ ಶ್ರೀ ಸೌಮ್ಯನಾಥ ಸ್ವಾಮೀಜಿ, ಸಮಾಜದ ಅಂಕುಡೊಂಕುಗಳನ್ನು ತಿದ್ದಿ ಜನರಿಗೆ ಸತ್ಯವನ್ನು ತಲುಪಿಸುವ ಮಹತ್ತರ ಜವಾಬ್ದಾರಿ ಮಾಧ್ಯಮದ ಮೇಲಿದೆ ಎಂದು ಹೇಳಿದರು. ಕ್ಷಣಾರ್ಧದಲ್ಲಿ ವಿಶ್ವದ ಬೆಳವಣಿಗೆಗಳನ್ನು ಜನರಿಗೆ ತಲುಪಿಸುವ ಶಕ್ತಿ ಮಾಧ್ಯಮಕ್ಕಿದ್ದು, ಸಾರ್ವಜನಿಕ ಹಿತಕ್ಕಾಗಿ ಪತ್ರಕರ್ತರು ಕಾರ್ಯನಿರ್ವಹಿಸಬೇಕು ಎಂದು ಕರೆ ನೀಡಿದರು.

ಕಾರ್ಯಕ್ರಮವನ್ನು ಕೇಂದ್ರ ರೈಲ್ವೆ ಹಾಗೂ ಜಲಶಕ್ತಿ ರಾಜ್ಯ ಸಚಿವ ವಿ. ಸೋಮಣ್ಣ ಉದ್ಘಾಟಿಸಿದರು. ಜಲಸಂಪನ್ಮೂಲ ಸಚಿವ ರಾಮಲಿಂಗಾರೆಡ್ಡಿ, ವಿಧಾನಪರಿಷತ್ ಸದಸ್ಯ ಜವರಾಯಿಗೌಡ, ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು, ಪ್ರಧಾನ ಕಾರ್ಯದರ್ಶಿ ಬಿ.ಸಿ. ಲೋಕೇಶ್, ಖಜಾಂಚಿ ವಾಸುದೇವ ಹೊಳ್ಳ, ಭಾರತೀಯ ಕಾರ್ಯನಿರತ ಪತ್ರಕರ್ತರ ಸಂಘದ ಬಿ.ವಿ. ಮಲ್ಲಿಕಾರ್ಜುನಯ್ಯ, ಬೆಂಗಳೂರು ನಗರ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಸೋಮಶೇಖರ್ ಗಾಂಧಿ ಸೇರಿದಂತೆ ಹಲವು ಗಣ್ಯರು ಭಾಗವಹಿಸಿದ್ದರು.

ಈ ಸಂದರ್ಭದಲ್ಲಿ ಮಾತನಾಡಿದ ಸಚಿವ ರಾಮಲಿಂಗಾರೆಡ್ಡಿ, ಪತ್ರಿಕಾ ಕ್ಷೇತ್ರದಲ್ಲಿ ಸೇವೆ ಸಲ್ಲಿಸಿರುವ ಹಿರಿಯ ಪತ್ರಕರ್ತರನ್ನು ಗೌರವಿಸುವುದು ಶ್ಲಾಘನೀಯ ಕಾರ್ಯವಾಗಿದೆ. ಬೆಂಗಳೂರು ನಗರ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘಕ್ಕೆ ಸುಸಜ್ಜಿತ ಕಟ್ಟಡ ನಿರ್ಮಾಣಕ್ಕೆ ಮುಖ್ಯಮಂತ್ರಿ ಮೂಲಕ ನೆರವು ಒದಗಿಸಲಾಗುವುದು ಎಂದು ಭರವಸೆ ನೀಡಿದರು.

ಶಿವಾನಂದ ತಗಡೂರು ಮಾತನಾಡಿ, ಪತ್ರಕರ್ತರು ಸಿಹಿ ನೀರಿನಂತೆ ಸಮಾಜಕ್ಕೆ ಅಗತ್ಯವಾಗಿದ್ದು, ಸಂಘಟಿತರಾಗಿ ವೃತ್ತಿಯ ಗೌರವ ಮತ್ತು ಗಟ್ಟಿತನವನ್ನು ಉಳಿಸಿಕೊಳ್ಳಬೇಕು ಎಂದರು. ಬಿ.ಸಿ. ಲೋಕೇಶ್ ಮಾತನಾಡಿ, ಮಂಗಳೂರು ಸಮಾಚಾರ್ ಪತ್ರಿಕೆಯ ಸ್ಥಾಪನಾ ದಿನವನ್ನು ಪತ್ರಿಕಾ ದಿನಾಚರಣೆಯಾಗಿ ಆಚರಿಸಲಾಗುತ್ತಿದೆ ಎಂದು ತಿಳಿಸಿದರು. ಸೋಮಶೇಖರ್ ಗಾಂಧಿ ಮಾತನಾಡಿ, ಬೆಂಗಳೂರು ನಗರ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘಕ್ಕೆ ಕಚೇರಿ ಜಾಗ ಮಂಜೂರು ಮಾಡಬೇಕು ಹಾಗೂ ವಾರಪತ್ರಿಕೆ ಮತ್ತು ಮಾಸಪತ್ರಿಕೆಗಳಿಗೆ ಸರ್ಕಾರಿ ಜಾಹೀರಾತು ನೀಡಬೇಕು ಎಂದು ಸರ್ಕಾರವನ್ನು ಆಗ್ರಹಿಸಿದರು.

ಕಾರ್ಯಕ್ರಮದಲ್ಲಿ ಪತ್ರಿಕಾ ಕ್ಷೇತ್ರದಲ್ಲಿ ದೀರ್ಘಕಾಲ ಸೇವೆ ಸಲ್ಲಿಸಿರುವ ಹಿರಿಯ ಸಿನಿಮಾ ಛಾಯಾಗ್ರಾಹಕ ಕೆ.ಎಸ್. ನಾಗೇಶ್ ಕುಮಾರ್, ವಿಜಯವಾಣಿ ಸಹಾಯಕ ಸಂಪಾದಕ ಪ್ರಭುದೇವ ಶಾಸ್ತ್ರಿಮಠ, ಟಿವಿ9 ನಿರೂಪಕ ರಂಗನಾಥ ಭಾರದ್ವಾಜ್, ವಿಜಯಕರ್ನಾಟಕ ವಿಶೇಷ ಪ್ರತಿನಿಧಿ ಕೀರ್ತಿ ಪ್ರಸಾದ್, ನ್ಯೂಸ್18 ಇನ್‌ಪುಟ್ ಎಡಿಟರ್ ಮಧು ಎಂ. ಉತ್ತವಳ್ಳಿ, ಹಿರಿಯ ಪತ್ರಕರ್ತ ಸಂಗಮದೇವ್, ಸ್ತ್ರೀ ಜಾಗೃತಿ ಪತ್ರಿಕೆ ಸಂಪಾದಕಿ ಹೆಚ್.ಸಿ. ಶೋಭಾ, ಸಂಜೆ ಸಮಾಚಾರ್ ಸಂಪಾದಕ ಬಿ.ಎಸ್. ಮಹೇಂದ್ರ, ಪೊಲೀಸ್ ನ್ಯೂಸ್ ಉಪ ಸಂಪಾದಕ ವೀರಣ್ಣಗೌಡ ಹಾಗೂ ಅಮೂಲ್ಯವಾಣಿ ಪ್ರಧಾನ ಸಂಪಾದಕ ಜಿ.ವಿ. ರಾಮರಾವ್ ಅವರನ್ನು ಸನ್ಮಾನಿಸಿ ಗೌರವಿಸಲಾಯಿತು.

ಸಂಘದ ಪ್ರಧಾನ ಕಾರ್ಯದರ್ಶಿ ಆರ್. ಜಯಕುಮಾರ್ ಗೌಡ, ರಾಜ್ಯ ಸಮಿತಿ ಸದಸ್ಯ ಹೆಚ್.ಆರ್. ರವೀಶ್, ಉಪಾಧ್ಯಕ್ಷರಾದ ಹೆಚ್.ಎಸ್. ಪರಿಮಳ, ಹೆಚ್.ಕೆ. ಬಸವರಾಜು, ಡಾ. ಕೆ.ಎಸ್. ಸ್ವಾಮಿ, ಕಾರ್ಯದರ್ಶಿಗಳಾದ ಕೆ.ಎಲ್. ಲೋಕೇಶ್, ಡಿ.ಎಸ್. ಗೋದಾವರಿ, ಕೆ. ಹರೀಶ್, ಖಜಾಂಚಿ ಟಿ. ಮೋಹನ್ ಸೇರಿದಂತೆ ಪದಾಧಿಕಾರಿಗಳು, ಕಾರ್ಯಕಾರಿ ಸಮಿತಿ ಸದಸ್ಯರು ಹಾಗೂ ಗಂಡಸಿ ಸದಾನಂದ ಸ್ವಾಮಿ ಸೇರಿದಂತೆ ಅನೇಕ ಪತ್ರಕರ್ತರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

ಪತ್ರಿಕಾ ದಿನಾಚರಣೆ ಅಂಗವಾಗಿ ನಡೆದ ಈ ಸಮಾರಂಭದಲ್ಲಿ ಹಿರಿಯ ಪತ್ರಕರ್ತರ ಸೇವೆಯನ್ನು ಸ್ಮರಿಸಿ ಗೌರವ ಸಲ್ಲಿಸಲಾಗಿದ್ದು, ಪತ್ರಿಕೋದ್ಯಮದ ಮೌಲ್ಯಗಳು ಮತ್ತು ಸಾಮಾಜಿಕ ಹೊಣೆಗಾರಿಕೆಯ ಕುರಿತು ಹಲವು ಗಣ್ಯರು ಅಭಿಪ್ರಾಯ ವ್ಯಕ್ತಪಡಿಸಿದರು.

# ಎಲ್‌ಆಂಡ್‌ಟಿ ಫೈನಾನ್ಸ್‌ಗೆ ಮೊದಲ ತ್ರೈಮಾಸಿಕದಲ್ಲಿ ರೂ.902 ಕೋಟಿ ಲಾಭ

ಬೆಂಗಳೂರು

ದೇಶದ ಪ್ರಮುಖ ಬ್ಯಾಂಕೇತರ ಹಣಕಾಸು ಸಂಸ್ಥೆಗಳಲ್ಲಿ ಒಂದಾದ ಎಲ್‌ಆಂಡ್‌ಟಿ ಫೈನಾನ್ಸ್ ಲಿಮಿಟೆಡ್ (ಎಲ್‌ಟಿಎಫ್) 2026–27ನೇ ಹಣಕಾಸು ವರ್ಷದ ಮೊದಲ ತ್ರೈಮಾಸಿಕದಲ್ಲಿ (ಏಪ್ರಿಲ್–ಜೂನ್) ಹಿಂದೆಂದೂ ಕಾಣದ ರೂ.902 ಕೋಟಿ ಕ್ರೋಢೀಕೃತ ತೆರಿಗೆ ನಂತರದ ಲಾಭ (ಪಿಎಟಿ) ದಾಖಲಿಸಿದ್ದು, ಇದು ಕಳೆದ ವರ್ಷದ ಇದೇ ಅವಧಿಗೆ ಹೋಲಿಸಿದರೆ ಶೇ.29ರಷ್ಟು ಹೆಚ್ಚಳವಾಗಿದೆ.

ಕಂಪನಿಯು ಇದೇ ಅವಧಿಯಲ್ಲಿ ತನ್ನ ಒಟ್ಟು ಸಾಲ ಪುಸ್ತಕವನ್ನು ದಾಖಲೆಯ ರೂ.1,29,634 ಕೋಟಿಗೆ ವಿಸ್ತರಿಸಿದ್ದು, ವರ್ಷದಿಂದ ವರ್ಷಕ್ಕೆ ಶೇ.27ರಷ್ಟು ಬೆಳವಣಿಗೆ ಸಾಧಿಸಿದೆ. ರೀಟೇಲ್ ಸಾಲ ಪುಸ್ತಕವು ರೂ.1,27,535 ಕೋಟಿಗೆ ತಲುಪಿದ್ದು, ಶೇ.28ರಷ್ಟು ಏರಿಕೆ ಕಂಡಿದೆ.

ಮೊದಲ ತ್ರೈಮಾಸಿಕದಲ್ಲಿ ಕಂಪನಿಯ ರೀಟೇಲ್ ಸಾಲ ವಿತರಣೆ ರೂ.23,852 ಕೋಟಿಗೆ ತಲುಪಿದ್ದು, ಇದು ಕಳೆದ ವರ್ಷದ ಇದೇ ಅವಧಿಗೆ ಹೋಲಿಸಿದರೆ ಶೇ.36ರಷ್ಟು ಹೆಚ್ಚಾಗಿದೆ. ಡಿಜಿಟಲ್ ತಂತ್ರಜ್ಞಾನ ಮತ್ತು ಕೃತಕ ಬುದ್ಧಿಮತ್ತೆ (ಎಐ) ಆಧಾರಿತ ಸಾಲ ಸೇವೆಗಳನ್ನು ಮತ್ತಷ್ಟು ಬಲಪಡಿಸುವ ನಿಟ್ಟಿನಲ್ಲಿ ಕಂಪನಿ ತಂತ್ರಜ್ಞಾನ ಅನುಷ್ಠಾನಕ್ಕೆ ವೇಗ ನೀಡಿದೆ.

ಗ್ರಾಹಕ ಸೇವೆಗಳಿಗಾಗಿ ಅಭಿವೃದ್ಧಿಪಡಿಸಿರುವ ಪ್ಲಾನೆಟ್ ಮೊಬೈಲ್ ಆಪ್‌ಗೆ ಉತ್ತಮ ಸ್ಪಂದನೆ ದೊರೆತಿದ್ದು, ಜೂನ್ 30ರ ವೇಳೆಗೆ 2.5 ಕೋಟಿಗೂ ಅಧಿಕ ಡೌನ್‌ಲೋಡ್‌ಗಳನ್ನು ದಾಖಲಿಸಿದೆ. ಗ್ರಾಮೀಣ ಪ್ರದೇಶಗಳಲ್ಲಿಯೇ 20 ಲಕ್ಷಕ್ಕೂ ಹೆಚ್ಚು ಗ್ರಾಹಕರು ಈ ವೇದಿಕೆಯನ್ನು ಬಳಸುತ್ತಿದ್ದಾರೆ ಎಂದು ಕಂಪನಿ ತಿಳಿಸಿದೆ.

ಪ್ಲಾನೆಟ್ ಆಪ್ ಮೂಲಕ ಇದುವರೆಗೆ ರೂ.11,500 ಕೋಟಿಗೂ ಅಧಿಕ ಸಂಗ್ರಹಣೆ ನಡೆದಿದ್ದು, 14 ಕೋಟಿಗೂ ಹೆಚ್ಚು ಗ್ರಾಹಕರ ವಿನಂತಿಗಳಿಗೆ ಸ್ಪಂದಿಸಲಾಗಿದೆ. ಇದೇ ವೇದಿಕೆಯ ಮೂಲಕ ಸುಮಾರು ರೂ.34,462 ಕೋಟಿ ಮೌಲ್ಯದ ಸಾಲ ವಹಿವಾಟುಗಳಿಗೆ ನೆರವು ನೀಡಲಾಗಿದೆ.

ಡೀಲರ್ ಜಾಲವನ್ನು ಬಲಪಡಿಸಲು ರೂಪಿಸಿರುವ ಪಾಲುದಾರರ ಪ್ಲಾನೆಟ್ ವೇದಿಕೆಯು ಕೂಡ ಗಮನಾರ್ಹ ಬೆಳವಣಿಗೆ ದಾಖಲಿಸಿದೆ. ಜೂನ್ ಅಂತ್ಯದ ವೇಳೆಗೆ 4,400ಕ್ಕೂ ಹೆಚ್ಚು ಡೀಲರ್‌ಗಳು ಈ ವೇದಿಕೆಗೆ ಸೇರ್ಪಡೆಯಾಗಿದ್ದು, 51,000ಕ್ಕೂ ಅಧಿಕ ಲಾಗಿನ್‌ಗಳು ದಾಖಲಾಗಿವೆ. ಜೊತೆಗೆ ರೂ.590 ಕೋಟಿಗೂ ಹೆಚ್ಚಿನ ವ್ಯಾಪಾರ ಮುಂಗಡ ಹಣಕಾಸು ಸೌಲಭ್ಯಕ್ಕೆ ನೆರವು ಒದಗಿಸಲಾಗಿದೆ ಎಂದು ಕಂಪನಿ ಪ್ರಕಟಣೆಯಲ್ಲಿ ತಿಳಿಸಿದೆ.

# ಮೊದಲ ತ್ರೈಮಾಸಿಕದಲ್ಲಿ ಸ್ಥಿರ ಬೆಳವಣಿಗೆ ದಾಖಲಿಸಿದ ಉಮಿಯಾ ಬಿಲ್ಡ್‌ಕಾನ್

ಬೆಂಗಳೂರು: ಉಮಿಯಾ ಬಿಲ್ಡ್‌ಕಾನ್ ಲಿಮಿಟೆಡ್ (ಬಿಎಸ್‌ಇ: 532376 । ಎನ್‌ಎಸ್‌ಇ: ಯುಎಂಐವೈಎ–ಎಂಆರ್‌ಒ) 2026–27ನೇ ಹಣಕಾಸು ವರ್ಷದ ಮೊದಲ ತ್ರೈಮಾಸಿಕ (ಏಪ್ರಿಲ್–ಜೂನ್) ಹಣಕಾಸು ಫಲಿತಾಂಶಗಳನ್ನು ಪ್ರಕಟಿಸಿದ್ದು, ಜಾಗತಿಕ ಪೂರೈಕೆ ಸರಪಳಿಯ ಸವಾಲುಗಳ ನಡುವೆಯೂ ಉತ್ಪನ್ನ, ತಂತ್ರಜ್ಞಾನ ಪರಿಹಾರಗಳು ಹಾಗೂ ರಿಯಲ್ ಎಸ್ಟೇಟ್ ವಿಭಾಗಗಳಲ್ಲಿ ಸ್ಥಿರ ಕಾರ್ಯನಿರ್ವಹಣೆ ದಾಖಲಿಸಿದೆ ಎಂದು ತಿಳಿಸಿದೆ.

ಕಂಪನಿಯ ರಿಯಲ್ ಎಸ್ಟೇಟ್ ವಿಭಾಗದಲ್ಲಿ ನಡೆಯುತ್ತಿರುವ ಉಮಿಯಾ ಬ್ರಿಕ್‌ಲೇನ್ ಹಾಗೂ ಉಮಿಯಾ ಪ್ರಿಸಮ್ ಯೋಜನೆಗಳ ಅಭಿವೃದ್ಧಿ ಕಾಮಗಾರಿಗಳು ಯೋಜನೆಯಂತೆ ಮುಂದುವರಿದಿದ್ದು, ಸಮಯೋಚಿತ ಅನುಷ್ಠಾನ ಮತ್ತು ದೀರ್ಘಾವಧಿಯ ಮೌಲ್ಯ ಸೃಷ್ಟಿಗೆ ಆದ್ಯತೆ ನೀಡಲಾಗಿದೆ ಎಂದು ಕಂಪನಿ ಪ್ರಕಟಣೆಯಲ್ಲಿ ತಿಳಿಸಿದೆ.

ಹಣಕಾಸು ಫಲಿತಾಂಶ ಕುರಿತು ಪ್ರತಿಕ್ರಿಯಿಸಿದ ಕಂಪನಿಯ ಅಧ್ಯಕ್ಷ ಹಾಗೂ ವ್ಯವಸ್ಥಾಪಕ ನಿರ್ದೇಶಕ ಅನಿರುದ್ಧ ಮೆಹ್ತಾ, ಕಂಪನಿಯ ಬಹುಮುಖ ವ್ಯವಹಾರ ಮಾದರಿ ಮತ್ತು ಶಿಸ್ತುಬದ್ಧ ಕಾರ್ಯನಿರ್ವಹಣೆಯು ಮೊದಲ ತ್ರೈಮಾಸಿಕದಲ್ಲಿಯೂ ಉತ್ತಮ ಫಲಿತಾಂಶ ನೀಡಿದೆ ಎಂದು ಹೇಳಿದರು.

ಉತ್ಪನ್ನ ವಿಭಾಗವು ವರ್ಷದಿಂದ ವರ್ಷಕ್ಕೆ ಆರೋಗ್ಯಕರ ಬೆಳವಣಿಗೆಯನ್ನು ಮುಂದುವರಿಸಿದ್ದು, ರಿಯಲ್ ಎಸ್ಟೇಟ್ ಯೋಜನೆಗಳೂ ನಿಗದಿತ ವೇಳಾಪಟ್ಟಿಯಂತೆ ಸಾಗುತ್ತಿವೆ. ಬಲಿಷ್ಠ ಆರ್ಡರ್ ಪೈಪ್‌ಲೈನ್, ಸ್ವದೇಶಿ ತಂತ್ರಜ್ಞಾನ ಅಭಿವೃದ್ಧಿಗೆ ಆದ್ಯತೆ ಹಾಗೂ ಯೋಜನೆಗಳ ಸಮರ್ಪಕ ಅನುಷ್ಠಾನದ ಮೂಲಕ ಷೇರುದಾರರಿಗೆ ದೀರ್ಘಾವಧಿಯ ಮೌಲ್ಯ ಸೃಷ್ಟಿಸುವ ವಿಶ್ವಾಸವಿದೆ ಎಂದು ಅವರು ತಿಳಿಸಿದರು.

# ಭಾನುವಾರ ಎಲ್ಲಾ ಉಪನೋಂದಣಿ ಕಚೇರಿಗಳು ಕಾರ್ಯನಿರ್ವಹಣೆ

ಬೆಂಗಳೂರು

ಸಾರ್ವಜನಿಕರ ಅನುಕೂಲ ಹಾಗೂ ಇಲಾಖೆಯ ಕಾರ್ಯದೊತ್ತಡವನ್ನು ಕಡಿಮೆ ಮಾಡುವ ಉದ್ದೇಶದಿಂದ ಜುಲೈ 12ರ ಭಾನುವಾರ ರಾಜ್ಯದ ಎಲ್ಲಾ ಉಪನೋಂದಣಿ ಕಚೇರಿಗಳು ಎಂದಿನಂತೆ ಕಾರ್ಯನಿರ್ವಹಿಸಲಿವೆ ಎಂದು ನೋಂದಣಿ ಮತ್ತು ಮುದ್ರಾಂಕಗಳ ಇಲಾಖೆ ತಿಳಿಸಿದೆ.

ಸಾರ್ವಜನಿಕ ರಜಾದಿನವಾಗಿದ್ದರೂ ರಾಜ್ಯದಾದ್ಯಂತ ಇರುವ ಎಲ್ಲಾ ಉಪನೋಂದಣಿ ಕಚೇರಿಗಳು ಪೂರ್ಣ ಪ್ರಮಾಣದಲ್ಲಿ ತೆರೆದಿರಲಿದ್ದು, ಸಾಮಾನ್ಯ ಕೆಲಸದ ದಿನದಂತೆ ಎಲ್ಲಾ ಸೇವೆಗಳನ್ನು ಒದಗಿಸಲಿವೆ.

ಈ ದಿನ ಸಾರ್ವಜನಿಕರು ಆಸ್ತಿ ನೋಂದಣಿ, ಮುದ್ರಾಂಕ ಪತ್ರಗಳ ಖರೀದಿ ಸೇರಿದಂತೆ ಇಲಾಖೆಗೆ ಸಂಬಂಧಿಸಿದ ವಿವಿಧ ಸೇವೆಗಳನ್ನು ಯಾವುದೇ ತೊಂದರೆಯಿಲ್ಲದೆ ಪಡೆಯಬಹುದು ಎಂದು ಇಲಾಖೆ ಪ್ರಕಟಣೆಯಲ್ಲಿ ತಿಳಿಸಿದೆ.

ಸಾರ್ವಜನಿಕರು ಈ ವಿಶೇಷ ಅವಕಾಶದ ಸದುಪಯೋಗ ಪಡೆದುಕೊಂಡು ತಮ್ಮ ನೋಂದಣಿ ಸಂಬಂಧಿತ ಕೆಲಸಗಳನ್ನು ಪೂರ್ಣಗೊಳಿಸಬಹುದು ಎಂದು ನೋಂದಣಿ ಮತ್ತು ಮುದ್ರಾಂಕಗಳ ಇಲಾಖೆ ಮನವಿ ಮಾಡಿದೆ.

# ಶ್ರೀ ಚರಣ್ ಸೌಹಾರ್ದ ಕೋ-ಆಪರೇಟೀವ್ ಬ್ಯಾಂಕ್‌ಗೆ ರೂ.3.06 ಕೋಟಿ ಲಾಭ

ಬೆಂಗಳೂರು

ಸಹಕಾರ ಕ್ಷೇತ್ರದಲ್ಲಿ ಯಶಸ್ವಿಯಾಗಿ ಕಾರ್ಯನಿರ್ವಹಿಸುತ್ತಿರುವ ಬಸವನಗುಡಿಯ ಶ್ರೀ ಚರಣ್ ಸೌಹಾರ್ದ ಕೋ–ಆಪರೇಟೀವ್ ಬ್ಯಾಂಕ್ ಪ್ರಸಕ್ತ ಹಣಕಾಸು ವರ್ಷದ ಜುಲೈ 31ಕ್ಕೆ ಕೊನೆಗೊಂಡ ತ್ರೈಮಾಸಿಕದಲ್ಲಿ ರೂ.3.06 ಕೋಟಿ ನಿವ್ವಳ ಲಾಭ ಗಳಿಸಿದ್ದು, ಕಳೆದ ವರ್ಷದ ಇದೇ ಅವಧಿಯ ರೂ.2.92 ಕೋಟಿ ಲಾಭಕ್ಕೆ ಹೋಲಿಸಿದರೆ ಉತ್ತಮ ಬೆಳವಣಿಗೆ ದಾಖಲಿಸಿದೆ.

ನಗರದ ಶಂಕರಪುರಂನ ಪಂಪ ಮಹಾಕವಿ ರಸ್ತೆಯಲ್ಲಿರುವ ವಿದ್ಯಾಶ್ರೀ ವಿದ್ಯಾವಿಹಾರ ಸಭಾಂಗಣದಲ್ಲಿ ನಡೆದ ಬ್ಯಾಂಕಿನ 30ನೇ ವಾರ್ಷಿಕ ಸರ್ವಸದಸ್ಯರ ಸಭೆಯಲ್ಲಿ ಬ್ಯಾಂಕಿನ ಸಂಸ್ಥಾಪಕ ಹಾಗೂ ಅಧ್ಯಕ್ಷ ಬಿ.ವಿ. ದ್ವಾರಕಾನಾಥ್ ವಾರ್ಷಿಕ ಲೆಕ್ಕಪತ್ರ ಮಂಡಿಸಿ ಬ್ಯಾಂಕಿನ ಆರ್ಥಿಕ ಸಾಧನೆ ಕುರಿತು ವಿವರಿಸಿದರು.



ಈ ಸಂದರ್ಭದಲ್ಲಿ ಮಾತನಾಡಿದ ಅವರು, ಬ್ಯಾಂಕ್ ಗ್ರಾಹಕ ಸ್ನೇಹಿ ಸೇವೆಗೆ ಆದ್ಯತೆ ನೀಡುತ್ತಿದ್ದು, ಸುಲಭ ಸಾಲ ಸೌಲಭ್ಯಗಳ ಮೂಲಕ ಸದಸ್ಯರ ವಿಶ್ವಾಸ ಗಳಿಸಿದೆ. ಅನುತ್ಪಾದಕ ಸಾಲದ ಪ್ರಮಾಣವನ್ನು ಗಮನಾರ್ಹವಾಗಿ ತಗ್ಗಿಸುವಲ್ಲಿ ಯಶಸ್ವಿಯಾಗಿದ್ದು, ಆರ್ಥಿಕ ಶಿಸ್ತು ಮತ್ತು ಪಾರದರ್ಶಕ ಆಡಳಿತದ ಫಲವಾಗಿ ಬ್ಯಾಂಕ್ ಲಾಭದಾಯಕವಾಗಿ ಮುನ್ನಡೆಯುತ್ತಿದೆ ಎಂದು ತಿಳಿಸಿದರು.

ಸಭೆಯಲ್ಲಿ 2024–25ನೇ ಶೈಕ್ಷಣಿಕ ವರ್ಷದಲ್ಲಿ ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿ ಪರೀಕ್ಷೆಗಳಲ್ಲಿ ಶೇ.95ಕ್ಕಿಂತ ಹೆಚ್ಚು ಅಂಕ ಗಳಿಸಿದ ಬ್ಯಾಂಕಿನ ಸದಸ್ಯರ ಮಕ್ಕಳನ್ನು ಪ್ರತಿಭಾ ಪುರಸ್ಕಾರ ನೀಡಿ ಸನ್ಮಾನಿಸಲಾಯಿತು.

ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದ ದೂರದರ್ಶನ ಚಂದನ ವಾಹಿನಿಯ ಜನಪ್ರಿಯ 'ಥಟ್ ಅಂತ ಹೇಳಿ' ರಸಪ್ರಶ್ನೆ ಕಾರ್ಯಕ್ರಮದ ಕ್ವಿಜ್ ಮಾಸ್ಟರ್ ಹಾಗೂ ಹಿರಿಯ ಸಾಹಿತಿ ಡಾ. ನಾ. ಸೋಮೇಶ್ವರ್ ಮಾತನಾಡಿ, ಶಿಕ್ಷಣವೇ ಜೀವನದ ಯಶಸ್ಸಿನ ಭದ್ರ ಬುನಾದಿಯಾಗಿದ್ದು, ಇಂದಿನ ಪರಿಶ್ರಮವೇ ನಾಳಿನ ಸಾಧನೆಗೆ ಸೋಪಾನವಾಗುತ್ತದೆ ಎಂದು ಹೇಳಿದರು. ಸಮಯದ ಮೌಲ್ಯ ಅರಿತು ಶಿಸ್ತು, ನಿರಂತರ ಅಧ್ಯಯನ ಮತ್ತು ಸ್ಪಷ್ಟ ಗುರಿಯೊಂದಿಗೆ ಮುನ್ನಡೆಯುವ ವಿದ್ಯಾರ್ಥಿಗಳು ಜೀವನದಲ್ಲಿ ಯಶಸ್ಸು ಸಾಧಿಸುತ್ತಾರೆ ಎಂದು ಕಿವಿಮಾತು ಹೇಳಿದರು. ಕಾರ್ಯಕ್ರಮದಲ್ಲಿ ಬ್ಯಾಂಕಿನ ಗ್ರಾಹಕರೂ ಆಗಿರುವ ಚಲನಚಿತ್ರ ನಿರ್ಮಾಪಕ ಬಿ.ಕೆ. ಶ್ರೀನಿವಾಸ್ ಉಪಸ್ಥಿತರಿದ್ದರು. ಕುಮಾರಿ ದಿಯಾ ಹೆಗ್ಡೆ ಹಾಗೂ ತಂಡದ "ಸಂಗೀತ ವೈಭವ" ಸಾಂಸ್ಕೃತಿಕ ಕಾರ್ಯಕ್ರಮ ಸಭಿಕರ ಮೆಚ್ಚುಗೆಗೆ ಪಾತ್ರವಾಯಿತು.



ನಾಡಹಬ್ಬ ದಸರಾ-2026 ಆಚರಣೆ ಸಂಬಂಧ ಸಿಎಂ ಡಿ.ಕೆ. ಶಿವಕುಮಾರ್ ಅವರ ಅಧ್ಯಕ್ಷತೆಯಲ್ಲಿ ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ಶುಕ್ರವಾರ ನಡೆದ ಪೂರ್ವಭಾವಿ ಸಭೆಯಲ್ಲಿ ಡಿಸಿಎಂ ಪರಮೇಶ್ವರ, ಸಚಿವರಾದ ಕೆ ಜೆ ಜಾರ್ಜ್, ಯತೀಂದ್ರ ಸಿದ್ದರಾಮಯ್ಯ, ಮೈಸೂರು- ಕೊಡಗು ಸಂಸದ ಯದುವೀರ್, ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ಮತ್ತಿತರರು ಭಾಗವಹಿಸಿದ್ದರು.

# ಶುಕ್ರವಾರವೂ ಚಿರತೆ ಪ್ರತ್ಯಕ್ಷ

ಬೆಂಗಳೂರು

ರಾಜಧಾನಿ ಬೆಂಗಳೂರಿನ ಬ್ಯಾಡರಹಳ್ಳಿ ವ್ಯಾಪ್ತಿಯ ಭಾರತ್ ನಗರದಲ್ಲಿ ಚಿರತೆ ಮತ್ತೆ ಕಾಣಿಸಿಕೊಂಡಿದ್ದು, ಸ್ಥಳೀಯ ನಿವಾಸಿಗಳಲ್ಲಿ ಆತಂಕ ಮತ್ತಷ್ಟು ಹೆಚ್ಚಿದೆ. ಗುರುವಾರ ರಾತ್ರಿ ಹಾಗೂ ಶುಕ್ರವಾರ ಮುಂಜಾನೆ ಚಿರತೆ ಸಂಚರಿಸಿರುವ ದೃಶ್ಯಗಳು ಸಿಸಿಟಿವಿ ಕ್ಯಾಮೆರಾದಲ್ಲಿ ಸೆರೆಯಾಗಿದ್ದು, ಜನರಲ್ಲಿ ಭಯದ ವಾತಾವರಣ ನಿರ್ಮಾಣವಾಗಿದೆ. ಚಿರತೆ ಕಾಣಿಸಿಕೊಂಡಿರುವ ಪ್ರದೇಶ ಸಂಪೂರ್ಣ ಜನವಸತಿ ಪ್ರದೇಶವಾಗಿದ್ದು, ರಾತ್ರಿ ಹಾಗೂ ಮುಂಜಾನೆ ವೇಳೆಯಲ್ಲಿ ಅದು ಓಡಾಡುತ್ತಿರುವ ಕಾರಣ ಸಾರ್ವಜನಿಕರು ಮನೆಯಿಂದ ಹೊರಬರಲು ಹೆದರುತ್ತಿದ್ದಾರೆ. ಮಕ್ಕಳನ್ನು ಹೊರಗೆ ಕಳುಹಿಸಲು ಪೋಷಕರು ಆತಂಕ ವ್ಯಕ್ತಪಡಿಸಿದ್ದಾರೆ.

ನಿನ್ನೆ ಅರಣ್ಯ ಇಲಾಖೆ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದರೂ ಚಿರತೆಯ ಯಾವುದೇ ಸುಳಿವು ಸಿಕ್ಕಿರಲಿಲ್ಲ. ಮುನ್ನೆಚ್ಚರಿಕೆ ಕ್ರಮವಾಗಿ ಸಿಡಿಮದ್ದುಗಳನ್ನು ಸಿಡಿಸಿ ಚಿರತೆಯನ್ನು ಕಾಡಿನತ್ತ ಓಡಿಸಲು ಪ್ರಯತ್ನಿಸಲಾಗಿತ್ತು.

ಆದರೆ ಅಧಿಕಾರಿಗಳ ಕಣ್ತಪ್ಪಿಸಿ ಚಿರತೆ ಅದೇ ಪ್ರದೇಶದಲ್ಲಿ ಮತ್ತೆ ಕಾಣಿಸಿಕೊಂಡಿದೆ. ಚಿರತೆ ಓಡಾಡಿರುವ ದೃಶ್ಯಗಳು ಲಭ್ಯವಾಗುತ್ತಿದ್ದಂತೆ ಅರಣ್ಯ ಇಲಾಖೆ ಮತ್ತೆ ಎಚ್ಚೆತ್ತುಕೊಂಡಿದ್ದು, ಅಧಿಕಾರಿಗಳು ಹಾಗೂ ಸಿಬ್ಬಂದಿ ಸ್ಥಳದಲ್ಲಿ ಬೃಹತ್ ಶೋಧ ಕಾರ್ಯಾಚರಣೆ ಆರಂಭಿಸಲು ಸಿದ್ಧತೆ ನಡೆಸಿದ್ದಾರೆ.

ಮೊದಲಿಗೆ ಚಿರತೆ ಕಾಣಿಸಿಕೊಂಡ ಪ್ರದೇಶದಲ್ಲಿ ಕೂಂಬಿಂಗ್ ನಡೆಸಲಾಗುವುದು. ಹುಡುಕಾಟದಲ್ಲಿ ಚಿರತೆ ಪತ್ತೆಯಾಗದಿದ್ದರೆ, ಅದನ್ನು ಸೆರೆಹಿಡಿಯಲು ಪ್ರಮುಖ ಸ್ಥಳಗಳಲ್ಲಿ ಬೋನು ಅಳವಡಿಸಿ ಕಾರ್ಯಾಚರಣೆ ಕೈಗೊಳ್ಳುವ ಸಾಧ್ಯತೆ ಇದೆ.

# ನದಿ ಜೋಡಣೆಗೆ ರಾಜ್ಯದ ಸಮ್ಮತಿ ಹೇಳಿಕೆಗೆ ಕುಮಾರಸ್ವಾಮಿ ಆಕ್ಷೇಪ

ಬೆಂಗಳೂರು

ಕೃಷ್ಣಾ– ಗೋದಾವರಿ– ಕಾವೇರಿ ನದಿ ಜೋಡಣೆ ಯೋಜನೆಗೆ ರಾಜ್ಯದ ಸಮ್ಮತಿ ಇದೆ ಎಂಬ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ಹೇಳಿಕೆಗೆ ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ತೀವ್ರ ಆಕ್ಷೇಪ ವ್ಯಕ್ತಪಡಿಸಿದ್ದಾರೆ. ರಾಜ್ಯದ ನೀರಾವರಿ ಹಿತಾಸಕ್ತಿಗೆ ಸಂಬಂಧಿಸಿದಂತೆ ಮುಖ್ಯಮಂತ್ರಿ ಬೇಜವಾಬ್ದಾರಿಯುತವಾಗಿ ನಡೆದುಕೊಳ್ಳುತ್ತಿದ್ದಾರೆ ಎಂದು ಆರೋಪಿಸಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ನದಿ ಜೋಡಣೆ ಯೋಜನೆಗೆ ತಮ್ಮ ವಿರೋಧ ಇಲ್ಲ. ಆದರೆ, ಯೋಜನೆಯಡಿ ಕರ್ನಾಟಕಕ್ಕೆ ಎಷ್ಟು ನೀರು ಹಂಚಿಕೆಯಾಗುತ್ತದೆ ಎಂಬುದು ಸ್ಪಷ್ಟವಾಗದೆ ರಾಜ್ಯದ ಪರವಾಗಿ ಸಮ್ಮತಿ ಸೂಚಿಸುವುದು ಸರಿಯಲ್ಲ ಎಂದು ಹೇಳಿದರು.

ಗೋದಾವರಿ–ಕಾವೇರಿ ಜೋಡಣೆ ಯೋಜನೆಯಲ್ಲಿ ಕರ್ನಾಟಕದ ಪಾಲಿನ ನೀರಿನ ಪ್ರಮಾಣ, ರಾಜ್ಯಕ್ಕೆ ಆಗುವ ಲಾಭ–ನಷ್ಟಗಳ ಬಗ್ಗೆ ಸಂಪೂರ್ಣ ಮಾಹಿತಿ ಪಡೆದು ನಂತರವೇ ಯಾವುದೇ ನಿರ್ಧಾರ ಕೈಗೊಳ್ಳಬೇಕು. ಮುಖ್ಯಮಂತ್ರಿಗಳು



ನೀರಾವರಿ ತಜ್ಞರು ಹಾಗೂ ಅಧಿಕಾರಿಗಳ ಸಲಹೆ ಪಡೆಯದೇ ಹೇಳಿಕೆ ನೀಡಿರುವುದು ಸರಿಯಲ್ಲ ಎಂದು ಟೀಕಿಸಿದರು.

2023ರಲ್ಲಿ ಸಿದ್ಧಗೊಂಡ ಸಮಗ್ರ ಯೋಜನಾ ವರದಿ (ಡಿಪಿಆರ್) ಪ್ರಕಾರ ಆಂಧ್ರಪ್ರದೇಶಕ್ಕೆ 90 ಟಿಎಂಸಿ ಹಾಗೂ ತೆಲಂಗಾಣ ಮತ್ತು ತಮಿಳುನಾಡಿಗೆ ತಲಾ 60 ಟಿಎಂಸಿ ನೀರು ಹಂಚಿಕೆ ಮಾಡಲಾಗಿತ್ತು. ಮಾಜಿ ಪ್ರಧಾನಿ ಎಚ್.ಡಿ. ದೇವೇಗೌಡರ ಹೋರಾಟದ ಬಳಿಕವೇ ಕರ್ನಾಟಕಕ್ಕೆ 15 ಟಿಎಂಸಿ ನೀರು ಮೀಸಲಾಗಿದ್ದು, ಅದನ್ನೂ ಕುಡಿಯುವ ನೀರಿನ ಉದ್ದೇಶಕ್ಕೆ ಮಾತ್ರ ಬಳಸುವ ಷರತ್ತು ವಿಧಿಸಲಾಗಿದೆ ಎಂದು ಕುಮಾರಸ್ವಾಮಿ ವಿವರಿಸಿದರು.

ಇಂತಹ ಪರಿಸ್ಥಿತಿಯಲ್ಲಿ ರಾಜ್ಯವು ನದಿ ಜೋಡಣೆ ಯೋಜನೆಗೆ ಸಮ್ಮತಿ ನೀಡಿ, ಒಂದು ಲಕ್ಷ ಕೋಟಿ ರೂಪಾಯಿ ವೆಚ್ಚ ಮಾಡುವ ಬಗ್ಗೆ ಮುಖ್ಯಮಂತ್ರಿ ಯಾವ ಆಧಾರದಲ್ಲಿ ಹೇಳಿಕೆ ನೀಡಿದ್ದಾರೆ ಎಂಬುದನ್ನು ಸಾರ್ವಜನಿಕರಿಗೆ ಸ್ಪಷ್ಟಪಡಿಸಬೇಕು ಎಂದು ಆಗ್ರಹಿಸಿದರು.

ಮುಖ್ಯಮಂತ್ರಿಯವರ ಇತ್ತೀಚಿನ ಉತ್ತರ ಕರ್ನಾಟಕ ಪ್ರವಾಸವನ್ನು ಟೀಕಿಸಿದ ಕುಮಾರಸ್ವಾಮಿ, ಅದು ಪ್ರಗತಿ ಪರಿಶೀಲನೆಗಿಂತ "ಜಾಲಿ ಟ್ರಿಪ್" ಆಗಿತ್ತು ಎಂದು ವ್ಯಂಗ್ಯವಾಡಿದರು. ತುಂಗಭದ್ರಾ ಜಲಾಶಯ, ಕ್ರೆಸ್ಟ್ ಗೇಟ್ ಹಾಗೂ ನದಿ ಜೋಡಣೆ ಸೇರಿದಂತೆ ಪ್ರಮುಖ ವಿಷಯಗಳಲ್ಲಿ ಸರ್ಕಾರ ವಿರೋಧ ಪಕ್ಷಗಳು ಮತ್ತು ರಾಜ್ಯದ ಜನರೊಂದಿಗೆ ಚರ್ಚಿಸದೇ ಏಕಪಕ್ಷೀಯವಾಗಿ ನಡೆದುಕೊಳ್ಳುತ್ತಿದೆ ಎಂದು ಆರೋಪಿಸಿದರು.

ರಾಜ್ಯದ ನೀರಾವರಿ ಹಿತಾಸಕ್ತಿಗೆ ಸಂಬಂಧಿಸಿದ ನಿರ್ಧಾರಗಳಲ್ಲಿ ಪಾರದರ್ಶಕತೆ ಇರಬೇಕು. ಕರ್ನಾಟಕದ ಪಾಲಿನ ನೀರಿನ ಹಕ್ಕು ಮತ್ತು ರೈತರ ಹಿತಾಸಕ್ತಿಯನ್ನು ಯಾವುದೇ ಕಾರಣಕ್ಕೂ ಕಡೆಗಣಿಸಬಾರದು ಎಂದು ಕುಮಾರಸ್ವಾಮಿ ಒತ್ತಾಯಿಸಿದರು.

# ನಿವೃತ್ತಿ ಜೀವನದ ಆರ್ಥಿಕ ಭದ್ರತೆಗೆ 'ಸುನೆಹ್ರಾ ಪಿಂಚಣಿ' ಯೋಜನೆ

ಮಂಗಳೂರು

ನಿವೃತ್ತಿ ಜೀವನವನ್ನು ಆರ್ಥಿಕವಾಗಿ ಸುರಕ್ಷಿತಗೊಳಿಸುವ ಉದ್ದೇಶದಿಂದ ಜನರಲಿ ಸೆಂಟ್ರಲ್ ಲೈಫ್ ಇನ್ಶುರೆನ್ಸ್ ಕಂಪನಿಯು ಹೊಸ 'ಸುನೆಹ್ರಾ ಪಿಂಚಣಿ' ಯೋಜನೆಯನ್ನು ಪರಿಚಯಿಸಿದೆ.

ಈ ಯೋಜನೆಯು ಭಾಗವಹಿಸುವ (ಪಾರ್) ಮತ್ತು ನಾನ್–ಲಿಂಕ್ಡ್ ಜೀವ ವಿಮಾ ಪಿಂಚಣಿ ಯೋಜನೆಯಾಗಿದ್ದು, ನಿವೃತ್ತಿ ಅವಧಿಗೆ ಅಗತ್ಯವಾದ ಉಳಿತಾಯ ನಿಧಿಯನ್ನು ವ್ಯವಸ್ಥಿತವಾಗಿ ರೂಪಿಸಿಕೊಳ್ಳಲು ಸಹಕಾರಿಯಾಗಲಿದೆ. ಮೊದಲ ಪಾಲಿಸಿ ವರ್ಷದಿಂದಲೇ ಬೋನಸ್ ಸಂಗ್ರಹವಾಗಲಿದ್ದು, ಗ್ರಾಹಕರು ತಮ್ಮ ಅಗತ್ಯಕ್ಕೆ ಅನುಗುಣವಾಗಿ 5 ರಿಂದ 40 ವರ್ಷಗಳವರೆಗೆ ಪಾಲಿಸಿ ಅವಧಿಯನ್ನು ಆಯ್ಕೆ ಮಾಡಿಕೊಳ್ಳಬಹುದಾಗಿದೆ.

ಯೋಜನೆಯಲ್ಲಿ ಮರಣ ಅಥವಾ ವೆಸ್ಟಿಂಗ್ ಸಂದರ್ಭದಲ್ಲಿ ಖಾತರಿಪಡಿಸಿದ ಪ್ರಯೋಜನಗಳು, ಹಣಕಾಸಿನ ತುರ್ತು ಪರಿಸ್ಥಿತಿಯಲ್ಲಿ ಭಾಗಶಃ ಹಣ ಹಿಂಪಡೆಯುವ ಅವಕಾಶ, ಏಕ, ಸೀಮಿತ ಹಾಗೂ ನಿಯಮಿತ ಪ್ರೀಮಿಯಂ ಪಾವತಿ ಆಯ್ಕೆಗಳು ಸೇರಿದಂತೆ ಹಲವು ಅನುಕೂಲಗಳನ್ನು ಒದಗಿಸಲಾಗಿದೆ. ಹೆಚ್ಚುವರಿ ಸುರಕ್ಷತೆಗಾಗಿ ವಿವಿಧ ರೈಡರ್ ಸೌಲಭ್ಯಗಳನ್ನೂ ಯೋಜನೆ ಒಳಗೊಂಡಿದೆ.

2050ರ ವೇಳೆಗೆ ದೇಶದಲ್ಲಿ ಹಿರಿಯ ನಾಗರಿಕರ ಸಂಖ್ಯೆ ಗಣನೀಯವಾಗಿ ಹೆಚ್ಚಾಗುವ ನಿರೀಕ್ಷೆಯಿರುವ ಹಿನ್ನೆಲೆಯಲ್ಲಿ, ನಿವೃತ್ತಿಯ ನಂತರವೂ ಆರ್ಥಿಕ ಸ್ವಾವಲಂಬನೆ ಕಾಪಾಡಿಕೊಳ್ಳಲು ಈ ಯೋಜನೆ ನೆರವಾಗಲಿದೆ ಎಂದು ಕಂಪನಿ ತಿಳಿಸಿದೆ.

# ‘ಸಿಲ್ಕ್, ಮಿಲ್ಕ್ ಮಾತ್ರವೇ ಜಿಲ್ಲೆಯ ರೈತರ ಕೈಹಿಡಿಯುವ ಬೆಳೆ’

ತುಮಕೂರು

ತುಮಕೂರು ಜಿಲ್ಲೆಯ ರೈತರನ್ನು ಕೈಹಿಡಿಯುವ ಬೆಳೆ ಎಂದರೆ ಸಿಲ್ಕ್ ಮತ್ತು ಮಿಲ್ಕ್ ಮಾತ್ರವೇ ಆಗಿದೆ ಎಂದು ಉಪಮುಖ್ಯಮಂತ್ರಿ ಡಾ: ಜಿ. ಪರಮೇಶ್ವರ ಹೇಳಿದ್ದಾರೆ.

ಜಿಲ್ಲಾ ಪಂಚಾಯತ್ ಹಾಗೂ ರೇಷ್ಮೆ ಇಲಾಖೆ ಸಹಯೋಗದಲ್ಲಿ ನಗರದ ಗುಬ್ಬಿ ವೀರಣ್ಣ ರಂಗಮಂದಿರದಲ್ಲಿ ಬುಧವಾರ ಆಯೋಜಿಸಿದ್ದ ರೇಷ್ಮೆ ಬೆಳೆಗಾರರ ಕಾರ್ಯಾಗಾರ ಹಾಗೂ ನನ್ನ ರೇಷ್ಮೆ–ನನ್ನ ಹೆಮ್ಮೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಕೇವಲ ಒಂದು ಎಕರೆ ಭೂಮಿ ಇದ್ದರೆ ಒಂದು ಕುಟುಂಬವನ್ನು ಸಾಕುವಷ್ಟು ಸಾಮರ್ಥ್ಯ ಇರುವುದು ರೇಷ್ಮೆ ಬೆಳೆಗೆ ಮಾತ್ರ ಎಂದು ಹೇಳಿದ ಅವರು, ವಿಶೇಷವಾಗಿ ತುಮಕೂರು ಜಿಲ್ಲೆಯ ರೈತರನ್ನು ಕೈಹಿಡಿಯುವುದು ರೇಷ್ಮೆ ಬೆಳೆ ಮತ್ತು ಹೈನುಗಾರಿಕೆ ಮಾತ್ರ ಎಂದು ಅಭಿಪ್ರಾಯಪಟ್ಟರು.

ರೇಷ್ಮೆ ಉದ್ದಿಮೆ ಕೇವಲ ಬೆಳೆ ಅಲ್ಲ. ಇದೊಂದು ಕೈಗಾರಿಕೆ ಎಂದ ಅವರು ಆ ಕಾರಣದಿಂದಲೇ ಈ ಇಲಾಖೆಯನ್ನು ಕೈಗಾರಿಕೆ ಇಲಾಖೆ ವ್ಯಾಪ್ತಿಯಲ್ಲಿ ಇಡಲಾಗಿದೆ ಎಂದರು.

ಕಡಿಮೆ ಭೂಮಿಯಲ್ಲಿ ಅತ್ಯಧಿಕ ಲಾಭ ತರಬಹುದಾದ ರೇಷ್ಮೆ ಬೆಳೆಯ ವಿಸ್ತೀರ್ಣವನ್ನು ಹೆಚ್ಚು ಮಾಡಬೇಕಿದೆ ಎಂದ ಅವರು, ರೇಷ್ಮೆ ಬೆಳೆಗಾರರಿಗೆ ಸರ್ಕಾರದಿಂದಲೂ ಪೂರಕ ನೆರವು, ಸಹಕಾರವನ್ನು ನೀಡುವ ಅತ್ಯಂತ ಅವಶ್ಯ ಇದೆ. ಈ ನಿಟ್ಟಿನಲ್ಲಿ ಮುಖ್ಯಮಂತ್ರಿಯವರೊಂದಿಗೆ



ಚರ್ಚಿಸಿ ಮುಂದಿನ ದಿನಗಳಲ್ಲಿ ರೇಷ್ಮೆ ಬೆಳೆಗಾರರಿಗೆ ಸಿಗಬೇಕಾಗಿರುವ ಸೌಲಭ್ಯಗಳನ್ನು ನೀಡುವ ಹಾಗೂ ರೇಷ್ಮೆ ಉದ್ದಿಮೆಯನ್ನು ಉತ್ತೇಜಿಸುವ ಯೋಜನೆಗಳನ್ನು ರೂಪಿಸುವುದಾಗಿ ಅವರು ತಿಳಿಸಿದರು.

ಪ್ರಸಕ್ತ ಸಾಲಿನಲ್ಲಿ ವಾಡಿಕೆಗಿಂತ ಕಡಿಮೆ ಮಳೆ ಆಗಿರುವುದರಿಂದ ರೈತರು ರೇಷ್ಮೆ ಬೆಳೆಯನ್ನು ಹಾಗೂ ಹೈನುಗಾರಿಕೆಯನ್ನು ಅವಲಂಬಿಸಿರುವುದು ಅನಿವಾರ್ಯ ಮತ್ತು ಅಗತ್ಯ ಎಂದ ಅವರು, ರೇಷ್ಮೆ ಇಲಾಖೆ ಸೇರಿದಂತೆ ಈಗಾಗಲೇ ರಾಜ್ಯ ಸರ್ಕಾರ ವಿವಿಧ ಇಲಾಖೆಗಳಿಗೆ ನೇಮಕಾತಿಗಳನ್ನು ಮಾಡಿಕೊಳ್ಳಲು ಮುಂದಾಗಿದ್ದು, ಇಲಾಖೆಯನ್ನು ಬಲಪಡಿಸುವ ಎಲ್ಲಾ ಕಾರ್ಯಗಳನ್ನು ರೂಪಿಸುವುದಾಗಿ ಅವರು ತಿಳಿಸಿದರು.

ನವದೆಹಲಿಯ ಕರ್ನಾಟಕ ರಾಜ್ಯ ವಿಶೇಷ ಪ್ರತಿನಿಧಿ ಟಿ.ಬಿ. ಜಯಚಂದ್ರ ಮಾತನಾಡಿ, ರೇಷ್ಮೆ ಕೃಷಿ ಲಾಭದಾಯಕ ಉದ್ದಿಮೆಯಾಗಿದ್ದು, ಚೀನಾಗೆ ಸರಿಸಮಾನವಾಗಿ ಉತ್ತೇಜನಗಳನ್ನು ನಮ್ಮ ರೈತರಿಗೆ ಕೊಡುವ ಅಗತ್ಯವಿದೆ ಎಂದರು.

ರೇಷ್ಮೆ ಕೃಷಿಯಲ್ಲಿ ಕೇವಲ ಗೂಡು ಬೆಳೆಯುವುದು ಅಷ್ಟೇ ಅಲ್ಲದೆ, ನೂಲು ಬಿಚ್ಚುವ ತಂತ್ರಜ್ಞಾನಕ್ಕೆ ಉದ್ದಿಮೆಗಳು ಮುಂದಾಗಬೇಕು. ಇದರಿಂದ ರೇಷ್ಮೆ ಕೃಷಿ ಉದ್ದಿಮೆ ಮತ್ತಷ್ಟು ಉತ್ತೇಜನ ನೀಡಿದಂತಾಗುತ್ತದೆ. ಇದಕ್ಕಾಗಿ ಸರ್ಕಾರವನ್ನು ಅವಲಂಬಿಸಿದರೆ ಸಾಲದು. ಖಾಸಗಿ ವಲಯಗಳು ನೂಲು ಬಿಚ್ಚುವ ಕೈಗಾರಿಕೆಗೆ ಮುಂದಾಗಬೇಕು ಎಂದು ಸಲಹೆ ನೀಡಿದರು.

ಅಲ್ಲದೆ, ತುಮಕೂರಿನಲ್ಲಿ ರೇಷ್ಮೆ ಮಾರುಕಟ್ಟೆ ನಿರ್ಮಿಸಲು ಸರ್ಕಾರ ಮುಂದಾಗಬೇಕು ಎಂದು ಅವರು ತಿಳಿಸಿದರು. ಇದಕ್ಕೂ ಮುನ್ನ ರೇಷ್ಮೆ ಬೆಳೆಗಾರರಾದ ಶಿವಾನಂದ ಅವರು ಮಾತನಾಡಿ, ರಾಜ್ಯದಲ್ಲಿ ರೇಷ್ಮೆ ಬೇಸಾಯವನ್ನು ಉತ್ತೇಜಿಸುವ ಹಾಗೂ ರೇಷ್ಮೆ ಇಲಾಖೆಯನ್ನು ಬಲಪಡಿಸಲು ಸರ್ಕಾರ ಮುಂದಾಗಬೇಕೆಂದು ಮನವಿ ಮಾಡಿದರು.

ಕಾರ್ಯಕ್ರಮದಲ್ಲಿ ಬಿ.ಎಂ.ಟಿ.ಸಿ. ಉಪಾಧ್ಯಕ್ಷ ನಿಕೇತ್ ರಾಜ್ ಎಂ., ಜಿಲ್ಲಾಧಿಕಾರಿ ಶುಭ ಕಲ್ಯಾಣ್, ಜಿ.ಪಂ. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಬಿ.ವಿ. ಅಶ್ವಿಜ, ಜಿಲ್ಲಾ ಪೊಲೀಸ್ ಅಧೀಕ್ಷಕ ಕೆ.ವಿ. ಅಶೋಕ್, ರೇಷ್ಮೆ ಅಪರ ನಿರ್ದೇಶಕಿ ಬಿ.ಆರ್. ಪ್ರತಿಭಾ, ರೇಷ್ಮೆ ಜಂಟಿ ನಿರ್ದೇಶಕರಾದ ಕೆ.ಎನ್. ರವಿ, ರಾಚಪ್ಪ, ವಿಜ್ಞಾನಿ ಡಾ: ವೈ. ಶ್ರೀನಿವಾಸಲು ಉಪಸ್ಥಿತರಿದ್ದರು. ರೇಷ್ಮೆ ಉಪನಿರ್ದೇಶಕ ಟಿ. ಲಕ್ಷ್ಮಿ ನರಸಯ್ಯ ಸ್ವಾಗತಿಸಿದರು.

# ಅಂಗನವಾಡಿ ಕೇಂದ್ರದ ಮುಂಭಾಗದ ಚರಂಡಿ ಸರಿಪಡಿಸುವಂತೆ ಒತ್ತಾಯ

ವಿಜಯಪುರ

ಪಟ್ಟಣದ 12 ನೇ ವಾರ್ಡಿನ, ಅಂಗನವಾಡಿ ಕೇಂದ್ರದ ಮುಂಭಾಗದಲ್ಲಿ, ಚರಂಡಿ ವ್ಯವಸ್ಥೆಯು, ತೀರಾ ಹದಗೆಟ್ಟಿದ್ದು, ಮಕ್ಕಳು ಓಡಾಡುವುದಕ್ಕೆ ತುಂಬಾ ತೊಡಕುಂಟಾಗುತ್ತಿದೆ. ವ್ಯವಸ್ಥಿತವಾಗಿ ಚರಂಡಿ ನಿರ್ಮಾಣ ಮಾಡಿಕೊಡುವಂತೆ, ಎಷ್ಟು ಬಾರಿ ಮನವಿ ಮಾಡಿದರೂ, ಯಾರೂ ಗಮನಹರಿಸುತ್ತಿಲ್ಲವೆಂದು ಸ್ಥಳೀಯ ಪೋಷಕರು ಆರೋಪಿಸಿದ್ದಾರೆ.

ಅಂಗನವಾಡಿ ಕೇಂದ್ರದ ಕಟ್ಟಡವನ್ನು ನೂತನವಾಗಿ ಕಟ್ಟಿದ್ದಾರೆ, ಆದರೆ, ಮುಂಭಾಗ, ಚರಂಡಿಯ ಜಾಗದಲ್ಲಿ ಕಿತ್ತುಹಾಕಿರುವ ಕಲ್ಲು ಚಪ್ಪಡಿಗಳನ್ನು ಸರಿಪಡಿಸದೆ ಹಾಗೆ ಬಿಟ್ಟಿದ್ದಾರೆ. ಇದರಿಂದ ಸಣ್ಣ ಮಕ್ಕಳು ಓಡಾಡುವುದು ಕಷ್ಟವಾಗಿದೆ. ಇಲ್ಲಿಗೆ ಬರುವ ಮಕ್ಕಳೆಲ್ಲಾ ನಾಲ್ಕು ವರ್ಷದೊಳಗಿನ ಮಕ್ಕಳಾಗಿದ್ದಾರೆ. ಗರ್ಭಿಣಿ ಮಹಿಳೆಯರು, ಪೌಷ್ಟಿಕ ಆಹಾರ ತೆಗೆದುಕೊಂಡು ಹೋಗುವುದಕ್ಕೆ ಬರುತ್ತಾರೆ.

ಅವರಿಗೂ ಕಷ್ಟವಾಗುತ್ತಿದೆ. ಚಪ್ಪಡಿ ಕಲ್ಲುಗಳ ಕೆಳಗೆ, ಹೆಗ್ಗಣಗಳು, ಮಣ್ಣು ತೋಡಿರುವುದರಿಂದ ಚರಂಡಿಯಲ್ಲಿ, ಮಳೆ ನೀರು ಸರಾಗವಾಗಿ ಮುಂದೆ ಹೋಗುವುದಿಲ್ಲ. ಇಲಿಗಳು ಬಿಲಗಳನ್ನು ಮಾಡಿಕೊಂಡಿರುವುದರಿಂದ, ಬಿಲಗಳಲ್ಲಿ ಹಾವುಗಳು ಸೇರಿಕೊಂಡಿದ್ದು, ಆಗಾಗ ಅಂಗನವಾಡಿ ಕೇಂದ್ರದ ಒಳಗೆ ಬರುತ್ತಿವೆ. ಮಕ್ಕಳನ್ನು ಹೊರಗೆ ಬಿಡುವುದಕ್ಕೂ ಭಯವಾಗುತ್ತಿದೆ.

ಕಲ್ಲು ಚಪ್ಪಡಿಗಳನ್ನು ತೆರವುಗೊಳಿಸಿ, ಚರಂಡಿ ನಿರ್ಮಾಣ ಮಾಡಿ, ಮಳೆ ನೀರು ಸರಾಗವಾಗಿ ಹೊರಗೆ ಹೋಗುವಂತೆ ಮಾಡಬೇಕು ಎಂದು ಇಲ್ಲಿನ ಸಿಬ್ಬಂದಿ ಮನವಿ ಮಾಡಿದ್ದಾರೆ.

# ಕೋಲಾರಮ್ಮ ದೇವಾಲಯದಲ್ಲಿ ಆಕರ್ಷಕ ‘ಸಂಜೆ ಸೌರಭ’

ಕೋಲಾರ

ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಧಾರ್ಮಿಕ ದತ್ತಿ ಇಲಾಖೆಗಳ ಸಂಯುಕ್ತಾಶ್ರಯದಲ್ಲಿ 2026–27ನೇ ಸಾಲಿನ “ಕಲಾ ನಡಿಗೆ ನಿಮ್ಮ ಬಳಿಗೆ” ಯೋಜನೆಯಡಿ ನಗರದ ಐತಿಹಾಸಿಕ ಕೋಲಾರಮ್ಮ ದೇವಾಲಯದಲ್ಲಿ ಆಯೋಜಿಸುತ್ತಿರುವ “ಸಂಜೆ ಸೌರಭ” ಕಾರ್ಯಕ್ರಮವು ಈ ಶುಕ್ರವಾರವೂ ಕಲಾ ರಸಿಕರನ್ನು ರಂಜಿಸಲು ಸಜ್ಜಾಗಿದೆ.

ಪ್ರತಿ ಶುಕ್ರವಾರದಂತೆ ಈ ವಾರವೂ ಸಂಜೆ 06.30 ಗಂಟೆಗೆ ಕಾರ್ಯಕ್ರಮ ಜರುಗಲಿದ್ದು, ನಾಡಿನ ಪ್ರತಿಭಾವಂತ ಕಲಾವಿದರು ಕಲಾ ಪ್ರದರ್ಶನ ನೀಡಲಿದ್ದಾರೆ. ಕುಮಾರಿ ಕಾವ್ಯಶ್ರೀ ವೈ. ಅವರಿಂದ ಆಕರ್ಷಕ ಭರತನಾಟ್ಯ, ಕುಮಾರ ತನುಷ್ ಕೆ.ಎಂ. ಅವರಿಂದ ಸುಶ್ರಾವ್ಯ ಭಕ್ತಿಗೀತೆಗಳ ಗಾಯನ ಹಾಗೂ ಪುರಂದರದಾಸರ ಆರಾಧನಾ ಸಮಿತಿಯ ಶ್ರೀ ನಾರಾಯಣಗೌಡ ಅವರಿಂದ ಸುಗಮ ಸಂಗೀತ ಕಾರ್ಯಕ್ರಮಗಳು ಮೂಡಿಬರಲಿವೆ.

ಸ್ಥಳೀಯ ಕಲೆ ಮತ್ತು ಸಂಸ್ಕೃತಿಯನ್ನು ಪ್ರೋತ್ಸಾಹಿಸುವ ಹಾಗೂ ಸಾರ್ವಜನಿಕರಿಗೆ ಸಾಂಸ್ಕೃತಿಕ ರಸದೌತಣ ಉಣಬಡಿಸುವ ಈ ವಿಶಿಷ್ಟ ಕಾರ್ಯಕ್ರಮಕ್ಕೆ ಕಲಾ ರಸಿಕರು, ಭಕ್ತಾದಿಗಳು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಕಾರ್ಯಕ್ರಮದ ಯಶಸ್ಸಿಗೆ ಸಹಕರಿಸುವಂತೆ ಹಾಗೂ ಸದುಪಯೋಗ ಪಡೆದುಕೊಳ್ಳುವಂತೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕರು ಪತ್ರಿಕಾ ಪ್ರಕಟಣೆಯಲ್ಲಿ ಕೋರಿದ್ದಾರೆ.

# ಪ್ರಶಸ್ತಿಗಾಗಿ ಅರ್ಜಿ ಆಹ್ವಾನ

ಕೋಲಾರ

ಭಾರತ ಸರ್ಕಾರವು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖಾ ವತಿಯಿಂದ ಪದ್ಮ ಪ್ರಶಸ್ತಿಗೆ ಮಹಿಳಾ ಕ್ಷೇತ್ರಗಳಲ್ಲಿ ಸಾಧನೆ ಮಾಡಿರುವ ಮಹಿಳಾ ಸಾಧಕಿಯರು, ಸಮಾಜ ಸೇವಕರು ತಳ ಮಟ್ಟದ ಕಾರ್ಯಕರ್ತರು, ಗ್ರಾಮೀಣ ಮತ್ತು ಬುಡಕಟ್ಟು ಪ್ರದೇಶಗಳಲ್ಲಿ ಕೆಲಸ ಮಾಡುವ ವ್ಯಕ್ತಿಗಳು ಮತ್ತು ಮಹಿಳೆಯರ ಮತ್ತು ಮಕ್ಕಳ ಕಲ್ಯಾಣ, ಪೋಷಣೆ, ಮಹಿಳೆಯರ ವಿರುದ್ಧದ ಅಪರಾಧಗಳ ತಡೆಗಟ್ಟುವಿಕೆ. ಮಕ್ಕಳ ರಕ್ಷಣೆ, ದುರ್ಬಲ ವರ್ಗಗಳ ಸಬಲೀಕರಣ, ಸಾಮಾಜಿಕ ನ್ಯಾಯ ಮತ್ತು ಸಂಬಂಧಿತ ವಲಯಗಳಿಗೆ ವಿಶೇಷ ಒತ್ತು ನೀಡುವುದು, ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ, ಪೌಷ್ಟಿಕ ಆಹಾರ, ಮಹಿಳೆಯರ ಮತ್ತು ಮಕ್ಕಳ ದೌರ್ಜನ್ಯ ವಿರುದ್ಧ ಕಾರ್ಯನಿರ್ವಹಿಸಿರುವ, ಸಾಮಾಜಿಕ ನ್ಯಾಯ, ದುರ್ಬಲ ವರ್ಗದ ಸಬಲೀಕರಣ ಮತ್ತು ಈ ಸಂಬಂಧಿತ ವಿಭಾಗದಲ್ಲಿ ಕಾರ್ಯನಿರ್ವಹಿಸಿರುವ ವ್ಯಕ್ತಿಗಳು 2026–27ನೇ ಸಾಲಿನ ಪದ್ಮ ಪ್ರಶಸ್ತಿಗೆ ಅರ್ಜಿಗಳನ್ನು ಜುಲೈ 31 ರೊಳಗಾಗಿ ರಾಷ್ಟ್ರೀಯ ಪುರಸ್ಕಾರ್ ಪೋರ್ಟಲ್ https://awards.gov.inರಲ್ಲಿ ಸಲ್ಲಿಸಬೇಕಾಗಿರುತ್ತದೆ.

ನಿಗಧಿತ ದಿನಾಂಕದ ನಂತರ ಸಲ್ಲಿಸಿದ ಅರ್ಜಿಗಳನ್ನು ಯಾವುದೇ ಕಾರಣಕ್ಕೂ ಪರಿಗಣಿಸಲಾಗುವುದಿಲ್ಲ. ಹೆಚ್ಚಿನ ಮಾಹಿತಿಗಾಗಿ ಕಛೇರಿ ಅಥವಾ ಕಛೇರಿಯ ದೂರವಾಣಿ ಸಂಖ್ಯೆ:08152–222753, 223665 ನ್ನು ಕಛೇರಿ ವೇಳೆಯಲ್ಲಿ ಸಂಪರ್ಕಿಸಬಹುದೆಂದು ಇಲಾಖೆಯ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅರ್ಜಿ ಆಹ್ವಾನ

ಕೋಲಾರ

2026–27ನೇ ಶೈಕ್ಷಣಿಕ ವರ್ಷಕ್ಕೆ ಸಂಬಂಧಿಸಿದಂತೆ ಮೆಟ್ರಿಕ್ ನಂತರದ ಪದವಿ ಪೂವ, ಪದವಿ, ಸ್ನಾತಕೋತ್ತರ, ವೃತ್ತಿಪರ ಹಾಗೂ ಎಂಫಿಲ್ ಮತ್ತು ಪಿಹೆಚ್.ಡಿ ಕೋರ್ಸುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಕರ್ನಾಟಕ ರಾಜ್ಯದ ಅರ್ಹ ಅಲ್ಪಸಂಖ್ಯಾತರ ಸಮುದಾಯ ವರ್ಗದವರಾದ ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಭೌದ್ಧ, ಸಿಖ್, ಮತ್ತು ಪಾರ್ಸಿ ವಿದ್ಯಾರ್ಥಿಗಳಿಗಾಗಿ ಪೋರ್ಟಲ್‌ನಲ್ಲಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಲು ಕರ್ನಾಟಕ ರಾಜ್ಯದ ನಿವಾಸಿಯಾಗಿರಬೇಕು, ವಿದ್ಯಾರ್ಥಿಯ ಕುಟುಂಬದ ಒಟ್ಟು ವಾರ್ಷಿಕ ಆದಾಯ ರೂ. 2.50 ಲಕ್ಷ ಮೀರಿರಬಾರದು. (ವೃತ್ತಿಪರ ಹಾಗೂ ತಾಂತ್ರಿಕ ಕೋರ್ಸುಗಳಿಗೆ) ವಿದ್ಯಾರ್ಥಿಯ ಕುಟುಂಬದ ಒಟ್ಟು ವಾರ್ಷಿಕ ಆದಾಯ ರೂ. 2.00 ಲಕ್ಷ ಮೀರಿರಬಾರದು. (ಸಾಮಾನ್ಯ ಪದವಿ ಹಾಗೂ ಸ್ನಾತಕೋತ್ತರ ಪದವಿ ಕೋರ್ಸುಗಳು) ಈ ಯೋಜನೆಯ ಪ್ರಯೋಜನ ಪಡೆಯಲು ವಿದ್ಯಾರ್ಥಿಗಳು ತಮ್ಮ ಬ್ಯಾಂಕ್ ಖಾತೆಗೆ ಆಧಾರ ಸೀಡಿಂಗ್ ಆಗಿರುವ ಬಗ್ಗೆ ಖಚಿತಪಡಿಸಿಕೊಳ್ಳತಕ್ಕದ್ದು, ವಿದೇಶಿ ವಿದ್ಯಾರ್ಥಿವೇತನ ಯೋಜನೆಯ ಪ್ರಕ್ರಿಯೆಯು ಸರ್ಕಾರಿ ಆದೇಶದಲ್ಲಿನ ಇತರೆ ಷರತ್ತುಗಳಿಗೊಳಪಟ್ಟಿರುತ್ತದೆ. ಸರ್ಕಾರದಿಂದ ಕಾಲಕಾಲಕ್ಕೆ ಹೊರಡಿಸಲಾಗುವ ಆದೇಶ ಹಾಗೂ ಷರತ್ತುಗೊಳಪಟ್ಟು ಯಾವುದೇ ಅಂಶಗಳನ್ನು ಮಾರ್ಪಾಡು ಮಾಡುವ ಅಧಿಕಾರವನ್ನು ಸರ್ಕಾರ ಹೊಂದಿರುತ್ತದೆ.

# ‘ಎಸ್‌ಐಆರ್‌ಗೆ ಸಾರ್ವಜನಿಕರ ಸಹಕಾರ ಅಗತ್ಯ’



ಬೆಂಗಳೂರು

ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ನಡೆಯುತ್ತಿರುವ ವಿಶೇಷ ಮತದಾರರ ಪಟ್ಟಿ ಪರಿಷ್ಕರಣೆ (ಎಸ್‌ಐಆರ್) ಪ್ರಕ್ರಿಯೆ ವೇಗವಾಗಿ ಸಾಗುತ್ತಿದ್ದು, ಇದುವರೆಗೆ ಶೇ.87.44ರಷ್ಟು ಗಣತಿ ನಮೂನೆಗಳನ್ನು ಮತದಾರರಿಗೆ ವಿತರಿಸಲಾಗಿದೆ ಎಂದು ಜಿಲ್ಲಾಧಿಕಾರಿ ಡಾ. ಕೆ.ಎನ್. ಅನುರಾಧ ತಿಳಿಸಿದ್ದಾರೆ.

ಜಿಲ್ಲಾಡಳಿತ ಭವನದಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಜಿಲ್ಲೆಯ 9,12,913 ಮತದಾರರಲ್ಲಿ ಶೇ.91.33ರಷ್ಟು ಮತದಾರರ ಮ್ಯಾಪಿಂಗ್ ಪೂರ್ಣಗೊಂಡಿದ್ದು, ಮುಂದಿನ ಎರಡು–ಮೂರು ದಿನಗಳಲ್ಲಿ ಶೇ.100ರಷ್ಟು ಗಣತಿ ನಮೂನೆಗಳ ವಿತರಣೆ ಪೂರ್ಣಗೊಳಿಸಲಾಗುವುದು ಎಂದು ಹೇಳಿದರು.

ಈಗಾಗಲೇ ಶೇ.12ರಷ್ಟು ಗಣತಿ ನಮೂನೆಗಳನ್ನು ಡಿಜಿಟಲೀಕರಣ ಮಾಡಲಾಗಿದ್ದು, ಆನ್‌ಲೈನ್ ಮೂಲಕ 1,334 ಅರ್ಜಿಗಳು ಸಲ್ಲಿಕೆಯಾಗಿವೆ. ಅವುಗಳನ್ನು ಬೂತ್ ಮಟ್ಟದ ಅಧಿಕಾರಿಗಳು (ಬಿಎಲ್‌ಒ) ಪರಿಶೀಲಿಸುತ್ತಿದ್ದಾರೆ. ಜುಲೈ 29ರವರೆಗೆ ಬಿಎಲ್‌ಒಗಳು ಮನೆಮನೆಗೆ ಭೇಟಿ ನೀಡಿ ಪ್ರತಿಯೊಬ್ಬ ಮತದಾರರಿಗೆ ಎರಡು ಗಣತಿ ನಮೂನೆಗಳನ್ನು ನೀಡಲಿದ್ದು, ಅವುಗಳಲ್ಲಿ ಒಂದು ನಮೂನೆಯನ್ನು ಸಮರ್ಪಕವಾಗಿ ಭರ್ತಿ ಮಾಡಿ ಅಧಿಕಾರಿಗಳಿಗೆ ಹಿಂತಿರುಗಿಸಬೇಕು ಎಂದು ಮನವಿ ಮಾಡಿದರು.

ಜಿಲ್ಲೆಯಲ್ಲಿ 2002ರಲ್ಲಿ 7,91,165 ಮತದಾರರಿದ್ದರೆ, 2026ರ ಜುಲೈ 3ರ ವೇಳೆಗೆ ಈ ಸಂಖ್ಯೆ 9,12,913ಕ್ಕೆ ಏರಿಕೆಯಾಗಿದೆ. ತಾಲೂಕುವಾರು ಮ್ಯಾಪಿಂಗ್ ಪ್ರಗತಿಯಲ್ಲಿ ದೇವನಹಳ್ಳಿ ಶೇ.94.82, ಹೊಸಕೋಟೆ ಶೇ.92.64, ದೊಡ್ಡಬಳ್ಳಾಪುರ ಶೇ.91.99 ಹಾಗೂ ನೆಲಮಂಗಲ ಶೇ.88.23ರಷ್ಟು ಪ್ರಗತಿ ಸಾಧಿಸಿವೆ ಎಂದು ತಿಳಿಸಿದರು.

ವಲಸೆ ಕಾರ್ಮಿಕರು ಸೇರಿದಂತೆ ಎಲ್ಲ ಮತದಾರರ ಮಾಹಿತಿಯನ್ನು ಸಂಗ್ರಹಿಸಲು ವಿಶೇಷ ಕ್ರಮ ಕೈಗೊಳ್ಳಲಾಗಿದ್ದು, ಮತದಾರರು ಮನೆಗಳಲ್ಲಿ ಲಭ್ಯವಿಲ್ಲದಿದ್ದರೆ ಮನೆ ಮಾಲೀಕರ ಮೂಲಕ ಮೊಬೈಲ್ ಸಂಖ್ಯೆಯನ್ನು ಪಡೆದು ಸಂಪರ್ಕಿಸಲಾಗುತ್ತಿದೆ ಎಂದು ಹೇಳಿದರು.

ಗಣತಿ ನಮೂನೆಗಳ ವಿತರಣೆ ಹಾಗೂ ಸಂಗ್ರಹಣೆಗಾಗಿ ಬಿಎಲ್‌ಒಗಳು ಮನೆಮನೆಗೆ ಭೇಟಿ ನೀಡುವುದು ಕಡ್ಡಾಯವಾಗಿದ್ದು, ಮತದಾರರನ್ನು ಒಂದೇ ಸ್ಥಳಕ್ಕೆ ಕರೆಸಿ ಪ್ರಕ್ರಿಯೆ ನಡೆಸುವುದು ನಿಯಮಬಾಹಿರವಾಗಿದೆ. ಇಂತಹ ಕ್ರಮ ಕಂಡುಬಂದರೆ ಸಂಬಂಧಿಸಿದ ಅಧಿಕಾರಿಗಳ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳಲಾಗುವುದು ಎಂದು ಜಿಲ್ಲಾಧಿಕಾರಿ ಎಚ್ಚರಿಕೆ ನೀಡಿದರು.

ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಡಾ. ವಾಸಂತಿ ಅಮರ್ ಮಾತನಾಡಿ, ಎಸ್‌ಐಆರ್ ಕುರಿತು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲು ಸ್ವೀಪ್ ಕಾರ್ಯಕ್ರಮದಡಿ ವ್ಯಾಪಕ ಅಭಿಯಾನ ಹಮ್ಮಿಕೊಳ್ಳಲಾಗಿದೆ ಎಂದರು. ಜಿಲ್ಲೆಯ ಗ್ರಾಮ ಪಂಚಾಯಿತಿಗಳು ಹಾಗೂ ನಗರಸಭೆ ಪುರಸಭೆಗಳಲ್ಲಿ 127 ಬಿಎಲ್‌ಒ ಸಹಾಯ ಕೇಂದ್ರಗಳನ್ನು ಸ್ಥಾಪಿಸಲಾಗಿದ್ದು, 200ಕ್ಕೂ ಹೆಚ್ಚು ಸ್ವೀಪ್ ಕಾರ್ಯಕ್ರಮಗಳ ಮೂಲಕ ಸುಮಾರು 30 ಸಾವಿರ ವಿದ್ಯಾರ್ಥಿಗಳಿಗೆ ಮತದಾರರ ಜಾಗೃತಿ ಮೂಡಿಸಲಾಗಿದೆ ಎಂದು ತಿಳಿಸಿದರು.

ಜಿಲ್ಲೆಯಾದ್ಯಂತ ಬ್ಯಾನರ್, ಪೋಸ್ಟರ್ ಅಳವಡಿಸುವುದರ ಜೊತೆಗೆ 50 ಸಾವಿರಕ್ಕೂ ಹೆಚ್ಚು ಕರಪತ್ರಗಳನ್ನು ವಿತರಿಸಲಾಗಿದೆ. ಹಿರಿಯ ನಾಗರಿಕರು, ವಿಕಲಚೇತನರು ಹಾಗೂ ದುರ್ಬಲ ವರ್ಗದ ಮತದಾರರಿಗೆ ಗಣತಿ ನಮೂನೆ ವಿತರಣೆ ಮತ್ತು ಭರ್ತಿ ಮಾಡಲು ವಿಶೇಷ ನೆರವು ನೀಡಲಾಗುತ್ತಿದೆ. ಸೈಕಲ್ ಜಾಥಾ, ಬೈಕ್ ಜಾಥಾ, ಪಂಜಿನ ಮೆರವಣಿಗೆ ಸೇರಿದಂತೆ 50ಕ್ಕೂ ಹೆಚ್ಚು ಜಾಗೃತಿ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ. ಗ್ರಾಮ ಪಂಚಾಯಿತಿ ಹಾಗೂ ನಗರ ಸ್ಥಳೀಯ ಸಂಸ್ಥೆಗಳ ಸ್ವಚ್ಛತಾ ವಾಹನಗಳ ಮೂಲಕ ಪ್ರತಿದಿನ ಎಸ್‌ಐಆರ್ ಕುರಿತು ಧ್ವನಿ ಪ್ರಚಾರವೂ ನಡೆಸಲಾಗುತ್ತಿದೆ ಎಂದು ಹೇಳಿದರು.

ಗಣತಿ ನಮೂನೆಗಳನ್ನು ಅಪ್‌ಲೋಡ್ ಮಾಡಲು ಗ್ರಾಮ ಪಂಚಾಯಿತಿ ಹಾಗೂ ನಗರ ಸ್ಥಳೀಯ ಸಂಸ್ಥೆಗಳ ದತ್ತಾಂಶ ನಿರ್ವಾಹಕರಿಗೆ ಈಗಾಗಲೇ ತರಬೇತಿ ನೀಡಲಾಗಿದ್ದು, ಅಗತ್ಯ ತಾಂತ್ರಿಕ ಸೌಲಭ್ಯಗಳನ್ನು ಕಲ್ಪಿಸಲಾಗಿದೆ. ಎಸ್‌ಐಆರ್ ಪ್ರಕ್ರಿಯೆಯಲ್ಲಿ ಪ್ರತಿಯೊಬ್ಬ ಮತದಾರರೂ ಸಕ್ರಿಯವಾಗಿ ಭಾಗವಹಿಸಿ ಸಹಕರಿಸುವಂತೆ ಅಧಿಕಾರಿಗಳು ಮನವಿ ಮಾಡಿದರು.

# ಅರಣ್ಯ ಪ್ರದೇಶದಲ್ಲಿ, ಅಕ್ರಮವಾಗಿ ಮರಗಳು ಕಟಾವು ಮಾಡಿದ್ದವರ ಮೇಲೆ ಎಫ್‌ಐಆರ್



ವಿಜಯಪುರ

ಹೋಬಳಿಯ ಕೋರಮಂಗಲ ಅರಣ್ಯ ಪ್ರದೇಶಕ್ಕೆ ಅಕ್ರಮವಾಗಿ ಪ್ರವೇಶ ಮಾಡಿ, ಅನುಮತಿಯಿಲ್ಲದೆ ನೀಲಗಿರಿ ಮರಗಳನ್ನು ಕಡಿದಿರುವ ಆರೋಪದಡಿ, ಇಬ್ಬರ ಮೇಲೆ ವಲಯ ಅರಣ್ಯಾಧಿಕಾರಿ ನಾಗಾರ್ಜುನ ಅವರು ದೂರು ದಾಖಲಿಸಿದ್ದಾರೆ.

ಕೋರಮಂಗಲ ರಾಜ್ಯ ಬಡಾವಣೆ ಗಸ್ತು, ವಿಜಯಪುರ ಶಾಖೆ ದೇವನಹಳ್ಳಿ ವಲಯಕ್ಕೆ ಸೇರುವ ಚಿಕ್ಕತತ್ತಮಂಗಲ ಸ.ನಂ 47 ರ ಅರಣ್ಯ ಪ್ರದೇಶದಲ್ಲಿ, ಕೆ.ಎಫ್.ಡಿ.ಸಿ.ದೇವನಹಳ್ಳಿ ಘಟಕದ 1995 ನೇ ಸಾಲಿನ ನೀಲಗಿರಿ ನೆಡುತೋಪಿಗೆ ಅಕ್ರಮವಾಗಿ ಪ್ರವೇಶ ಮಾಡಿರುವ ತಿಮ್ಮನಹಳ್ಳಿ ಗ್ರಾಮದ ಮಹೇಶ್ ಕುಮಾರ್ ಹಾಗೂ ನಾರಾಯಣಪ್ಪ ಅವರು, 8 ಮರಗಳನ್ನು ಕಟಾವು ಮಾಡಿ, ಅವುಗಳನ್ನು 20 ತುಂಡುಗಳಾಗಿ ಕತ್ತರಿಸುವಾಗ ಸಿಕ್ಕಿ ಬಿದ್ದಿದ್ದಾರೆ. ಇವರಿಂದ ಮರದ ತುಂಡುಗಳನ್ನು ವಶಕ್ಕೆ ಪಡೆಯಲಾಗಿದೆ. ಎಂದು ದೂರಿನಲ್ಲಿ ವಿವರಿಸಿದ್ದಾರೆ.

# ‘ರೈತರಿಗೆ ಬೆಳೆ ವಿಮೆ ಕುರಿತು ಜಾಗೃತಿ ಮೂಡಿಸಿ’




ಬೆಂಗಳೂರು ಗ್ರಾಮಾಂತರ

ಕೃಷಿ ಹಾಗೂ ತೋಟಗಾರಿಕೆ ಇಲಾಖೆಯ ಅಧಿಕಾರಿಗಳು ಮತ್ತು ಬೆಳೆ ವಿಮಾ ಸಂಸ್ಥೆಗಳು ಜಂಟಿಯಾಗಿ ಸ್ಥಳೀಯ ಮಟ್ಟದಲ್ಲಿ ರೈತರಿಗೆ ಬೆಳೆ ವಿಮೆ ಯೋಜನೆಗಳ ಬಗ್ಗೆ ಸಮಗ್ರ ಅರಿವು ಮೂಡಿಸಬೇಕು ಎಂದು ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಅಪರ ಜಿಲ್ಲಾಧಿಕಾರಿ ಸೈಯಿದಾ ಆಯಿಷಾ ಸೂಚಿಸಿದರು.

ಜಿಲ್ಲಾಡಳಿತ ಭವನದ ಜಿಲ್ಲಾಧಿಕಾರಿಯವರ ಕಚೇರಿ ಸಭಾಂಗಣದಲ್ಲಿ ನಡೆದ ಬೆಳೆ ಸಮೀಕ್ಷೆ ಅನುಷ್ಠಾನ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಕೃಷಿ ಇಲಾಖೆಯ ಕರ್ನಾಟಕ ರೈತ ಸುರಕ್ಷಾ ಪ್ರಧಾನಮಂತ್ರಿ ಫಸಲ್ ಭೀಮಾ ಯೋಜನೆ ಹಾಗೂ ತೋಟಗಾರಿಕೆ ಇಲಾಖೆಯ ಹವಾಮಾನ ಆಧಾರಿತ ಬೆಳೆ ವಿಮಾ ಯೋಜನೆಗಳ ಕುರಿತು ರೈತರಿಗೆ ಸ್ಪಷ್ಟ ಮಾಹಿತಿ ನೀಡುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಯಾವ ಬೆಳೆಗೆ ಎಷ್ಟು ವಿಮಾ ಪ್ರೀಮಿಯಂ ಪಾವತಿಸಬೇಕು, ಎಷ್ಟು ವಿಮೆ ಸೌಲಭ್ಯ ದೊರೆಯಲಿದೆ ಎಂಬ ಮಾಹಿತಿಯನ್ನು ರೈತರಿಗೆ ತಲುಪಿಸಬೇಕು. ಅತಿವೃಷ್ಟಿ, ಅನಾವೃಷ್ಟಿ ಸೇರಿದಂತೆ ವಿವಿಧ ಪ್ರಕೃತಿ ವಿಕೋಪಗಳಿಂದ ಬೆಳೆ ಹಾನಿಯಾದ ಸಂದರ್ಭದಲ್ಲಿ ಬೆಳೆ ವಿಮೆ ರೈತರಿಗೆ ಆರ್ಥಿಕ ನೆರವಾಗುತ್ತದೆ.

ಆದ್ದರಿಂದ ಜಿಲ್ಲೆಯ ಎಲ್ಲಾ ರೈತರಿಗೆ ಯೋಜನೆಯ ಬಗ್ಗೆ ಜಾಗೃತಿ ಮೂಡಿಸಿ, ಹೆಚ್ಚಿನ ಸಂಖ್ಯೆಯಲ್ಲಿ ನೋಂದಾಯಿಸಲು ಪ್ರೇರೇಪಿಸಬೇಕು ಎಂದು ಹೇಳಿದರು.

ಸಭೆಯಲ್ಲಿ ಈ ಸಾಲಿನ ಬೆಳೆ ಸಮೀಕ್ಷೆ ಕಾರ್ಯದ ಕುರಿತು ಮಾತನಾಡಿದ ಅವರು, ಸಮೀಕ್ಷೆಯನ್ನು ಅತ್ಯಂತ ನಿಖರವಾಗಿ ನಡೆಸುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು. ಸಮೀಕ್ಷೆ ನಡೆಸುವ ಸಿಬ್ಬಂದಿಗೆ ಸಮರ್ಪಕ ತರಬೇತಿ ನೀಡಬೇಕು ಹಾಗೂ ಮೊಬೈಲ್ ಅಪ್ಲಿಕೇಶನ್ ಮೂಲಕ ಬೆಳೆ ಮಾಹಿತಿಯನ್ನು ದಾಖಲಿಸಿ ನಿಖರ ಅಂಕಿಅಂಶಗಳನ್ನು ಸಂಗ್ರಹಿಸಬೇಕು ಎಂದು ತಿಳಿಸಿದರು.

ಬೆಳೆ ಸಮೀಕ್ಷೆಯಿಂದ ಸಂಗ್ರಹವಾಗುವ ದತ್ತಾಂಶವು ಕನಿಷ್ಠ ಬೆಂಬಲ ಬೆಲೆ, ಸಬ್ಸಿಡಿ ಪಾವತಿ, ಬೆಳೆ ಪ್ರದೇಶದ ಅಂದಾಜು ಹಾಗೂ ಕೃಷಿ ಮತ್ತು ತೋಟಗಾರಿಕೆ ಇಲಾಖೆಗಳ ವಿವಿಧ ಯೋಜನೆಗಳ ಫಲಾನುಭವಿಗಳ ಆಯ್ಕೆಗೆ ಮಹತ್ವದ ಆಧಾರವಾಗಿರುವುದರಿಂದ ಯಾವುದೇ ಲೋಪವಾಗದಂತೆ ಸಮೀಕ್ಷೆ ನಡೆಸಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು.

ಸಭೆಯಲ್ಲಿ ಕೃಷಿ, ತೋಟಗಾರಿಕೆ, ರೇಷ್ಮೆ, ಮೀನುಗಾರಿಕೆ, ಕೃಷಿ ಮಾರುಕಟ್ಟೆ ಹಾಗೂ ಜಲಾನಯನ ಅಭಿವೃದ್ಧಿ ಇಲಾಖೆಗಳ ಅಧಿಕಾರಿಗಳು, ಲೀಡ್ ಬ್ಯಾಂಕ್ ಪ್ರತಿನಿಧಿಗಳು ಹಾಗೂ ವಿವಿಧ ವಿಮಾ ಸಂಸ್ಥೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

# ರಸ್ತೆಗೆ ಕಟ್ಟಿರುವ ಬ್ಲಾಕ್ ಸ್ಪಾಟ್ ಶೇಡ್ ನೆಟ್ ತೆರವುಗೊಳಿಸಲು ಒತ್ತಾಯ

ವಿಜಯಪುರ

ಹೋಬಳಿಯ ಕೋರಮಂಗಲದಿಂದ ಆವತಿಯ ಕಡೆಗೆ ಸಂಚರಿಸುವ ರಸ್ತೆಯಲ್ಲಿ, ಕಸ ಸುರಿಯುತ್ತಿದ್ದ ಜಾಗದಲ್ಲಿ, ಆವತಿ ಗ್ರಾಮ ಪಂಚಾಯಿತಿಯ ವತಿಯಿಂದ, ಶೇಡ್ ನೆಟ್ ಮೂಲಕ ಬ್ಲಾಕ್ ಸ್ಪಾಟ್ ನಿರ್ಮಿಸಿದ್ದು, ಇದು, ವಾಹನ ಸವಾರರ ಪ್ರಾಣಕ್ಕೆ ಸಂಚಕಾರವನ್ನು ತಂದೊಡ್ಡುತ್ತಿದ್ದು, ಕೂಡಲೇ ಶೇಡ್ ನೆಟ್ ತೆರವುಗೊಳಿಸುವಂತೆ ಮುದುಗುರ್ಕಿ ಗ್ರಾಮ ಪಂಚಾಯಿತಿ ಮಾಜಿ ಸದಸ್ಯ ಎಂ.ಮಾರಪ್ಪ ಒತ್ತಾಯಿಸಿದ್ದಾರೆ.

ಕೋರಮಂಗಲದಿಂದ ಆವತಿಯ ಕಡೆಗೆ ಸಂಚರಿಸುವ ವಾಹನಗಳೆಲ್ಲಾ ಇದೇ ರಸ್ತೆಯಲ್ಲೆ ಸಂಚರಿಸುತ್ತವೆ. ಪಂಚಾಯಿತಿಯವರು, ಕಸ ಹಾಕುವುದನ್ನು ತಡೆದು, ಜನರಿಗೆ ಜಾಗೃತಿ ಮೂಡಿಸಲು, ಬ್ಲಾಕ್ ಸ್ಪಾಟ್ ಮಾಡಿದ್ದಾರೆ. ಈ ಬ್ಲಾಕ್ ಸ್ಪಾಟ್‌ಗೆ ಶೇಡ್ ನೆಟ್ ಕಟ್ಟಿದ್ದು, ಇತ್ತಿಚೆಗೆ ಹೆಚ್ಚು ಗಾಳಿ ಇರುವ ಕಾರಣ, ನೆಟ್ ಕಿತ್ತುಕೊಂಡು ಬಂದು ವಾಹನ ಸವಾರರಿಗೆ ಬಡಿಯುವ ಸಾಧ್ಯತೆಗಳಿರುವುದರ ಜೊತೆಗೆ, ರಾತ್ರಿಯ ವೇಳೆ ಈ ರಸ್ತೆಯಲ್ಲಿ ಸಂಚರಿಸುವ ವಾಹನ ಸವಾರರು, ಬ್ಲಾಕ್ ಸ್ಪಾಟ್ ಇರುವುದನ್ನು ಗುರ್ತಿಸಲು ಸಾಧ್ಯವಾಗದೆ, ಅಪಾಯಕ್ಕೆ ಸಿಲುಕುವ ಸಾಧ್ಯತೆ ಇದೆ. ಆದ್ದರಿಂದ ನೆಟ್ ತೆರವುಗೊಳಿಸಿ, ಕಬ್ಬಿಣದ ಮೆಶ್ ಅಳವಡಿಸುವ ಮೂಲಕ ಇಲ್ಲಿ ಆಗಲಿರುವ ಅಪಾಯವನ್ನು ತಪ್ಪಿಸಬೇಕು ಎಂದು ಒತ್ತಾಯಿಸಿದ್ದಾರೆ.




ತುಮಕೂರು ಸರ್ಕಾರಿ ಜಿಲ್ಲಾಸ್ಪತ್ರೆಯಲ್ಲಿ ಉಪ ಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್ ತಮ್ಮ ಕಣ್ಣು ಪರೀಕ್ಷೆ ಮಾಡಿಸಿಕೊಂಡರು. ಜಿಲ್ಲಾ ಶಸ್ತಚಿಕಿತ್ಸಕ ಡಾ.ಅಸ್ಗರ್ ಬೇಗ್ ಕಣ್ಣು ಪರೀಕ್ಷೆ ಮಾಡಿದರು. ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಬಿ.ಎಂ.ಚಂದ್ರಶೇಖರ್ ಉಪಸ್ಥಿತರಿದ್ದರು.

# ಬಾಲ್ಯ ವಿವಾಹ ಕಾನೂನುಬಾಹಿರ, ಶಿಕ್ಷಾರ್ಹ ಅಪರಾಧ: ವಿದ್ಯಾರ್ಥಿಗಳಿಗೆ ಅನಿತಾಲಕ್ಷ್ಮಿ ಅರಿವು

ದೊಡ್ಡಬಳ್ಳಾಪುರ

ಬಾಲ್ಯ ವಿವಾಹವು ಮಕ್ಕಳ ಭವಿಷ್ಯವನ್ನು ಹಾಳುಮಾಡುವ ಗಂಭೀರ ಸಾಮಾಜಿಕ ಪಿಡುಗಾಗಿದ್ದು, ಭಾರತದಲ್ಲಿ ಇದು ಕಾನೂನುಬಾಹಿರ ಹಾಗೂ ಶಿಕ್ಷಾರ್ಹ ಅಪರಾಧವಾಗಿದೆ ಎಂದು ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಸಮಾಜ ಕಾರ್ಯಕರ್ತೆ ಅನಿತಾಲಕ್ಷ್ಮಿ ಹೇಳಿದರು.

ನಗರದ ಕೊಂಗಾಡಿಯಪ್ಪ ಪದವಿಪೂರ್ವ ಕಾಲೇಜಿನಲ್ಲಿ ಫ್ಯೂಚರ್ ವಿಜನ್ ಫೌಂಡೇಶನ್ ಸೊಸೈಟಿ ವತಿಯಿಂದ ಆಯೋಜಿಸಿದ್ದ ಪೋಕ್ಸೊ ಕಾಯಿದೆ, ಬಾಲ್ಯ ವಿವಾಹ ಮತ್ತು ಬಾಲ ಕಾರ್ಮಿಕ ಪದ್ಧತಿ ಕುರಿತ ಜಾಗೃತಿ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಬಾಲ್ಯ ವಿವಾಹವನ್ನು ತಡೆಗಟ್ಟಲು ಸರ್ಕಾರ ಕಟ್ಟುನಿಟ್ಟಿನ ಕಾನೂನು ಜಾರಿಗೆ ತಂದಿದೆ. ಬಾಲ್ಯ ವಿವಾಹವನ್ನು ಮಾಡಿಸುವ, ನಡೆಸಿಕೊಡುವ ಅಥವಾ ಪ್ರೋತ್ಸಾಹಿಸುವ ಪೋಷಕರು ಹಾಗೂ ಸಂಬಂಧಪಟ್ಟವರ ವಿರುದ್ಧ ಜೈಲು ಶಿಕ್ಷೆ ಮತ್ತು ದಂಡದಂತಹ ಕಾನೂನು ಕ್ರಮ ಕೈಗೊಳ್ಳಲಾಗುತ್ತದೆ ಎಂದು ಎಚ್ಚರಿಸಿದರು.

ಮಕ್ಕಳ ಹಕ್ಕುಗಳ ರಕ್ಷಣೆ ಮತ್ತು ಬಾಲ ಕಾರ್ಮಿಕ ಪದ್ಧತಿ ನಿರ್ಮೂಲನೆಗಾಗಿ ಸರ್ಕಾರ ಹಲವು ಕಾನೂನುಗಳನ್ನು ಜಾರಿಗೆ ತಂದಿದ್ದು, ಪ್ರತಿಯೊಂದು ಮಗುವಿಗೂ ಸುರಕ್ಷಿತ ಹಾಗೂ ಪ್ರೀತಿಯ ವಾತಾವರಣದಲ್ಲಿ ಬೆಳೆಯುವ ಹಕ್ಕಿದೆ. ಮಕ್ಕಳ ಮೇಲೆ ನಡೆಯುವ ಯಾವುದೇ ರೀತಿಯ ದೌರ್ಜನ್ಯವು ಅವರ ಮಾನಸಿಕ ಮತ್ತು ದೈಹಿಕ ಬೆಳವಣಿಗೆಯ ಮೇಲೆ ಗಂಭೀರ ಪರಿಣಾಮ ಬೀರುತ್ತದೆ ಎಂದು ಅವರು ತಿಳಿಸಿದರು.

ಫ್ಯೂಚರ್ ವಿಜನ್ ಫೌಂಡೇಶನ್ ಸೊಸೈಟಿಯ ಕಾನೂನು ಸಲಹೆಗಾರ ಮಧುಸೂದನ್ ಮಾತನಾಡಿ, ಪೋಕ್ಸೊ ಕಾಯಿದೆ 18 ವರ್ಷದೊಳಗಿನ ಮಕ್ಕಳನ್ನು ಲೈಂಗಿಕ ದೌರ್ಜನ್ಯ ಮತ್ತು ಕಿರುಕುಳದಿಂದ ರಕ್ಷಿಸಲು ರೂಪಿಸಲಾದ ವಿಶೇಷ ಕಾನೂನು ಎಂದು ವಿವರಿಸಿದರು. ಮಗುವಿನ ಮೇಲೆ ಲೈಂಗಿಕ ದೌರ್ಜನ್ಯ ನಡೆದಿದೆ ಎಂಬ ಮಾಹಿತಿ ತಿಳಿದಿದ್ದರೂ ಪೊಲೀಸರಿಗೆ ದೂರು ನೀಡದ ಶಿಕ್ಷಕರು, ವೈದ್ಯರು ಅಥವಾ ಇತರ ಸಂಸ್ಥೆಗಳ ವಿರುದ್ಧವೂ ಕಾನೂನು ಕ್ರಮ ಕೈಗೊಳ್ಳಲು ಅವಕಾಶವಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಲೋಕಸೇವಾ ನಿರತ ಡಿ. ಕೊಂಗಾಡಿಯಪ್ಪ ಸ್ಮಾರಕ ವಿದ್ಯಾಸಂಸ್ಥೆಯ ಉಪಾಧ್ಯಕ್ಷ ಶ್ರೀನಿವಾಸಮೂರ್ತಿ, ಕೊಂಗಾಡಿಯಪ್ಪ ಪದವಿಪೂರ್ವ ಕಾಲೇಜಿನ ಪ್ರಾಂಶುಪಾಲ ಎನ್. ಶ್ರೀನಿವಾಸ್, ಫ್ಯೂಚರ್ ವಿಜನ್ ಫೌಂಡೇಶನ್ ಸೊಸೈಟಿ ಅಧ್ಯಕ್ಷ ಜಿ.ಎನ್. ಸುನೀಲ್ ಕುಮಾರ್, ಸಂಯೋಜಕರಾದ ವಿಕಾಸ್ ಮತ್ತು ಮೂರ್ತಿ, ಕಾಲೇಜಿನ ಉಪನ್ಯಾಸಕರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

3S ಭಾರತ ಸಾರಥಿ
BHARATHA SARATHI KANNADA DAILY NEWS PAPER
12/07/2026
ಬೆಂಗಳೂರು । ಬೆಂ.ಗ್ರಾಮಾಂತರ । ತುಮಕೂರು । ಮೈಸೂರು । ಮಂಡ್ಯ । ರಾಮನಗರ । ಕೋಲಾರ । ಚಿಕ್ಕಬಳ್ಳಾಪುರ । ಚಿತ್ರದುರ್ಗ । ದಾವಣಗೆರೆ । ಶಿವಮೊಗ್ಗ । ಮಂಗಳೂರು । ಉಡುಪಿ । ಹುಬ್ಬಳ್ಳಿ । ಮಡಿಕೇರಿ । ಚಿಕ್ಕಮಗಳೂರು । ಹಾಸನ । ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# ಮೀನುಗಾರರಿಗೆ ಸೌಲಭ್ಯ/ಸಹಾಯಧನ: ಅರ್ಜಿ ಆಹ್ವಾನ

ತುಮಕೂರು

ಮೀನುಗಾರಿಕೆ ಇಲಾಖೆಯು ಮೀನುಗಾರಿಕೆಯಲ್ಲಿ ತೊಡಗಿರುವ ಅರ್ಹ ಮೀನುಗಾರರು/ ಮೀನು ಕೃಷಿಕರು/ ಸಂಘಗಳಿಗೆ 2026–27ನೇ ಸಾಲಿನಲ್ಲಿ ವಿವಿಧ ಜಿಲ್ಲಾ ವಲಯ ಯೋಜನೆಗಳ ಕಾರ್ಯಕ್ರಮದಡಿ ಸೌಲಭ್ಯ ವಿತರಣೆ/ಸಹಾಯಧನ ಸೌಲಭ್ಯ ಕಲ್ಪಿಸಲು ಅರ್ಜಿ ಆಹ್ವಾನಿಸಿದೆ.

ವಿಶೇಷ ಘಟಕ ಯೋಜನೆ, ಗಿರಿಜನ ಉಪ ಯೋಜನೆ ಹಾಗೂ ಸಮಗ್ರ ಮೀನುಗಾರಿಕೆ ಅಭಿವೃದ್ಧಿ ಕಾರ್ಯಕ್ರಮದಡಿ ಮೀನುಗಾರಿಕೆ ಸಲಕರಣೆಗಳಾದ ನೈಲಾನ್ ಬಲೆ, ತಕ್ಕಡಿ, ಪ್ಲಾಸ್ಟಿಕ್ ಕ್ರೇಟ್ಸ್, ಲೈಫ್ ಜಾಕೆಟ್, ಫೈಬರ್ ಗ್ಲಾಸ್ ಹರಿಗೋಲು, ಇನ್ಸುಲೇಟೆಡ್ ಬಾಕ್ಸ್ ಇತ್ಯಾದಿಗಳನ್ನು 20,000 ರೂ.ಗಳವರೆಗೆ ಉಚಿತವಾಗಿ ನೀಡಲಾಗುವುದು.

ಜಿಲ್ಲಾ ವಲಯದಲ್ಲಿ ಮೀನು ಮಾರುಕಟ್ಟೆಗಳ ನಿರ್ಮಾಣ ಮತ್ತು ಮೀನು ಮಾರಾಟಕ್ಕೆ ಸಹಾಯ ಮತ್ಸ್ಯವಾಹಿನಿ ಯೋಜನೆಯಡಿ ಮೀನು ಮಾರಾಟಕ್ಕಾಗಿ ಮೀನು ಮಾರಾಟಗಾರರಿಗೆ ತ್ರಿಚಕ್ರ ವಾಹನ (ಆಟೋ), ದ್ವಿಚಕ್ರ ವಾಹನ (ಮೊಪೆಡ್) ಹಾಗೂ ಸೈಕಲ್‌ನೊಂದಿಗೆ ಶಾಖ ನಿರೋಧಕ ಪೆಟ್ಟಿಗೆ ಖರೀದಿಗೆ ಸಹಾಯಧನ ನೀಡಲಾಗುವುದು.

ಕೆರೆ/ಜಲಾಶಯಗಳ ಅಂಚಿನಲ್ಲಿ ನಿರ್ಮಿಸಿರುವ ಮೀನುಮರಿ ಪಾಲನಾ ಕೊಳಗಳಲ್ಲಿ ಮೀನುಮರಿಗಳನ್ನು ಪಾಲನೆ ಮಾಡಲು ಮೀನುಗಾರರು/ಸಂಘಗಳಿಗೆ ಸಹಾಯಧನ ನೀಡಲಾಗುವುದು. ಮೀನುಮರಿಗಳನ್ನು ಇಲಾಖೆಯ ಮೀನುಮರಿ ಕೇಂದ್ರಗಳಿಂದ ಅಥವಾ ಮೀನುಗಾರಿಕೆ ಇಲಾಖೆಯಲ್ಲಿ ನೋಂದಣಿ ಮಾಡಿರುವ ಖಾಸಗಿ ಫಾರಂಗಳಿಂದ ಮೀನುಮರಿಗಳನ್ನು ಖರೀದಿಸಿ ಕೆರೆ/ಜಲಾಶಯಗಳಿಗೆ ಬಿತ್ತನೆಗೆ ಜಲ ವಿಸ್ತೀರ್ಣಕ್ಕನುಗುಣವಾಗಿ ಪಾಲನೆ ಕೈಗೊಳ್ಳಲು ಮೀನು ಕೃಷಿಕರಿಗೆ ಗರಿಷ್ಠ 5,000 ರೂ. ಮತ್ತು ಮೀನುಗಾರರ ಸಹಕಾರ ಸಂಘಗಳಿಗೆ ಗರಿಷ್ಠ 20,000 ರೂ.ಗಳವರೆಗೆ ಮೀನುಮರಿ ಖರೀದಿಗೆ ಸಹಾಯಧನ ನೀಡಲಾಗುವುದು.

ನಿಗದಿತ ಅರ್ಜಿ ನಮೂನೆಯನ್ನು ತುಮಕೂರು ಹಾಗೂ ಪಾವಗಡ ತಾಲ್ಲೂಕು ಮೀನುಗಾರಿಕೆ ಸಹಾಯಕ ನಿರ್ದೇಶಕರ ಕಚೇರಿಯಿಂದ ಪಡೆದು ಭರ್ತಿ ಮಾಡಿದ ಅರ್ಜಿಯನ್ನು ಅಗತ್ಯ ದಾಖಲೆಗಳೊಂದಿಗೆ ಜುಲೈ 31ರೊಳಗಾಗಿ ಸಂಬಂಧಿಸಿದ ತಾಲ್ಲೂಕು ಮೀನುಗಾರಿಕೆ ಸಹಾಯಕ ನಿರ್ದೇಶಕರ ಕಚೇರಿಗೆ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಮೀನುಗಾರಿಕೆ ಸಹಾಯವಾಣಿ ಸಂಖ್ಯೆ: 8277200300, ಮೀನುಗಾರಿಕೆ ಸಹಾಯಕ ನಿರ್ದೇಶಕರ ಕಚೇರಿ ತುಮಕೂರು ಹಾಗೂ ಪಾವಗಡ–9844665991ನ್ನು ಸಂಪರ್ಕಿಸಬೇಕೆಂದು ಪ್ರಕಟಣೆ ತಿಳಿಸಿದೆ.



ಶ್ರೀಪರಾಭವ ಸಂವತ್ಸರ ಜ್ಯೇಷ್ಠ ಕೃಷ್ಣ ದಶಮಿ, ಗುರುವಾರದಂದು ಶ್ರೀಮನ್ಮಾಧವತೀರ್ಥ ಮಠದ ಪೂರ್ವ ಪೀಠಾಧಿಪತಿಗಳಾದ ಶ್ರೀಶ್ರೀ1008ಶ್ರೀ ಪ್ರಾಜ್ಞ ಮಾಧವ ತೀರ್ಥರ ಆರಾಧನೆಯನ್ನು ಶ್ರೀಮಠದ ಪ್ರಸ್ತುತ ಪೀಠಾಧಿಪತಿಗಳಾದ ಶ್ರೀಶ್ರೀ108 ಶ್ರೀ ವಿದ್ಯಾ ವಲ್ಲಭ ಮಾಧವ ತೀರ್ಥ ಶ್ರೀಪಾದಂಗಳವರ ನೇತೃತ್ವದಲ್ಲಿ ಮುಳಬಾಗಲಿನಲ್ಲಿರುವ ಗುರುಗಳ ಮೂಲ ವೃಂದಾವನ ಸನ್ನಿಧಾನದಲ್ಲಿ ವೈಭವದಿಂದ ನೆರವೇರಿಸಲಾಯಿತು. ಆರಾಧನೆಯ ಅಂಗವಾಗಿ ಗುರುಗಳ ಮೂಲ ವೃಂದಾವನಕ್ಕೆ ಶ್ರೀಪಾದಂಗಳವರಿಂದ ಪಂಚಾಮೃತ ಅಭಿಷೇಕ, ಶ್ರೀಮದ್ವೀರರಾಮದೇವರ ಸಂಸ್ಥಾನ ಪೂಜೆ, ಅಲಂಕಾರ ಪಂಕ್ತಿ, ಬ್ರಾಹ್ಮಣ ಸುವಾಸಿನೀ ಸಮಾರಾಧನೆ ನಡೆಯಿತು. ನೂರಾರು ಮಂದಿ ಭಕ್ತರು ಆರಾಧನಾ ಕಾರ್ಯಕ್ರಮದಲ್ಲಿ ಭಾಗವಹಿಸಿ ಶ್ರೀವೀರರಾಮದೇವರ ಹಾಗು ಗುರುಗಳ ಅನುಗ್ರಹಕ್ಕೆ ಪಾತ್ರರಾದರು.

# 'ಪಕ್ಷದ ಹಿತದೃಷ್ಟಿಯಿಂದ ಸಂಘಟನೆಗೆ ಒತ್ತು'

ಬೆಂಗಳೂರು

ಪಕ್ಷದ ಸಂಘಟನೆಗೆ ಆದ್ಯತೆ ನೀಡಿ, ವೈಯಕ್ತಿಕ ಭಿನ್ನಾಭಿಪ್ರಾಯಗಳು ಪಕ್ಷದ ಮೇಲೆ ಯಾವುದೇ ರೀತಿಯ ಪರಿಣಾಮ ಬೀರದಂತೆ ಎಲ್ಲರೂ ಕಾರ್ಯನಿರ್ವಹಿಸಬೇಕು ಎಂಬ ವಿಚಾರದ ಕುರಿತು ಚರ್ಚೆ ನಡೆಸಲಾಗಿದೆ ಎಂದು ಬಿಜೆಪಿ ಸಂಸದ ಡಾ. ಕೆ. ಸುಧಾಕರ್ ತಿಳಿಸಿದ್ದಾರೆ.

ನಗರದ ಬಿಜೆಪಿ ರಾಜ್ಯ ಕಾರ್ಯಾಲಯ ಜಗನ್ನಾಥ ಭವನದಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಪಕ್ಷದ ರಾಜ್ಯ ಉಸ್ತುವಾರಿ ಡಾ. ರಾಧಾಮೋಹನ್ ದಾಸ್ ಅಗ್ರವಾಲ್ ಅವರ ನೇತೃತ್ವದಲ್ಲಿ ನಡೆದ ಸಭೆಯಲ್ಲಿ ಸಂಘಟನೆ ಬಲವರ್ಧನೆ ಕುರಿತು ಮಹತ್ವದ ಚರ್ಚೆ ನಡೆಯಿತು ಎಂದು ಹೇಳಿದರು.

ತಮ್ಮ ತಮ್ಮ ಕಾರ್ಯವ್ಯಾಪ್ತಿಯಲ್ಲಿ ಪಕ್ಷವನ್ನು ಹೇಗೆ ಮತ್ತಷ್ಟು ಸದೃಢಗೊಳಿಸಬೇಕು, ಸಂಘಟನೆ ವಿಸ್ತರಣೆಗೆ ಯಾವ ರೀತಿಯ ಕಾರ್ಯತಂತ್ರ ರೂಪಿಸಬೇಕು ಎಂಬ ವಿಚಾರಗಳ ಕುರಿತು ಸಭೆಯಲ್ಲಿ ಚರ್ಚಿಸಲಾಗಿದೆ. ಪಕ್ಷದೊಳಗೆ ಯಾವುದೇ ಭಿನ್ನಾಭಿಪ್ರಾಯಗಳಿದ್ದರೂ ಅವು ಪಕ್ಷದ ಹಿತಾಸಕ್ತಿಗೆ ಧಕ್ಕೆಯಾಗದಂತೆ ಎಲ್ಲರೂ ಒಗ್ಗಟ್ಟಿನಿಂದ ಕೆಲಸ ಮಾಡಬೇಕು ಎಂದು ಉಸ್ತುವಾರಿಗಳು ಸಲಹೆ ನೀಡಿದ್ದಾರೆ ಎಂದು ತಿಳಿಸಿದರು. ಪಕ್ಷ ಸಂಘಟನೆಯ ಸಂದರ್ಭದಲ್ಲಿ ಉಂಟಾಗುವ ಸಣ್ಣಪುಟ್ಟ ವ್ಯತ್ಯಾಸಗಳನ್ನು ಪರಸ್ಪರ ಸಮನ್ವಯದ ಮೂಲಕ ಬಗೆಹರಿಸಿಕೊಂಡು, ಪಕ್ಷದ ಹಿತದೃಷ್ಟಿಯಿಂದ ಉತ್ತಮ ನಿರ್ಧಾರಗಳನ್ನು ಕೈಗೊಳ್ಳಲು ಎಲ್ಲರೂ ಒಪ್ಪಿಕೊಂಡಿದ್ದೇವೆ ಎಂದರು.

ಸಭೆಯಲ್ಲಿ ಯಾವುದೇ ಬೇಡಿಕೆ ಅಥವಾ ದೂರುಗಳ ಬಗ್ಗೆ ಚರ್ಚೆಯಾಗಿಲ್ಲ. ಇದು ಪಕ್ಷದ ಹಿರಿಯ ನಾಯಕರ ನಡುವೆ ನಡೆದ ಸೌಹಾರ್ದಯುತ ಹಾಗೂ ಪ್ರಬುದ್ಧ ಚರ್ಚೆಯಾಗಿದ್ದು, ಸಂಘಟನೆಯನ್ನು ಮತ್ತಷ್ಟು ಬಲಪಡಿಸುವ ನಿಟ್ಟಿನಲ್ಲಿ ಅಭಿಪ್ರಾಯ ವಿನಿಮಯ ಮಾತ್ರ ನಡೆದಿದೆ ಎಂದು ಡಾ. ಸುಧಾಕರ್ ಸ್ಪಷ್ಟಪಡಿಸಿದರು.

# ಡೆಂಗ್ಯೂ ರೋಗ ನಿಯಂತ್ರಣಕ್ಕೆ ಸಹಕರಿಸಲು ಮನವಿ

ತುಮಕೂರು

ಜಿಲ್ಲೆಯಲ್ಲಿ ಡೆಂಗ್ಯೂ ಹಾಗೂ ಚಿಕನ್‌ಗುನ್ಯಾ ರೋಗಗಳನ್ನು ನಿಯಂತ್ರಿಸಲು ಸಹಕರಿಸಬೇಕೆಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಚಂದ್ರಶೇಖರ್ ಜನರಲ್ಲಿ ಮನವಿ ಮಾಡಿದರು.

ಡೆಂಗ್ಯೂ ವಿರೋಧಿ ಮಾಸಾಚರಣೆ ಅಂಗವಾಗಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಮಹಾನಗರಪಾಲಿಕೆ ಸಂಯುಕ್ತಾಶ್ರಯದಲ್ಲಿ ಬುಧವಾರ ನಗರದ ಮಹಾನಗರಪಾಲಿಕೆ ಆವರಣದಿಂದ ಆಯೋಜಿಸಲಾಗಿದ್ದ ಜನ ಜಾಗೃತಿ ಜಾಥಾ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.



ಡೆಂಗ್ಯೂ ಹಾಗೂ ಚಿಕನ್‌ಗುನ್ಯಾ ರೋಗವು ವೈರಾಣುಗಳಿಂದ ಬರುವ ಖಾಯಿಲೆಗಳಾಗಿದ್ದು, ಸೊಳ್ಳೆ ಕಡಿತದಿಂದ ಒಬ್ಬರಿಂದ ಒಬ್ಬರಿಗೆ ಹರಡುತ್ತದೆ. ಮಳೆಗಾಲದಲ್ಲಿ ಹೆಚ್ಚಾಗಿ ಕಂಡು ಬರುವ ಈ ರೋಗವನ್ನು ನಿಯಂತ್ರಿಸಲು ಜನ ಸಮುದಾಯದ ಸಹಭಾಗಿತ್ವ ಅಗತ್ಯ. ಮಳೆ ನೀರು ಸಂಗ್ರಹದ ಸ್ಥಳದಲ್ಲಿ ಸೊಳ್ಳೆಗಳ ಉತ್ಪತ್ತಿ ಹೆಚ್ಚುತ್ತದೆ. ಈ ನಿಟ್ಟಿನಲ್ಲಿ ಜನಸಮುದಾಯ ತಮ್ಮ ಮನೆಯ ಸುತ್ತಮುತ್ತ ಮಳೆ ನೀರು ಸಂಗ್ರಹವಾಗದಂತೆ ಸ್ವಚ್ಛತೆಯನ್ನು ಕಾಪಾಡುವ ಮೂಲಕ ಇಲಾಖೆಯೊಂದಿಗೆ ಸಹಕರಿಸಬೇಕು ಎಂದು ಮನವಿ ಮಾಡಿದರು.

ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣಾಧಿಕಾರಿ ಡಾ॥ ಹಂಸ ಟಿ.ಸ್ವಾಮಿ ಮಾತನಾಡಿ, ಹಠಾತ್ತನೆ ಬರುವ ತೀವ್ರ ಜ್ವರ, ವಿಪರೀತ ತಲೆನೋವು, ಕಣ್ಣುಗಳ ಹಿಂಭಾಗದಲ್ಲಿ ತೀವ್ರತೆ ನೋವು, ಮಾಂಸಖಂಡ ಮತ್ತು ಕೀಲುಗಳಲ್ಲಿ ವಿಪರೀತ ನೋವು, ವಾಕರಿಕೆ ಮತ್ತು ವಾಂತಿ ಲಕ್ಷಣಗಳು ಕಂಡು ಬಂದರೆ ಕೂಡಲೇ ಹತ್ತಿರದ ಸಾರ್ವಜನಿಕ ಆಸ್ಪತ್ರೆಗೆ ಭೇಟಿ ನೀಡಿ ವೈದ್ಯರಿಂದ ಪರೀಕ್ಷೆ ಮಾಡಿಸಿ ಸೂಕ್ತ ಚಿಕಿತ್ಸೆ ಪಡೆಯಬೇಕೆಂದು ಜನರಲ್ಲಿ ಜಾಗೃತಿ ಮೂಡಿಸಿದರು.

ಸೊಳ್ಳೆಗಳ ನಿಯಂತ್ರಣಕ್ಕಾಗಿ ಇಲಾಖೆಯಿಂದ ಲಾರ್ವ ಸಮೀಕ್ಷೆ ಕೈಗೊಂಡು ಸೊಳ್ಳೆಗಳ ಉತ್ಪತ್ತಿ ತಾಣವನ್ನು ಪತ್ತೆಹಚ್ಚಿ ಕ್ರಮ ಕೈಗೊಳ್ಳಲಾಗುತ್ತಿದೆ. ಪ್ರಸಕ್ತ ವರ್ಷ "ಡೆಂಗಿ ಸೋಲಿಸಲು ಹೆಜ್ಜೆಗಳು ಪರಿಶೀಲಿಸಿ, ಸ್ವಚ್ಛಗೊಳಿಸಿ, ಮುಚ್ಚಿಡಿ" ಎನ್ನುವ ಘೋಷ ವಾಕ್ಯದೊಂದಿಗೆ ಡೆಂಗ್ಯೂ ವಿರೋಧಿ ಮಾಸಾಚರಣೆಯನ್ನು ಆಚರಿಸಲಾಗುತ್ತಿದ್ದು, ಡೆಂಗ್ಯೂ ಹಾಗೂ ಚಿಕನ್‌ಗುನ್ಯಾ ರೋಗವನ್ನು ನಿಯಂತ್ರಿಸಲು ಆರೋಗ್ಯ ಇಲಾಖೆಯಿಂದ ಕೈಗೊಳ್ಳಲಾಗುವ ಕ್ರಮಗಳಿಗೆ ಸಹಕರಿಸಬೇಕೆಂದು ಸಾರ್ವಜನಿಕರಲ್ಲಿ ಮನವಿ ಮಾಡಿದರು.

ಮಹಾನಗರಪಾಲಿಕೆ ಆವರಣ (ಟೌನ್‌ಹಾಲ್)ದಿಂದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳ ಕಚೇರಿಯವರೆಗೆ ಸಾಗಿದ ಜಾಥಾ ಕಾರ್ಯಕ್ರಮದಲ್ಲಿ ಸರ್ಕಾರಿ ನರ್ಸಿಂಗ್ ಕಾಲೇಜು/ನೀಲಗಂಗಾ ಪ್ಯಾರಾಮೆಡಿಕಲ್ ವಿದ್ಯಾರ್ಥಿಗಳು ಪಾಲ್ಗೊಂಡು ಜನರಲ್ಲಿ ಜಾಗೃತಿ ಮೂಡಿಸಿದರು.

ತಾಲೂಕು ಆರೋಗ್ಯ ಅಧಿಕಾರಿ ಡಾ॥ ಲಕ್ಷ್ಮಿಕಾಂತ್, ಆರೋಗ್ಯ ಮೇಲ್ವಿಚಾರಣಾ ಅಧಿಕಾರಿ ಲಕ್ಷ್ಮಿಕಾಂತಯ್ಯ, ಕೀಟ ಶಾಸ್ತ್ರಜ್ಞರಾದ ಸುನಂದಾ ಒ. ಹಾಗೂ ಸಿದ್ದಪ್ಪ ಸ್ವಾಮಿ, ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿಗಳಾದ ಸತೀಶ್ ಬಾಬು ಜಿ.ಜಿ., ನಾಗೇಶ್, ತಿಮ್ಮಯ್ಯ, ಮಂಜೇಗೌಡ, ನರೇಂದ್ರ, ಮೋಹನ್, ಚಂದ್ರಶೇಖರ್, ಕೀಟ ಸಂಗ್ರಹಕಾರ ಅರುಣ್ ಕುಮಾರ್ ಹಾಗೂ ಮತ್ತಿತರರು ಹಾಜರಿದ್ದರು.

# 'ಅಭಿವೃದ್ಧಿಗೆ ವಿರೋಧ ಪಕ್ಷಗಳು ಕೈಜೋಡಿಸಲಿ, ಅನಗತ್ಯ ಆರೋಪ ನಿಲ್ಲಿಸಲಿ'

ಕುಣಿಗಲ್

ಕುಣಿಗಲ್ ಕ್ಷೇತ್ರದಲ್ಲಿ ನಡೆಯುತ್ತಿರುವ ಅಭಿವೃದ್ಧಿ ಕಾರ್ಯಗಳನ್ನು ಸಹಿಸದೇ ವಿರೋಧ ಪಕ್ಷಗಳು ರಾಜಕೀಯ ಆರೋಪಗಳಲ್ಲಿ ತೊಡಗಿರುವುದನ್ನು ಬಿಟ್ಟು ಕ್ಷೇತ್ರದ ಅಭಿವೃದ್ಧಿಗೆ ಸಹಕಾರ ನೀಡಬೇಕು ಎಂದು ಕರ್ನಾಟಕ ರಾಜ್ಯ ಪ್ರಜಾಪ್ರಭುತ್ವವಾದಿಗಳ ಹೋರಾಟಗಾರರ ಸಮಿತಿ ರಾಜ್ಯಾಧ್ಯಕ್ಷ ಕುಣಿಗಲ್ ಶಿವಣ್ಣ ಆಗ್ರಹಿಸಿದರು.

ಪಟ್ಟಣದ ಪ್ರವಾಸಿ ಮಂದಿರದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಳೆದ ಎಂಟು ವರ್ಷಗಳಿಂದ ಶಾಸಕ ಡಾ. ಎಚ್.ಡಿ. ರಂಗನಾಥ್ ಅವರು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹಾಗೂ ಮಾಜಿ ಸಂಸದ ಡಿ.ಕೆ. ಸುರೇಶ್ ಅವರ ಸಹಕಾರದೊಂದಿಗೆ ಕ್ಷೇತ್ರಕ್ಕೆ ಹೆಚ್ಚಿನ ಅನುದಾನ ತಂದು ರಸ್ತೆ ಅಭಿವೃದ್ಧಿ, ಡಾಂಬರೀಕರಣ ಹಾಗೂ ನೀರಾವರಿ ಯೋಜನೆಗಳಂತಹ ಹಲವು ಕಾಮಗಾರಿಗಳನ್ನು ಅನುಷ್ಠಾನಗೊಳಿಸಿದ್ದಾರೆ ಎಂದು ಹೇಳಿದರು.

ಕ್ಷೇತ್ರದ ಅಭಿವೃದ್ಧಿಯನ್ನು ರಾಜಕೀಯ ದೃಷ್ಟಿಯಿಂದ ನೋಡುವ ಬದಲು ಪಕ್ಷಾತೀತವಾಗಿ ಎಲ್ಲರೂ ಸಹಕರಿಸಬೇಕು. ಶಾಸಕರು ಹಾಗೂ ಮುಖ್ಯಮಂತ್ರಿಗಳ ವಿರುದ್ಧ ದಿನನಿತ್ಯ ಭ್ರಷ್ಟಾಚಾರ ಮತ್ತು ಇತರ ಆರೋಪಗಳನ್ನು ಮಾಡುವುದಕ್ಕಿಂತ ಜನಪರ ಅಭಿವೃದ್ಧಿ ಕಾರ್ಯಗಳಿಗೆ ಬೆಂಬಲ ನೀಡುವುದು ಸೂಕ್ತ ಎಂದು ಅವರು ಅಭಿಪ್ರಾಯಪಟ್ಟರು.

ಕಳೆದ ಹಲವು ದಶಕಗಳಿಂದ ಕ್ಷೇತ್ರದ ಜನರಿಗೆ ತಪ್ಪು ಭರವಸೆಗಳನ್ನು ನೀಡುತ್ತಾ ರಾಜಕೀಯ ಮಾಡಲಾಗಿದೆ. ಆದರೆ ಕಳೆದ ಎಂಟು ವರ್ಷಗಳಿಂದ ಶಾಸಕ ಡಾ. ರಂಗನಾಥ್ ಅವರ ವಿರುದ್ಧ ಸುಳ್ಳು ಆರೋಪಗಳನ್ನು ಮಾಡುವುದರಲ್ಲೇ ವಿರೋಧ ಪಕ್ಷಗಳು ನಿರತರಾಗಿರುವುದು ಶೋಭೆ ತರುವುದಿಲ್ಲ ಎಂದು ಟೀಕಿಸಿದರು.

ಮಾಜಿ ಸಚಿವ ವೈ.ಕೆ. ರಾಮಯ್ಯ ಹಾಗೂ ಮಾಜಿ ಸಂಸದ ಡಿ.ಕೆ. ಸುರೇಶ್ ಅವರು ಕ್ಷೇತ್ರದ ಅಭಿವೃದ್ಧಿಗೆ ಮಹತ್ವದ ಕೊಡುಗೆ ನೀಡಿದ್ದಾರೆ ಎಂದು ಶಿವಣ್ಣ ಹೇಳಿದರು. ಮುಂಬರುವ ದಿನಗಳಲ್ಲಿ ಶಾಸಕ ಡಾ. ರಂಗನಾಥ್ ಅವರು ಯಾವುದೇ ಸುಳ್ಳು ಭರವಸೆ ನೀಡದೆ ಕ್ಷೇತ್ರವನ್ನು ರಾಜ್ಯದಲ್ಲೇ ಮಾದರಿ ಅಭಿವೃದ್ಧಿ ಕ್ಷೇತ್ರವನ್ನಾಗಿ ರೂಪಿಸುವ ಗುರಿ ಹೊಂದಿದ್ದಾರೆ ಎಂದು ತಿಳಿಸಿದರು.

ವಿರೋಧ ಪಕ್ಷದ ನಾಯಕ ಆರ್. ಅಶೋಕ್ ಹಾಗೂ ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಮಾಡುತ್ತಿರುವ ಆರೋಪಗಳಿಗೆ ಯಾವುದೇ ಆಧಾರವಿಲ್ಲ ಎಂದು ಹೇಳಿದ ಅವರು, ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರ ನೇತೃತ್ವದಲ್ಲಿ ರಾಜ್ಯ ಮತ್ತು ಕುಣಿಗಲ್ ಕ್ಷೇತ್ರ ಮತ್ತಷ್ಟು ಅಭಿವೃದ್ಧಿ ಕಾಣಲಿದ್ದು, ವಿರೋಧ ಪಕ್ಷಗಳು ಅನಗತ್ಯ ಟೀಕೆಗಳನ್ನು ಬಿಟ್ಟು ಅಭಿವೃದ್ಧಿ ಕಾರ್ಯಗಳಿಗೆ ಕೈಜೋಡಿಸಬೇಕು ಎಂದು ಮನವಿ ಮಾಡಿದರು.

ಸುದ್ದಿಗೋಷ್ಠಿಯಲ್ಲಿ ರಾಷ್ಟ್ರೀಯ ಮಾನವ ಹಕ್ಕು ಮತ್ತು ಭ್ರಷ್ಟಾಚಾರ ಹೋರಾಟ ಸಮಿತಿ ರಾಜ್ಯಾಧ್ಯಕ್ಷ ಡಾ. ರಾಜಗೋಪಾಲ್ ಹಾಗೂ ಕೋಲಾರ ಜಿಲ್ಲಾ ಅಧ್ಯಕ್ಷ ನಾರಾಯಣಸ್ವಾಮಿ ಉಪಸ್ಥಿತರಿದ್ದರು.

# ಎಸ್‌ಐಆರ್: ಬೂತ್ ಏಜೆಂಟರನ್ನು ನೇಮಿಸಲು ಸೂಚನೆ

ತುಮಕೂರು

ಮತಗಟ್ಟೆ ಮಟ್ಟದಲ್ಲಿ ತಮ್ಮ ರಾಜಕೀಯ ಪಕ್ಷದ ಬೂತ್ ಮಟ್ಟದ ಏಜೆಂಟರುಗಳನ್ನು ನೇಮಿಸಿ ನಿಗದಿತ ನಮೂನೆಯಲ್ಲಿ ಮಾಹಿತಿ ನೀಡುವಂತೆ ಅಪರ ಜಿಲ್ಲಾಧಿಕಾರಿ ಡಾ: ಎನ್. ತಿಪ್ಪೇಸ್ವಾಮಿ ರಾಜಕೀಯ ಪಕ್ಷಗಳ ಅಧ್ಯಕ್ಷರು ಹಾಗೂ ಕಾರ್ಯದರ್ಶಿಗಳಿಗೆ ತಿಳಿಸಿದ್ದಾರೆ.

ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ–2026 ಕುರಿತಂತೆ ವಿವಿಧ ರಾಜಕೀಯ ಪಕ್ಷಗಳ ಪ್ರಮುಖರೊಂದಿಗೆ ಜಿಲ್ಲಾಧಿಕಾರಿ ಕಚೇರಿಯಲ್ಲಿ ಸಭೆ ನಡೆಸಿದ ಅವರು, ಮಾನ್ಯತೆ ಪಡೆದ ರಾಷ್ಟ್ರೀಯ ಮತ್ತು ರಾಜ್ಯ ರಾಜಕೀಯ ಪಕ್ಷಗಳು ತುಮಕೂರು ಜಿಲ್ಲೆಯ ಮತಗಟ್ಟೆ ಮಟ್ಟದಲ್ಲಿ ತಮ್ಮ ಪಕ್ಷದ ಮತಗಟ್ಟೆ ಏಜೆಂಟರುಗಳನ್ನು ನಿಯಮಾನುಸಾರ ನೇಮಿಸಿ ನಿಗದಿತ ನಮೂನೆಯಲ್ಲಿ ಜಿಲ್ಲಾಡಳಿತಕ್ಕೆ ಮಾಹಿತಿ ನೀಡಬೇಕು ಹಾಗೂ ಬೂತ್ ಮಟ್ಟದ ಅಧಿಕಾರಿಗಳೊಂದಿಗೆ ತಮ್ಮ ಪಕ್ಷದ ಏಜೆಂಟರುಗಳು ಎಸ್‌ಐಆರ್ ಮತದಾರರ ಪಟ್ಟಿ ಪರಿಷ್ಕರಣೆ ಪ್ರಕ್ರಿಯೆಯಲ್ಲಿ ಸಮನ್ವಯ ಮಾಡಿಕೊಂಡು ಸಹಕರಿಸಬೇಕು ಎಂದು ಅವರು ತಿಳಿಸಿದರು.

ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ ಪ್ರಕ್ರಿಯೆ ತುಮಕೂರು ಜಿಲ್ಲೆಯಲ್ಲಿ ಕಳೆದ 9 ದಿನಗಳಲ್ಲಿ ಶೇ. 86.92ರಷ್ಟು ಗಣತಿ ನಮೂನೆಗಳನ್ನು ಮತದಾರರಿಗೆ ವಿತರಿಸಲಾಗಿದೆ. ವಿತರಣೆ ಕಾರ್ಯವನ್ನು ಮುಂದಿನ 2 ದಿನಗಳಲ್ಲಿ ಪೂರ್ಣಗೊಳಿಸಲಾಗುವುದು. ಭರ್ತಿ ಮಾಡಿದ ನಮೂನೆಗಳನ್ನು ಈಗಾಗಲೇ ಹಿಂಪಡೆಯಲು ಆರಂಭಿಸಲಾಗಿದ್ದು, ಈವರೆಗೆ ಶೇ.6.2ರಷ್ಟು ನಮೂನೆಗಳನ್ನು ಗಣಕೀಕರಣಗೊಳಿಸುವ ಕಾರ್ಯವು ಮುಗಿದಿದೆ ಎಂದರು.

ಭಾರತ ಚುನಾವಣಾ ಆಯೋಗದ ನಿರ್ದೇಶನದಂತೆ ಜುಲೈ 29ರಂದು ಈ ಪ್ರಕ್ರಿಯೆಯನ್ನು ಯಶಸ್ವಿಯಾಗಿ ಪೂರ್ಣಗೊಳಿಸಲು ಎಲ್ಲಾ ರಾಜಕೀಯ ಪಕ್ಷಗಳು ಸಹಕಾರ ನೀಡಬೇಕು ಎಂದು ಅವರು ತಿಳಿಸಿದರು. ಸಭೆಯಲ್ಲಿ ವಿವಿಧ ರಾಜಕೀಯ ಪಕ್ಷಗಳ ಮುಖಂಡರು ಭಾಗವಹಿಸಿದ್ದರು.

# ಕ್ಯಾಪ್ಸಿಕಂ, ಟೊಮೆಟೊ ಬೆಳೆದು ಲಾಭದಾಯಕ ಕೃಷಿಗೆ ಮಾದರಿ

ಮಾಲೂರು

ಕೃಷಿಯಲ್ಲಿ ಸವಾಲುಗಳ ನಡುವೆಯೂ ಆಧುನಿಕ ತಂತ್ರಜ್ಞಾನ ಮತ್ತು ವೈಜ್ಞಾನಿಕ ಕೃಷಿ ಪದ್ಧತಿಯನ್ನು ಅಳವಡಿಸಿಕೊಂಡು ಕ್ಯಾಪ್ಸಿಕಂ ಹಾಗೂ ಟೊಮೆಟೊ ಬೆಳೆಗಳಿಂದ ಉತ್ತಮ ಆದಾಯ ಗಳಿಸುತ್ತಿರುವ ಮಾಲೂರು ತಾಲೂಕಿನ ಹುಳದೇನಹಳ್ಳಿ ಗ್ರಾಮದ ಮಹಿಳಾ ರೈತೆ ಪದ್ಮಾವತಿ ವೆಂಕಟೇಶ್ ಇತರ ರೈತರಿಗೆ ಮಾದರಿಯಾಗಿದ್ದಾರೆ.

ತಾಲೂಕಿನಲ್ಲಿ ನದಿ ಅಥವಾ ಕಾಲುವೆಗಳಂತಹ ನೀರಾವರಿ ಮೂಲಗಳಿಲ್ಲದಿದ್ದರೂ, ಕೊಳವೆಬಾವಿಯ ನೀರನ್ನು ಸಮರ್ಪಕವಾಗಿ ಬಳಸಿಕೊಂಡು ಹನಿ ನೀರಾವರಿ ಪದ್ಧತಿ, ಸಾವಯವ ಗೊಬ್ಬರ ಹಾಗೂ ಆಧುನಿಕ ಕೃಷಿ ತಂತ್ರಜ್ಞಾನಗಳ ನೆರವಿನಿಂದ ಅವರು ಯಶಸ್ವಿ ಕೃಷಿ ನಡೆಸುತ್ತಿದ್ದಾರೆ.



ಗ್ರಾಮ ಪಂಚಾಯಿತಿಯ ಮಾಜಿ ಅಧ್ಯಕ್ಷೆಯಾಗಿದ್ದರೂ ಕೃಷಿಯನ್ನೇ ಜೀವನಾಧಾರವಾಗಿಸಿಕೊಂಡಿರುವ ಪದ್ಮಾವತಿ ಅವರು ತಮ್ಮ 10 ಎಕರೆ ಜಮೀನಿನಲ್ಲಿ ಸುಮಾರು ರೂ.12 ಲಕ್ಷ ಹೂಡಿಕೆ ಮಾಡಿ ಮೂರು ಎಕರೆ ಪ್ರದೇಶದಲ್ಲಿ ಸುಮಾರು 40 ಸಾವಿರ ಮಚಲಿ ತಳಿಯ ಟೊಮೆಟೊ ನಾಟಿ ಮಾಡಿದ್ದಾರೆ. ಸಮರ್ಪಕ ನೀರಾವರಿ, ಔಷಧಿ ಸಿಂಪಡಣೆ ಹಾಗೂ ನಿರಂತರ ಆರೈಕೆಯಿಂದ ಬೆಳೆ ಉತ್ತಮವಾಗಿ ಬೆಳೆದಿದ್ದು, ಈಗ ಫಸಲು ಕಟಾವಿಗೆ ಸಿದ್ಧವಾಗಿದೆ. ಪ್ರಸ್ತುತ ಮಾರುಕಟ್ಟೆಯಲ್ಲಿ ಟೊಮೆಟೊ ಬಾಕ್ಸ್‌ಗೆ ರೂ.100ರಿಂದ ರೂ.400ರವರೆಗೆ ಬೆಲೆ ದೊರೆಯುತ್ತಿದೆ.

ಇದರ ಜೊತೆಗೆ ನಾಲ್ಕೂವರೆ ಎಕರೆ ಪ್ರದೇಶದಲ್ಲಿ ಕ್ಯಾಪ್ಸಿಕಂ ಬೆಳೆ ಬೆಳೆದಿದ್ದು, ಈಗಾಗಲೇ ಮೊದಲ ಹಂತದ ಫಸಲು ದೊರೆತಿದೆ. ಪ್ರತಿದಿನ 10ರಿಂದ 20 ಮಂದಿ ಕೂಲಿ ಕಾರ್ಮಿಕರು ತೋಟದಲ್ಲಿ ಕೆಲಸ ನಿರ್ವಹಿಸುತ್ತಿದ್ದು, ಕೋಲ್ಕತ್ತಾದ ವ್ಯಾಪಾರಿಗಳು ತೋಟಕ್ಕೇ ಬಂದು ಪ್ರತಿ ಕೆ.ಜಿ. ಕ್ಯಾಪ್ಸಿಕಂ ಅನ್ನು ರೂ.50ರಿಂದ ರೂ.75ರ ದರದಲ್ಲಿ ಖರೀದಿಸಿಕೊಂಡು ಹೋಗುತ್ತಿದ್ದಾರೆ.

ಈ ಕುರಿತು ಮಾತನಾಡಿದ ಪದ್ಮಾವತಿ ವೆಂಕಟೇಶ್, ರೈತರು ಒಂದೇ ಬೆಳೆಗೆ ಸೀಮಿತವಾಗದೆ ಎರಡು ಅಥವಾ ಮೂರು ಬೆಳೆಗಳನ್ನು ಬೆಳೆಯುವ ಪದ್ಧತಿಯನ್ನು ಅನುಸರಿಸಬೇಕು ಎಂದು ಸಲಹೆ ನೀಡಿದರು. ಒಂದು ಬೆಳೆಯಲ್ಲಿ ನಷ್ಟವಾದರೂ ಮತ್ತೊಂದು ಬೆಳೆ ಆರ್ಥಿಕವಾಗಿ ಆಸರೆಯಾಗುತ್ತದೆ. ತೋಟಗಾರಿಕೆ ಮತ್ತು ಕೃಷಿ ಇಲಾಖೆಯ ಅಧಿಕಾರಿಗಳ ಮಾರ್ಗದರ್ಶನ ಪಡೆದು ಬೆಳೆ ಪರಿವರ್ತನೆ ಪದ್ಧತಿಯನ್ನು ಅನುಸರಿಸಿದರೆ ಭೂಮಿಯ ಫಲವತ್ತತೆ ಹೆಚ್ಚುವುದರ ಜೊತೆಗೆ ಉತ್ತಮ ಇಳುವರಿ ಹಾಗೂ ಆದಾಯವೂ ದೊರೆಯುತ್ತದೆ ಎಂದು ಹೇಳಿದರು.

ಸಮರ್ಪಕ ಯೋಜನೆ, ಆಧುನಿಕ ಕೃಷಿ ತಂತ್ರಜ್ಞಾನ ಮತ್ತು ಶ್ರಮದ ಮೂಲಕ ಕೃಷಿಯನ್ನು ಲಾಭದಾಯಕ ವೃತ್ತಿಯನ್ನಾಗಿ ರೂಪಿಸಬಹುದೆಂಬುದನ್ನು ಪದ್ಮಾವತಿ ವೆಂಕಟೇಶ್ ತಮ್ಮ ಸಾಧನೆಯ ಮೂಲಕ ಸಾಬೀತುಪಡಿಸಿದ್ದಾರೆ.

# ಪರಿಷ್ಕೃತ ದಾಖಲೆ ಪರಿಶೀಲನೆ ಪಟ್ಟಿ ಪ್ರಕಟ

ಬೆಂಗಳೂರು

ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ (ಬಿಡಬ್ಲ್ಯೂಎಸ್‌ಎಸ್‌ಬಿ) ನೇರ ನೇಮಕಾತಿ ಪ್ರಕ್ರಿಯೆಯಡಿ ಕಿರಿಯ ಸಹಾಯಕ (ಮಿಕ್ಕುಳಿದ) ಹುದ್ದೆಗಳಿಗೆ ಸಂಬಂಧಿಸಿದ ದಾಖಲೆ ಪರಿಶೀಲನೆ ಪಟ್ಟಿಯನ್ನು ತಾಂತ್ರಿಕ ಕಾರಣಗಳಿಂದ ಪರಿಷ್ಕರಿಸಿ ಮರುಪ್ರಕಟಿಸಿದೆ. ಮಂಡಳಿಯು 2025ರ ನವೆಂಬರ್ 15ರಂದು ಹೊರಡಿಸಿದ್ದ ನೇರ ನೇಮಕಾತಿ ಅಧಿಸೂಚನೆಯಂತೆ ವಿವಿಧ ವೃಂದದ ಹುದ್ದೆಗಳಿಗೆ ಅರ್ಜಿ ಸಲ್ಲಿಸಿದ್ದ ಅಭ್ಯರ್ಥಿಗಳಲ್ಲಿ 1:5 ಅನುಪಾತದಲ್ಲಿ ಆಯ್ಕೆಪಟ್ಟಿ ಸಿದ್ಧಪಡಿಸಿ ದಾಖಲೆ ಪರಿಶೀಲನೆಗೆ ಕರೆಯಲಾಗಿತ್ತು. ಆದರೆ, ಕಿರಿಯ ಸಹಾಯಕ (ಮಿಕ್ಕುಳಿದ) ಹುದ್ದೆಗಳ ಅಭ್ಯರ್ಥಿಗಳ ಪಟ್ಟಿಯನ್ನು ತಾಂತ್ರಿಕ ಕಾರಣಗಳಿಂದ ಹಿಂಪಡೆದು ಇದೀಗ ಪರಿಷ್ಕೃತ ಅಭ್ಯರ್ಥಿಗಳ ಪಟ್ಟಿಯನ್ನು ಪ್ರಕಟಿಸಲಾಗಿದೆ.

ಪರಿಷ್ಕೃತ ಪಟ್ಟಿಯಲ್ಲಿ ಹೆಸರು ಹೊಂದಿರುವ ಅಭ್ಯರ್ಥಿಗಳು ತಮಗೆ ನಿಗದಿಪಡಿಸಿರುವ ದಿನಾಂಕ ಮತ್ತು ಸಮಯಕ್ಕೆ ಅಗತ್ಯ ಮೂಲ ದಾಖಲೆಗಳು ಹಾಗೂ ಪೂರಕ ದಾಖಲೆಗಳೊಂದಿಗೆ ದಾಖಲೆ ಪರಿಶೀಲನೆಗೆ ಕಡ್ಡಾಯವಾಗಿ ಹಾಜರಾಗುವಂತೆ ಮಂಡಳಿ ಸೂಚಿಸಿದೆ.

ದಾಖಲೆ ಪರಿಶೀಲನೆಗೆ ಆಯ್ಕೆಯಾದ ಅಭ್ಯರ್ಥಿಗಳ ಹೆಸರು, ದಿನಾಂಕ, ಸಮಯ, ಸ್ಥಳ ಹಾಗೂ ಇತರ ವಿವರಗಳನ್ನು ಮಂಡಳಿಯ ಅಧಿಕೃತ ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗಿದ್ದು, ಅಭ್ಯರ್ಥಿಗಳು ಪರಿಶೀಲಿಸಿಕೊಂಡು ನಿಗದಿತ ವೇಳೆಗೆ ಹಾಜರಾಗುವಂತೆ ಮನವಿ ಮಾಡಲಾಗಿದೆ.

# ಆಲಂಬಾಡಿ ಜೊತೇನಹಳ್ಳಿ ವಿಎಸ್‌ಎಸ್‌ಎನ್ ಅಧ್ಯಕ್ಷರಾಗಿ ನಾರಾಯಣಪ್ಪ ಅವಿರೋಧ ಆಯ್ಕೆ

ಕೋಲಾರ

ಕೋಲಾರ ತಾಲ್ಲೂಕಿನ ಆಲಂಬಾಡಿ ಜೊತೇನಹಳ್ಳಿ ವ್ಯವಸಾಯ ಸೇವಾ ಸಹಕಾರ ಸಂಘ (ವಿಎಸ್‌ಎಸ್‌ಎನ್)ದ ಎರಡನೇ ಅವಧಿಯ ಅಧ್ಯಕ್ಷರಾಗಿ ನಾರಾಯಣಪ್ಪ ಅವರು ಅವಿರೋಧವಾಗಿ ಆಯ್ಕೆಯಾಗಿದ್ದಾರೆ. ನೂತನ ಅಧ್ಯಕ್ಷರ ಆಯ್ಕೆಯ ಹಿನ್ನೆಲೆಯಲ್ಲಿ ಸಂಘದ ಆವರಣದಲ್ಲಿ ವಿಜಯೋತ್ಸವ ನಡೆಯಿತು.

ಈ ಸಂದರ್ಭದಲ್ಲಿ ಮಾತನಾಡಿದ ತಾಲೂಕು ಪಂಚಾಯಿತಿ ಮಾಜಿ ಅಧ್ಯಕ್ಷ ಟಿ. ಮಹದೇವಪ್ಪ, ಸಂಘದ ನಿರ್ದೇಶಕರ ಪರಸ್ಪರ ಒಗ್ಗಟ್ಟು ಹಾಗೂ ನಾಯಕತ್ವದ ಫಲವಾಗಿ ನಾರಾಯಣಪ್ಪ ಅವರು ಸರ್ವಾನುಮತದಿಂದ ಅಧ್ಯಕ್ಷರಾಗಿ ಆಯ್ಕೆಯಾಗಿದ್ದಾರೆ ಎಂದು ಹೇಳಿದರು.

ಮೊದಲೇ ನಡೆದಿದ್ದ ಮಾತುಕತೆಯಂತೆ ಎಲ್ಲಾ ನಿರ್ದೇಶಕರು ಒಮ್ಮತದಿಂದ ಈ ನಿರ್ಧಾರ ಕೈಗೊಂಡಿದ್ದು, ಅವಿರೋಧ ಆಯ್ಕೆಗೆ ಸಹಕರಿಸಿದ ನಿರ್ದೇಶಕರು, ಮುಖಂಡರು ಹಾಗೂ ಶಾಸಕ ಎಸ್. ಎನ್. ನಾರಾಯಣಸ್ವಾಮಿ ಅವರ ಮಾರ್ಗದರ್ಶನ ಪ್ರಮುಖ ಕಾರಣವಾಗಿದೆ ಎಂದು ತಿಳಿಸಿದರು.

ಮುಂದಿನ ಮೂರನೇ ಅವಧಿಗೆ ಸುರೇಶ್ ಅವರನ್ನು ಅಧ್ಯಕ್ಷರನ್ನಾಗಿ ಆಯ್ಕೆ ಮಾಡುವ ಕುರಿತು ಈಗಾಗಲೇ ತೀರ್ಮಾನಿಸಲಾಗಿದ್ದು, ಸಮಯ ಬಂದಾಗ ಶಾಸಕರು, ನಿರ್ದೇಶಕರು ಹಾಗೂ ಮುಖಂಡರ ಸಮ್ಮುಖದಲ್ಲಿ ಅದನ್ನು ಜಾರಿಗೆ ತರಲಾಗುವುದು ಎಂದರು.

ನೂತನ ಅಧ್ಯಕ್ಷ ನಾರಾಯಣಪ್ಪ ಅವರು ಯಾವುದೇ ಪಕ್ಷ, ಜಾತಿ ಅಥವಾ ಭೇದಭಾವವಿಲ್ಲದೆ ಎಲ್ಲ ನಿರ್ದೇಶಕರನ್ನು ವಿಶ್ವಾಸಕ್ಕೆ ತೆಗೆದುಕೊಂಡು ಸಂಘವನ್ನು ಮುನ್ನಡೆಸಬೇಕು. ಎಲ್ಲ ಸದಸ್ಯರನ್ನು ಸಮಾನವಾಗಿ ಗೌರವಿಸಿ ಸಹಕಾರದ ಮನೋಭಾವದಿಂದ ಆಡಳಿತ ನಡೆಸಿದರೆ ಸಂಘ ಇನ್ನಷ್ಟು ಅಭಿವೃದ್ಧಿಯಾಗಲಿದೆ ಎಂದು ಸಲಹೆ ನೀಡಿದರು.

# ಎಲ್ ನಿನೊ ಪರಿಣಾಮ: ಬೆಳೆ ವಿಮೆ ಕಡ್ಡಾಯವಾಗಿ ಮಾಡಿಸಿಕೊಳ್ಳಿ

ಮಾಲೂರು

ಎಲ್ ನಿನೊ ಪರಿಣಾಮದಿಂದ ಪ್ರಸಕ್ತ ಮುಂಗಾರು ಹಂಗಾಮಿನಲ್ಲಿ ಮಳೆ ಪ್ರಮಾಣ ಕಡಿಮೆಯಾಗುವ ಸಾಧ್ಯತೆ ಇದ್ದು, ರೈತರು ಬೆಳೆ ನಷ್ಟದಿಂದಾಗುವ ಆರ್ಥಿಕ ಹೊರೆ ತಪ್ಪಿಸಿಕೊಳ್ಳಲು ಕರ್ನಾಟಕ ರೈತ ಸುರಕ್ಷಾ ಪ್ರಧಾನಮಂತ್ರಿ ಫಸಲ್ ಭೀಮಾ ಯೋಜನೆ ಅಡಿಯಲ್ಲಿ ಕಡ್ಡಾಯವಾಗಿ ಬೆಳೆ ವಿಮೆ ಮಾಡಿಸಿಕೊಳ್ಳಬೇಕು ಎಂದು ಕೃಷಿ ಇಲಾಖೆಯ ಸಹಾಯಕ ನಿರ್ದೇಶಕ ಬಿ.ಪಿ. ಚಂದ್ರಪ್ಪ ಸಲಹೆ ನೀಡಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, 2026–27ನೇ ಸಾಲಿನ ಮುಂಗಾರು ಹಂಗಾಮಿಗೆ ಗ್ರಾಮ ಪಂಚಾಯಿತಿ ಹಾಗೂ ಹೋಬಳಿ ಮಟ್ಟದಲ್ಲಿ ಬೆಳೆ ವಿಮೆಗೆ ಅಧಿಸೂಚನೆ ಹೊರಡಿಸಲಾಗಿದೆ. ರೈತರು ಗ್ರಾಮ ಒನ್, ಕರ್ನಾಟಕ ಒನ್, ಸಾಮಾನ್ಯ ಸೇವಾ ಕೇಂದ್ರಗಳು (ಸಿಎಸ್‌ಸಿ), ಎಸ್‌ಕೆಡಿಆರ್‌ಪಿ ನೋಂದಣಿ ಕೇಂದ್ರಗಳು ಅಥವಾ ಬ್ಯಾಂಕ್ ಶಾಖೆಗಳ ಮೂಲಕ ವಿಮಾ ಕಂತು ಪಾವತಿಸಿ ಯೋಜನೆಯ ಪ್ರಯೋಜನ ಪಡೆಯಬಹುದು ಎಂದು ತಿಳಿಸಿದರು.

ಕೃಷಿ ಇಲಾಖೆಯ ಅಧಿಸೂಚನೆಯಂತೆ ನೀರಾವರಿ ರಾಗಿ ಬೆಳೆಗೆ ಪ್ರತಿ ಎಕರೆಗೆ ರೂ.472, ಮಳೆಯಾಶ್ರಿತ ರಾಗಿ ಬೆಳೆಗೆ ರೂ.404 ಹಾಗೂ ಟೊಮೆಟೊ ಬೆಳೆಗೆ ರೂ.3,436 ವಿಮಾ ಕಂತು ನಿಗದಿಪಡಿಸಲಾಗಿದೆ ಎಂದು ಮಾಹಿತಿ ನೀಡಿದರು.

ಮಾಲೂರು ತಾಲೂಕಿನಲ್ಲಿ ಸುಮಾರು 11,137 ಹೆಕ್ಟೇರ್ ಪ್ರದೇಶದಲ್ಲಿ ರಾಗಿ ಬೆಳೆಯಲಾಗುತ್ತಿದ್ದು, ಕಸಬಾ ಹೋಬಳಿಯಲ್ಲಿ 2,795 ಹೆಕ್ಟೇರ್, ಮಾಸ್ತಿ 3,152 ಹೆಕ್ಟೇರ್, ಟೇಕಲ್ 2,960 ಹೆಕ್ಟೇರ್ ಹಾಗೂ ಲಕ್ಕೂರು 2,240 ಹೆಕ್ಟೇರ್ ಪ್ರದೇಶದಲ್ಲಿ ರಾಗಿ ಬೆಳೆಯಲಾಗುತ್ತಿದೆ. ಮಳೆ ಕೊರತೆಯ ಸಂದರ್ಭದಲ್ಲಿ ಬೆಳೆ ವಿಮೆ ರೈತರಿಗೆ ಆರ್ಥಿಕ ರಕ್ಷಣೆ ಒದಗಿಸಲಿದೆ ಎಂದು ಹೇಳಿದರು.

ರಾಗಿ ಬೆಳೆಗೆ ಇಂಡಸ್ ಇಂಡ್ ಜನರಲ್ ಇನ್ಸೂರೆನ್ಸ್ ಕಂಪನಿ ಮೂಲಕ ವಿಮೆ ಮಾಡಿಸಬಹುದಾಗಿದ್ದು, ಆಗಸ್ಟ್ 14ರೊಳಗೆ ನೋಂದಣಿ ಮಾಡಿಸಿಕೊಳ್ಳಬೇಕು. ಹೆಚ್ಚಿನ ಮಾಹಿತಿಗಾಗಿ ರೈತರು ತಮ್ಮ ಸಮೀಪದ ರೈತ ಸಂಪರ್ಕ ಕೇಂದ್ರವನ್ನು ಸಂಪರ್ಕಿಸಬಹುದು ಎಂದು ತಿಳಿಸಿದರು.

ಹವಾಮಾನ ಇಲಾಖೆಯ ಮುನ್ಸೂಚನೆ ಹಾಗೂ ಕೃಷಿ ವಿಜ್ಞಾನ ಕೇಂದ್ರದ ತಜ್ಞರ ಸಲಹೆಯಂತೆ ಮಳೆ ಕೊರತೆಯ ಪರಿಸ್ಥಿತಿಯಲ್ಲಿ ರೈತರು ಪರ್ಯಾಯ ಬೆಳೆಗಳನ್ನು ಬೆಳೆಯಬೇಕು.

ಕಡಿಮೆ ನೀರಿನ ಅವಶ್ಯಕತೆ ಇರುವ ರಾಗಿ, ಸಿರಿಧಾನ್ಯಗಳು, ಹುರುಳಿ ಸೇರಿದಂತೆ ಅಲ್ಪಾವಧಿಯ ತಳಿಗಳನ್ನು ಆಯ್ಕೆ ಮಾಡಬೇಕು. ಹೊಲದಲ್ಲಿ ತೇವಾಂಶ ಸಂರಕ್ಷಣೆ, ಸಾವಯವ ಗೊಬ್ಬರ ಬಳಕೆ ಹಾಗೂ ಶಿಫಾರಸು ಮಾಡಿದ ಪ್ರಮಾಣದಲ್ಲಿ ರಸಗೊಬ್ಬರಗಳನ್ನು ಬಳಸುವಂತೆ ಅವರು ಸಲಹೆ ನೀಡಿದರು.

ಇದೇ ವೇಳೆ 2026–27ನೇ ಸಾಲಿನ ಬೆಳೆ ಸಮೀಕ್ಷೆ ಕಾರ್ಯ ಆರಂಭವಾಗಿದ್ದು, ರೈತರು ಗೂಗಲ್ ಪ್ಲೇ ಸ್ಟೋರ್‌ನಿಂದ ರೈತ ಬೆಳೆ ಸಮೀಕ್ಷೆ ಆಪ್ ಡೌನ್‌ಲೋಡ್ ಮಾಡಿಕೊಂಡು ತಮ್ಮ ಜಮೀನಿನ ಬೆಳೆ ವಿವರಗಳನ್ನು ಸ್ವತಃ ದಾಖಲಿಸಬಹುದು ಅಥವಾ ಕೃಷಿ ಹಾಗೂ ಕಂದಾಯ ಇಲಾಖೆಯ ಅಧಿಕಾರಿಗಳ ನೆರವು ಪಡೆಯಬಹುದು ಎಂದು ಹೇಳಿದರು.

ಬೆಳೆ ಸಮೀಕ್ಷೆ ದಾಖಲಿಸುವುದರಿಂದ ಬೆಳೆ ವಿಮೆ, ಬೆಳೆ ಪರಿಹಾರ, ಪಹಣಿ ಹಾಗೂ ವಿವಿಧ ಸರ್ಕಾರಿ ಸೌಲಭ್ಯಗಳನ್ನು ಪಡೆಯಲು ಅನುಕೂಲವಾಗಲಿದೆ. ಬೆಳೆ ಸಮೀಕ್ಷೆ ಕಾರ್ಯಕ್ಕೆ 200 ಖಾಸಗಿ ನಿವಾಸಿಗಳ ಅಗತ್ಯವಿದ್ದು, ಎಸ್‌ಎಸ್‌ಎಲ್‌ಸಿ ಉತ್ತೀರ್ಣರಾಗಿ ಆಂಡ್ರಾಯ್ಡ್ ಮೊಬೈಲ್ ಬಳಕೆ ತಿಳಿದಿರುವ ಆಸಕ್ತರು ಕೃಷಿ ಅಥವಾ ಕಂದಾಯ ಇಲಾಖೆಯನ್ನು ಸಂಪರ್ಕಿಸಿ ನೋಂದಾಯಿಸಿಕೊಳ್ಳಬಹುದು ಎಂದು ಬಿ.ಪಿ. ಚಂದ್ರಪ್ಪ

# ಮತದಾರರ ಪಟ್ಟಿಯ ವಿಶೇಷ ಪರಿಷ್ಕರಣೆ–2026: ಜಾಗೃತಿ ಜಾಥಾ

ತುಮಕೂರು

ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ–2026ರ ಅಂಗವಾಗಿ ತುಮಕೂರು ತಾಲೂಕು ಪಂಚಾಯಿತಿ ವತಿಯಿಂದ ಗುರುವಾರ ತಾಲೂಕಿನ ಕೆಸರಮಡು ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಮತದಾರರಿಗೆ ಜಾಗೃತಿ ಜಾಥಾ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.

ಜಾಥಾ ಕಾರ್ಯಕ್ರಮಕ್ಕೆ ತಾಲೂಕು ಪಂಚಾಯಿತಿ ಸಹಾಯಕ ಲೆಕ್ಕಾಧಿಕಾರಿ ಪರಮೇಶ್ವರ ಹೆಚ್.ಕೆ. ಅವರು ಚಾಲನೆ ನೀಡಿ, ಮತದಾರರ ಪಟ್ಟಿಯಲ್ಲಿ ಹೆಸರು ಸೇರ್ಪಡೆ, ಹೆಸರು ತಿದ್ದುಪಡಿ, ವಿಳಾಸ ಬದಲಾವಣೆ, ಮೃತ ಹಾಗೂ ಸ್ಥಳಾಂತರಗೊಂಡ ಮತದಾರರ ಹೆಸರನ್ನು ತೆಗೆದು ಹಾಕುವ ಕುರಿತು ಸಾರ್ವಜನಿಕರಿಗೆ ಮಾಹಿತಿ ನೀಡಿದರು.

ಈ ಜಾಥಾ ಕಾರ್ಯಕ್ರಮದಲ್ಲಿ ಗ್ರಾಮ ಪಂಚಾಯಿತಿ ಪ್ರತಿನಿಧಿಗಳು, ಬೂತ್ ಮಟ್ಟದ ಅಧಿಕಾರಿಗಳು, ಆಶಾ/ಅಂಗನವಾಡಿ ಕಾರ್ಯಕರ್ತೆಯರು, ಸಾರ್ವಜನಿಕರು ಭಾಗವಹಿಸಿ ಮತದಾರರ ಪಟ್ಟಿಯನ್ನು ನಿಖರ ಹಾಗೂ ಸಮಗ್ರಗೊಳಿಸಲು ಸಹಕರಿಸಬೇಕೆಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ 18 ವರ್ಷ ಪೂರ್ಣಗೊಂಡ ಯುವಜನರು ಕಡ್ಡಾಯವಾಗಿ ಮತದಾರರ ಪಟ್ಟಿಯಲ್ಲಿ ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳಬೇಕು ಹಾಗೂ ಈಗಾಗಲೇ ನೋಂದಾಯಿತರಾಗಿರುವ ಮತದಾರರು ತಮ್ಮ ವಿವರಗಳನ್ನು ಪರಿಶೀಲಿಸಿ ಅಗತ್ಯ ತಿದ್ದುಪಡಿಗಳನ್ನು ಮಾಡಿಸಿಕೊಳ್ಳಬೇಕು ಎಂದು ಅವರು ತಿಳಿಸಿದರು.

ಕೆಸರಮಡು ಗ್ರಾಮದ ಗ್ರಾಮ ದೇವತೆ ದೇವಸ್ಥಾನ ಸರ್ಕಲ್ ಬಳಿ ಮಾನವ ಸರಪಳಿ ರಚಿಸಿ, ಮತದಾರರಿಗೆ ಕುರಿತು ಅರಿವು ಮೂಡಿಸಲಾಯಿತು. ಈ ವೇಳೆ ಮತದಾನದ ಮಹತ್ವ ಹಾಗೂ ಶುದ್ಧ ಮತದಾರರ ಪಟ್ಟಿಯ ಅಗತ್ಯತೆಯ ಕುರಿತು ಘೋಷಣೆಗಳನ್ನು ಕೂಗಲಾಯಿತು.

# ಸಹಾಯ ಧನ ಸೌಲಭ್ಯಕ್ಕಾಗಿ ಅರ್ಜಿಆಹ್ವಾನ

ತುಮಕೂರು

ಕೃಷಿ ಇಲಾಖೆ ವತಿಯಿಂದ ಜಿಲ್ಲೆಯಲ್ಲಿರುವ ಸಾಮಾನ್ಯ ವರ್ಗದ ವೈಯಕ್ತಿಕ ಫಲಾನುಭವಿಗಳಿಗೆ ಹೈಟೆಕ್ ಹಾರ್ವೆಸ್ಟರ್ ಹಬ್ ಸ್ಥಾಪನೆ ಮಾಡಲು ಸಹಾಯಧನ ಸೌಲಭ್ಯ ನೀಡಲು ಅರ್ಹರಿಂದ ಅರ್ಜಿ ಆಹ್ವಾನಿಸಲಾಗಿದೆ.

ಹೈಟೆಕ್ ಹಾರ್ವೆಸ ರ್ ಹಬ್ ಸ್ಥಾಪನೆಗಾಗಿ ಸಾಮಾನ್ಯ ವರ್ಗದ ಫಲಾನುಭವಿಗಳಿಗೆ ಶೇ.50(ಗರಿಷ್ಠ 40 ಲಕ್ಷ ರೂ.)ರಷ್ಟು ಸಹಾಯಧನವನ್ನು ಮೂಲಕ ನೀಡಲಾಗುವುದು.

ಅರ್ಜಿದಾರರು ನಿಗದಿತ ನಮೂನೆಯಲ್ಲಿ ಭರ್ತಿ ಮಾಡಿದ ಅರ್ಜಿಯೊಂದಿಗೆ ಅಗತ್ಯ ದಾಖಲಾತಿಗಳಾದ ಪಹಣಿ, ಗುರುತಿನ ಪತ್ರ, ಬ್ಯಾಂಕ್ ಖಾತೆ ಸಂಖ್ಯೆ, 100 ರೂ.ಗಳ ಛಾಪಾ ಕಾಗದದ ಮೇಲೆ ಹಬ್ ಅನ್ನು ಪರಬಾರೆ ಮಾಡುವುದಿಲ್ಲವೆಂದು ಮುಚ್ಚಳಿಕೆ ಪ್ರತಿ, ಮತ್ತಿತರ ದಾಖಲೆಗಳನ್ನು ಲಗತ್ತಿಸಿ ಜುಲೈ 24ರೊಳಗಾಗಿ ಸಂಬಂಧಿಸಿದ ಆಯಾ ತಾಲ್ಲೂಕಿನ ಸಹಾಯಕ ಕೃಷಿ ನಿರ್ದೇಶಕರ ಕಚೇರಿಗೆ ಸಲ್ಲಿಸಬೇಕು.

ಜಿಲ್ಲಾ ಮಟ್ಟದ ಉಪಕರಣ ಸಮಿತಿ ಸಭೆಯಲ್ಲಿ ಅರ್ಹಗೊಂಡ ಅರ್ಜಿಗಳನ್ನು ಪರಿಶೀಲಿಸಿ ಆಯ್ಕೆ ಮಾಡಲಾಗುವುದು. ಹಾರ್ವೆಸ್ಟರ್ ಹಬ್‌ಗಳನ್ನು ಸ್ಥಾಪಿಸಲು ಆಯ್ಕೆಯಾದ ಫಲಾನುಭವಿಗಳು ಕಾರ್ಯಾದೇಶ ನೀಡಿದ 30 ದಿನದೊಳಗಾಗಿ ಹಾರ್ವೆಸ್ಟರ್ ಹಬ್‌ಗಳನ್ನು ಕಡ್ಡಾಯವಾಗಿ ಸ್ಥಾಪಿಸಬೇಕೆಂದು ಜಂಟಿ ಕೃಷಿ ನಿರ್ದೇಶಕರು ತಿಳಿಸಿದ್ದಾರೆ.

# ಮಿನಿ ಉದ್ಯೋಗ ಮೇಳ

ತುಮಕೂರು

ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ಹಾಗೂ ಹೆಚ್.ಆರ್.ಹೆಚ್. ನೆಕ್ಸ್ಟ್, ಸೂರ್ಯೋದಯ ಸ್ಮಾಲ್ ಫೈನಾನ್ಸ್ ಬ್ಯಾಂಕ್ ಲಿ., ಟಿ.ಡಿ.ಪಿ.ಎಸ್. ಮತ್ತು ಇಂಡಸ್ ಇಂಡ್ ಬ್ಯಾಂಕ್ ಸಂಸ್ಥೆಯ ಸಹಭಾಗಿತ್ವದಲ್ಲಿ ನಿರುದ್ಯೋಗಿಗಳಿಗೆ ಉದ್ಯೋಗ ನೀಡುವ ಸಂಬಂಧ ಜುಲೈ 13ರಂದು ನೇರ ಸಂದರ್ಶನ ಏರ್ಪಡಿಸಲಾಗಿದೆ.

ಕಸ್ಟಮರ್ ರಿಲೇಷನ್‌ಶಿಪ್ ಎಕ್ಸಿಕ್ಯುಟಿವ್, ರಿಲೇಷನ್‌ಶಿಪ್ ಆಫೀಸರ್, ಆಪರೇಟರ್ಸ್ ಹಾಗೂ ಅಕ್ವಿಸೇಷನ್ ಮ್ಯಾನೇಜರ್ ಹುದ್ದೆಗಳಿಗೆ ಪುರುಷ ಹಾಗೂ ಮಹಿಳಾ ಅಭ್ಯರ್ಥಿಗಳಿಗೆ ನೇರಸಂದರ್ಶನ ನಡೆಯಲಿದ್ದು, ಪಿ.ಯು.ಸಿ, ಐ.ಟಿ.ಐ, ಡಿಪ್ಲೋಮಾ ಹಾಗೂ ಯಾವುದೇ ಪದವಿ ಪಾಸಾದ ಅಭ್ಯರ್ಥಿಗಳು ಈ ಸಂದರ್ಶನದಲ್ಲಿ ಭಾಗವಹಿಸಬಹುದಾಗಿದೆ. ಆಯ್ಕೆಯಾದ ಅಭ್ಯರ್ಥಿಗಳಿಗೆ ವೇತನ 14,000 ರೂ.ಗಳಿಂದ 33,000 ರೂ.ಗಳವರೆಗೆ ನೀಡಲಾಗುತ್ತದೆ.

ಅರ್ಹ ಅಭ್ಯರ್ಥಿಗಳು ಜುಲೈ 13ರಂದು ಬೆಳಿಗ್ಗೆ 10 ಗಂಟೆಗೆ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ, ಡಿ.ಡಿ.ಪಿ.ಐ. ಬಸ್ ನಿಲ್ದಾಣ, ವಾಸನ್ ಕಣ್ಣಿನ ಆಸ್ಪತ್ರೆ ಹತ್ತಿರ, ಮೂಲೆಮನೆ ಹೋಟಲ್ ಪಕ್ಕ, ಸೋಮೇಶ್ವರಪುರಂ, 14ನೇ ಕ್ರಾಸ್, ತುಮಕೂರು–572102 ಇಲ್ಲಿ ತಮ್ಮ ಬಯೋಡೇಟಾದೊಂದಿಗೆ ಹಾಜರಾಗಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 0816–2278488, ಮೊ.ಸಂ. 8792669410ಯನ್ನು ಸಂಪರ್ಕಿಸಬೇಕೆಂದು ಜಿಲ್ಲಾ ಉದ್ಯೋಗಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಚಿತ್ರದುರ್ಗದಲ್ಲಿ ರಾಷ್ಟ್ರೀಯ ಭೋವಿ ಜನೋತ್ಸವ

ತುಮಕೂರು

ಭೋವಿ ಗುರುಪೀಠದ ಜಗದ್ಗುರು ಇಮ್ಮಡಿ ಸಿದ್ದರಾಮೇಶ್ವರ ಸ್ವಾಮೀಜಿ ಅವರ 17ನೇ ಪಟ್ಟಾಭಿಷೇಕ ಹಾಗೂ 40ನೇ ಜನ್ಮ ವರ್ಧಂತ್ಯೋತ್ಸವ ಅಂಗವಾಗಿ ಜುಲೈ 19ರಂದು ಚಿತ್ರದುರ್ಗದಲ್ಲಿ ಬೃಹತ್ ರಾಷ್ಟ್ರೀಯ ಭೋವಿ ಜನೋತ್ಸವ ಕಾರ್ಯಕ್ರಮ ಹಮ್ಮಿಕೊಂಡಿರುವುದಾಗಿ ಕರ್ನಾಟಕ ಭೋವಿ ಅಭಿವೃದ್ಧಿ ನಿಗಮದ ಅಧ್ಯಕ್ಷ ಡಾ: ಎಂ. ರಾಮಪ್ಪ ತಿಳಿಸಿದ್ದಾರೆ.

ನಗರದ ಕರ್ನಾಟಕ ಭೋವಿ ಅಭಿವೃದ್ಧಿ ನಿಗಮದ ಕಚೇರಿಯಲ್ಲಿ ಗುರುವಾರ ನಡೆದ ಸುದ್ದಿಗೋಷ್ಠಿಯಲ್ಲಿ ಅವರು, ಭೋವಿ ಸಮುದಾಯದ ಅಭಿವೃದ್ಧಿ ದೃಷ್ಟಿಯಿಂದ ನಿಗಮದ ಮೂಲಕ ಕರ್ನಾಟಕ ಸರ್ಕಾರ ಹಲವಾರು ಯೋಜನೆಗಳನ್ನು ಅನುಷ್ಠಾನಗೊಳಿಸುವ ಮೂಲಕ ಸಮುದಾಯವನ್ನು ಮುಖ್ಯವಾಹಿನಿಗೆ ತರುವ ಪ್ರಯತ್ನ ಮಾಡುತ್ತಿದೆ.

ಈ ನಿಟ್ಟಿನಲ್ಲಿ ಭೋವಿ ಜನಸಮುದಾಯದಲ್ಲಿ ಜಾಗೃತಿ ಮೂಡಿಸುವ ಉದ್ದೇಶದಿಂದ ಹಾಗೂ ಸಮುದಾಯ ಸಂಘಟಿತರಾಗಬೇಕೆಂಬ ಉದ್ದೇಶದಿಂದ ಕುಲಗುರುವಿನ ಜನ್ಮ ಜಯಂತಿಯನ್ನು ಭೋವಿ ಜನೋತ್ಸವ ಹೆಸರಿನಲ್ಲಿ ಚಿತ್ರದುರ್ಗದಲ್ಲಿ ಆಚರಿಸಲಾಗುತ್ತಿದೆ ಎಂದು ಅವರು ವಿವರಿಸಿದರು.

ಈ ಕಾರ್ಯಕ್ರಮದಲ್ಲಿ ದೇಶಾದ್ಯಂತ ವಿವಿಧ ಹೆಸರುಗಳಿಂದ ಕರೆಯಲ್ಪಡುವ ಭೋವಿ ಸಮುದಾಯದ ಜನರು ಬೃಹತ್ ಸಂಖ್ಯೆಯಲ್ಲಿ ಆಗಮಿಸಲಿದ್ದಾರೆ. ಈ ಕಾರ್ಯಕ್ರಮದಲ್ಲಿ ರಾಜ್ಯದ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹಾಗೂ ಉಪಮುಖ್ಯಮಂತ್ರಿ ಡಾ: ಜಿ. ಪರಮೇಶ್ವರ ಅವರು ಸೇರಿದಂತೆ ರಾಜ್ಯದ ವಿವಿಧ ಸಚಿವರು, ಮುಖಂಡರು, ಹಿರಿಯ ಅಧಿಕಾರಿಗಳು ಭಾಗವಹಿಸಲಿದ್ದಾರೆ ಎಂದರು.

ಕಾರ್ಯಕ್ರಮದಲ್ಲಿ ಭೋವಿ ಸಮುದಾಯದ ಮಕ್ಕಳು ಎಸ್.ಎಸ್.ಎಲ್.ಸಿ., ಪಿಯುಸಿ, ಪದವಿ ಹಾಗೂ ಸ್ನಾತಕೋತ್ತರ ಪದವಿಗಳಲ್ಲಿ ಶೇ. 90ಕ್ಕಿಂತ ಹೆಚ್ಚು ಅಂಕ ಪಡೆದು ಸಾಧನೆ ಮಾಡಿದ ಪ್ರತಿಭಾನ್ವಿತರನ್ನು ಸನ್ಮಾನ ಮಾಡಿ ಗೌರವಿಸಲಾಗುವುದು. ರಕ್ತದಾನ ಶಿಬಿರ, ಸಿದ್ದರಾಮೇಶ್ವರ ಕುರಿತು ವಿಚಾರ ಸಂಕಿರಣ, ರಾಜಕೀಯ ಕ್ಷೇತ್ರದಲ್ಲಿ ತೊಡಗಿಸಿಕೊಂಡಿರುವ ಜನಪ್ರತಿನಿಧಿಗಳು ಹಾಗೂ ಭೋವಿ ವಡ್ಡರ ಜನಾಂಗದ ಸಾಧಕರನ್ನು ಗೌರವಿಸುವುದು ಸೇರಿದಂತೆ ವಿವಿಧ ಜನಪರ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿರುವುದಾಗಿ ಡಾ.ರಾಮಪ್ಪ ವಿವರಿಸಿದರು.

ಸುದ್ದಿಗೋಷ್ಠಿಯಲ್ಲಿ ಮುಖಂಡರಾದ ಯೋಗೇಶ್, ಹೆಚ್. ಉಮೇಶ್, ಮಂಜುನಾಥ್, ಓಂಕಾರ್, ಇನ್ನಿತರರು ಉಪಸ್ಥಿತರಿದ್ದರು.

# ‘ಪ್ರದೀಪ್ ಈಶ್ವರ್ ವಿರುದ್ಧ ಕ್ರಿಮಿನಲ್ ಪ್ರಕರಣ ದಾಖಲಿಸುತ್ತೇನೆ’

ಚಿಕ್ಕಬಳ್ಳಾಪುರ

ಕೆಂಪೇಗೌಡ ಜಯಂತಿ ಕಾರ್ಯಕ್ರಮದ ವೇಳೆ ಶಾಸಕ ಪ್ರದೀಪ್ ಈಶ್ವರ್ ಅವರ ವರ್ತನೆಯೇ ಉದ್ವಿಗ್ನತೆಗೆ ಕಾರಣವಾಗಿದ್ದು, ಅದರಿಂದಲೇ ಚಪ್ಪಲಿ ಎಸೆಯುವಂತಹ ಘಟನೆ ನಡೆದಿದೆ ಎಂದು ಸಮಾಜ ಸೇವಕ ಹಾಗೂ ಚಿತ್ರ ಸಾಹಿತಿ ಡಾ. ಮಾಲೂರು ವರದರಾಜು ಆರೋಪಿಸಿದರು.

ನಗರದ ಪತ್ರಕರ್ತರ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸಾರ್ವಜನಿಕ ಕಾರ್ಯಕ್ರಮದಲ್ಲಿ ಶಾಸಕ ಪ್ರದೀಪ್ ಈಶ್ವರ್ ತೊಡೆ ತಟ್ಟುವುದು, ಭುಜ ಹಾಗೂ ಕೂದಲು ಕಿತ್ತೆಸೆಯುವಂತೆ ವರ್ತಿಸುವುದು ಜನರನ್ನು ಪ್ರಚೋದಿಸುವಂತಿತ್ತು. ಚಪ್ಪಲಿ ಎಸೆದ ವ್ಯಕ್ತಿಯ ತಪ್ಪು ಎಷ್ಟಿದೆಯೋ, ಅದೇ ಮಟ್ಟಿಗೆ ಪ್ರಚೋದನೆ ನೀಡಿದವರಿಗೂ ಹೊಣೆಗಾರಿಕೆ ಇದೆ ಎಂದು ಹೇಳಿದರು.



ಚಪ್ಪಲಿ ಎಸೆದ ವ್ಯಕ್ತಿಯ ವಿರುದ್ಧ ಪ್ರಕರಣ ದಾಖಲಿಸಿರುವ ಪೊಲೀಸರು, ಘಟನೆಗೆ ಪ್ರಚೋದನೆ ನೀಡಿದ ಆರೋಪದ ಮೇಲೆ ಶಾಸಕ ಪ್ರದೀಪ್ ಈಶ್ವರ್ ವಿರುದ್ಧ ಏಕೆ ಪ್ರಕರಣ ದಾಖಲಿಸಿಲ್ಲ ಎಂದು ಪ್ರಶ್ನಿಸಿದ ಅವರು, ಘಟನೆಗೆ ಸಂಬಂಧಿಸಿದಂತೆ ಆರು ವಾರಗಳೊಳಗೆ ನ್ಯಾಯಾಲಯದಲ್ಲಿ ಶಾಸಕರ ವಿರುದ್ಧ ಕ್ರಿಮಿನಲ್ ದೂರು ದಾಖಲಿಸುವುದಾಗಿ ತಿಳಿಸಿದರು.

ಶಾಸಕರು ತಮ್ಮ ಸ್ಥಾನಕ್ಕೆ ತಕ್ಕ ರೀತಿಯಲ್ಲಿ ನಡೆದುಕೊಳ್ಳದೆ, ಮತದಾರರ ಭಾವನೆಗಳನ್ನು ಕಡೆಗಣಿಸಿ ಸಮಾಜದಲ್ಲಿ ಶಾಂತಿ ಕದಡುವ ರೀತಿಯಲ್ಲಿ ವರ್ತಿಸಿದ್ದಾರೆ ಎಂದು ಅವರು ಆರೋಪಿಸಿದರು.

ಮಾಜಿ ಮುಖ್ಯಮಂತ್ರಿ ಎಚ್.ಡಿ. ಕುಮಾರಸ್ವಾಮಿ ಅವರ ಬಗ್ಗೆ ಅವಹೇಳನಕಾರಿ ಹೇಳಿಕೆ ನೀಡಿರುವುದಾಗಿ ಆರೋಪಿಸಿದ ಡಾ. ವರದರಾಜು, ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಸಚಿವ ಪ್ರಿಯಾಂಕ್ ಖರ್ಗೆ ಹಾಗೂ ಉಪಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ್ ಅವರನ್ನೂ ಇದೇ ರೀತಿಯ ಧೈರ್ಯದಿಂದ ಪ್ರಶ್ನಿಸುತ್ತಾರೆಯೇ ಎಂದು ಶಾಸಕ ಪ್ರದೀಪ್ ಈಶ್ವರ್ ಅವರನ್ನು ಪ್ರಶ್ನಿಸಿದರು.

ಇದೇ ಸಂದರ್ಭದಲ್ಲಿ ತಾವು ಸಾಹಿತ್ಯ ಬರೆದ ನಟ ದೇವರಾಜ್ ಅಭಿನಯದ ‘ಪ್ರಜಾ ರಾಜ್ಯ’ ಚಲನಚಿತ್ರದ ಯೂಟ್ಯೂಬ್ ಬಿಡುಗಡೆ ಮಾಡಲಾಯಿತು. ಈ ಚಿತ್ರದಲ್ಲಿ ರಾಜಕೀಯ, ಮತದಾರರ ಪಾತ್ರ ಹಾಗೂ ಚುನಾವಣೆ ಸಂದರ್ಭದಲ್ಲಿನ ರಾಜಕಾರಣಿಗಳ ನಡೆ–ನುಡಿಗಳ ಕುರಿತು ವಿಮರ್ಶಾತ್ಮಕವಾಗಿ ಚಿತ್ರಿಸಲಾಗಿದೆ ಎಂದು ಡಾ. ವರದರಾಜು ತಿಳಿಸಿದರು. ಮುಂದಿನ ದಿನಗಳಲ್ಲಿ ಸಮಾಜಮುಖಿ ಅಭಿವೃದ್ಧಿಯ ಚಿಂತನೆಯೊಂದಿಗೆ ಚಿಕ್ಕಬಳ್ಳಾಪುರ ವಿಧಾನಸಭಾ ಕ್ಷೇತ್ರದಿಂದ ಶಾಸಕ ಸ್ಥಾನಕ್ಕೆ ಸ್ಪರ್ಧಿಸುವ ಉದ್ದೇಶವಿದೆ ಎಂದು ಅವರು ಇದೇ ವೇಳೆ ಘೋಷಿಸಿದರು.

# ‘ಎಸ್‌ಐಆರ್–2026 ಕಾರ್ಯದಲ್ಲಿ ಚಿಕ್ಕಬಳ್ಳಾಪುರ ರಾಜ್ಯಕ್ಕೆ ಮಾದರಿ’

ಚಿಕ್ಕಬಳ್ಳಾಪುರ

ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ (ಎಸ್‌ಐಆರ್)–2026 ಕಾರ್ಯದಲ್ಲಿ ಚಿಕ್ಕಬಳ್ಳಾಪುರ ಜಿಲ್ಲೆ ರಾಜ್ಯಕ್ಕೆ ಮಾದರಿಯಾಗಿ ಕಾರ್ಯನಿರ್ವಹಿಸುತ್ತಿದ್ದು, ಗಣತಿ ನಮೂನೆಗಳ ವಿತರಣೆ ಹಾಗೂ ಮತದಾರರ ಮಾಹಿತಿಯ ಡಿಜಿಟಲೀಕರಣದಲ್ಲಿ ಶೇ.30ರಷ್ಟು ಪ್ರಗತಿ ಸಾಧಿಸಿರುವುದು ಶ್ಲಾಘನೀಯ ಎಂದು ಕರ್ನಾಟಕದ ಮುಖ್ಯ ಚುನಾವಣಾಧಿಕಾರಿ ವಿ.ಅಂಬುಕುಮಾರ್ ಹೇಳಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ಎಸ್‌ಐಆರ್–2026 ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಜಿಲ್ಲೆಯ ಮತದಾರರ ಮ್ಯಾಪಿಂಗ್, ಗಣತಿ ನಮೂನೆಗಳ ವಿತರಣೆ, ಮಾಹಿತಿ ಸಂಗ್ರಹಣೆ ಹಾಗೂ ತಂತ್ರಾಂಶದಲ್ಲಿ ದಾಖಲಿಸುವ ಕಾರ್ಯ ವ್ಯವಸ್ಥಿತವಾಗಿ ನಡೆಯುತ್ತಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಈ ಸಾಧನೆಯ ಹಿಂದೆ ಮತಗಟ್ಟೆ ಮಟ್ಟದ ಅಧಿಕಾರಿಗಳ (ಬಿಎಲ್‌ಒ) ಪರಿಶ್ರಮ ಹಾಗೂ ಜಿಲ್ಲಾ ಮತ್ತು ತಾಲೂಕು ಮಟ್ಟದ ಅಧಿಕಾರಿಗಳ ಸಮನ್ವಯ ಪ್ರಮುಖ ಕಾರಣವಾಗಿದೆ. ಇದೇ ಉತ್ಸಾಹದೊಂದಿಗೆ ಕಾರ್ಯನಿರ್ವಹಿಸಿ ನಿಗದಿತ ಅವಧಿಯೊಳಗೆ ಶೇ.100ರಷ್ಟು ಗುರಿ ಸಾಧಿಸಬೇಕು ಎಂದು ಅವರು ಸೂಚಿಸಿದರು.

ಮತದಾರರಿಂದ ಸಂಗ್ರಹಿಸುವ ಮಾಹಿತಿ, ದಾಖಲೆಗಳು, ಭಾವಚಿತ್ರ ಹಾಗೂ ಸಹಿಗಳನ್ನು ತಂತ್ರಾಂಶದಲ್ಲಿ ದಾಖಲಿಸುವಾಗ ಅತ್ಯಂತ ನಿಖರತೆ ಕಾಪಾಡಬೇಕು. ಗುಣಮಟ್ಟವಿಲ್ಲದ ದಾಖಲೆಗಳು ಮತ್ತು ಚಿತ್ರಗಳು ಪರಿಶೀಲನೆ ಹಂತದಲ್ಲಿ ತಿರಸ್ಕೃತವಾಗುವ ಸಾಧ್ಯತೆ ಇರುವುದರಿಂದ, ಬಿಎಲ್‌ಒಗಳು ಹಾಗೂ ಮೇಲ್ವಿಚಾರಕರು ಹೆಚ್ಚಿನ ಎಚ್ಚರಿಕೆ ವಹಿಸಬೇಕು ಎಂದು ತಿಳಿಸಿದರು.



ಪ್ರತಿ ದಿನ ಎಸ್‌ಐಆರ್ ಕಾರ್ಯಗಳ ಪ್ರಗತಿಯನ್ನು ಪರಿಶೀಲಿಸಿ ಅಗತ್ಯ ಮಾರ್ಗದರ್ಶನ ನೀಡಬೇಕು. ಜಿಲ್ಲಾ ಹಾಗೂ ತಾಲೂಕು ಮಟ್ಟದ ಅಧಿಕಾರಿಗಳು ಕಾರ್ಯದ ಗುಣಮಟ್ಟ ಮತ್ತು ವೇಗ ಎರಡನ್ನೂ ನಿರಂತರವಾಗಿ ಮೇಲ್ವಿಚಾರಣೆ ಮಾಡಬೇಕು. ಯಾವುದೇ ಹಂತದಲ್ಲೂ ನಿರ್ಲಕ್ಷ್ಯಕ್ಕೆ ಅವಕಾಶ ನೀಡಬಾರದು ಎಂದು ಸೂಚಿಸಿದರು.

ಅರ್ಹ ಮತದಾರರು ಯಾರೂ ಮತದಾರರ ಪಟ್ಟಿಯಿಂದ ಹೊರಗುಳಿಯದಂತೆ ಹಾಗೂ ಅನರ್ಹರು ಅಥವಾ ನಕಲಿ ಹೆಸರುಗಳು ಪಟ್ಟಿಗೆ ಸೇರ್ಪಡೆಯಾಗದಂತೆ ತಡೆಯುವುದೇ ಎಸ್‌ಐಆರ್‌ನ ಮುಖ್ಯ ಉದ್ದೇಶವಾಗಿದೆ. ಪಾರದರ್ಶಕ, ನಿಖರ ಮತ್ತು ವಿಶ್ವಾಸಾರ್ಹ ಮತದಾರರ ಪಟ್ಟಿಯನ್ನು ಸಿದ್ಧಪಡಿಸುವಲ್ಲಿ ಎಲ್ಲ ಅಧಿಕಾರಿಗಳು ಸಮರ್ಪಣಾ ಮನೋಭಾವದಿಂದ ಕಾರ್ಯನಿರ್ವಹಿಸಬೇಕು ಎಂದು ಅವರು ಹೇಳಿದರು.

ಸಭೆಯಲ್ಲಿ ಜಿಲ್ಲಾಧಿಕಾರಿ ಜಿ. ಪ್ರಭು ಜಿಲ್ಲೆಯ ಎಸ್‌ಐಆರ್ ಕಾರ್ಯದ ಪ್ರಗತಿ ಕುರಿತು ಮಾಹಿತಿ ನೀಡಿ, ಗಣತಿ ನಮೂನೆಗಳ ವಿತರಣೆ, ಮಾಹಿತಿ ಸಂಗ್ರಹಣೆ ಹಾಗೂ ಡಿಜಿಟಲೀಕರಣ ಕಾರ್ಯಗಳು ಯೋಜಿತವಾಗಿ ನಡೆಯುತ್ತಿವೆ. ಮುಖ್ಯ ಚುನಾವಣಾಧಿಕಾರಿಗಳ ಸೂಚನೆಗಳನ್ನು ಕಟ್ಟುನಿಟ್ಟಾಗಿ ಅನುಷ್ಠಾನಗೊಳಿಸಿ ನಿಗದಿತ ಅವಧಿಯೊಳಗೆ ಶೇ.100ರಷ್ಟು ಗುರಿ ಸಾಧಿಸಲು ಜಿಲ್ಲಾಡಳಿತ ಬದ್ಧವಾಗಿದೆ ಎಂದು ತಿಳಿಸಿದರು.

ಸಭೆಯ ಬಳಿಕ ಮುಖ್ಯ ಚುನಾವಣಾಧಿಕಾರಿ ವಿ. ಅಂಬು ಕುಮಾರ್ ಅವರು ಚಿಕ್ಕಬಳ್ಳಾಪುರ ತಾಲೂಕಿನ ಪಟ್ರೇನಹಳ್ಳಿ ಗ್ರಾಮದ ಮತಗಟ್ಟೆ ಸಂಖ್ಯೆ 90ಕ್ಕೆ ಭೇಟಿ ನೀಡಿ, ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ ಕಾರ್ಯವನ್ನು ಪರಿಶೀಲಿಸಿದರು.

ಈ ಸಂದರ್ಭದಲ್ಲಿ ಉಪ ಮುಖ್ಯ ಚುನಾವಣಾಧಿಕಾರಿ ಕೆ.ಎಂ. ಪ್ರಾಣೇಶ್, ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಡಾ. ವೈ. ನವೀನ್ ಭಟ್, ಅಪರ ಜಿಲ್ಲಾಧಿಕಾರಿ ಡಾ. ಎನ್. ಭಾಸ್ಕರ್, ಉಪವಿಭಾಗಾಧಿಕಾರಿ ಡಿ.ಎಚ್. ಅಶ್ವಿನ್, ಜಿಲ್ಲಾ ಪಂಚಾಯಿತಿ ಉಪಕಾರ್ಯದರ್ಶಿ ಅತಿಕ್ ಪಾಷಾ, ತಹಸೀಲ್ದಾರರು, ಮತಗಟ್ಟೆ ಮಟ್ಟದ ಅಧಿಕಾರಿ ಕೋಮಲ ಟಿ., ಮೇಲ್ವಿಚಾರಕ ಶಂಕರರೆಡ್ಡಿ ಹಾಗೂ ಚುನಾವಣಾ ಕಾರ್ಯಕ್ಕೆ ನಿಯೋಜಿತ ಅಧಿಕಾರಿಗಳು ಉಪಸ್ಥಿತರಿದ್ದರು.

# ‘ಜಿಬಿಎ ಚುನಾವಣೆ ಮತ್ತಷ್ಟು ಮುಂದೂಡಬೇಡಿ’

ಬೆಂಗಳೂರು

ಗ್ರೇಟರ್ ಬೆಂಗಳೂರು ಪ್ರಾಧಿಕಾರ (ಜಿಬಿಎ) ಸೇರಿದಂತೆ ಸ್ಥಳೀಯ ಸಂಸ್ಥೆಗಳ ಚುನಾವಣೆಗಳನ್ನು ಇನ್ನಷ್ಟು ವಿಳಂಬ ಮಾಡದೆ ಶೀಘ್ರದಲ್ಲೇ ನಡೆಸಬೇಕು ಎಂದು ಶಾಸಕ ಎಸ್.ಆರ್. ವಿಶ್ವನಾಥ್ ರಾಜ್ಯ ಸರ್ಕಾರವನ್ನು ಒತ್ತಾಯಿಸಿದ್ದಾರೆ.



ಸುದ್ದಿಗಾರರೊಂದಿಗೆ ಮಾತ ನಾಡಿದ ಅವರು, ವಿಶೇಷ ಮತದಾರರ ಪಟ್ಟಿ ಪರಿಷ್ಕರಣೆ (ಎಸ್‌ಐಆರ್) ಪ್ರಕ್ರಿಯೆ ಅಂತಿಮ ಹಂತದಲ್ಲಿದ್ದು, ಅದು ಪೂರ್ಣಗೊಂಡ ತಕ್ಷಣವೇ ಜಿಬಿಎ ಚುನಾವಣೆ ಘೋಷಿಸಬೇಕು ಎಂದು ಹೇಳಿದರು. ಪ್ರಸ್ತುತ ಜಿಬಿಎ, ಜಿಲ್ಲಾ ಪಂಚಾಯಿತಿ, ತಾಲೂಕು ಪಂಚಾಯಿತಿ ಹಾಗೂ ಗ್ರಾಮ ಪಂಚಾಯಿತಿಗಳಲ್ಲಿ ಜನಪ್ರತಿನಿಧಿಗಳಿಲ್ಲದ ಕಾರಣ ಎಲ್ಲ ಸಮಸ್ಯೆಗಳಿಗೂ ಶಾಸಕರನ್ನೇ ಜನರು ಅವಲಂಬಿಸುವಂತಾಗಿದೆ. ಹೀಗಾಗಿ ಯಾವುದೇ ನೆಪ ಹೇಳದೆ ಸ್ಥಳೀಯ ಸಂಸ್ಥೆಗಳಿಗೆ ಚುನಾವಣೆ ನಡೆಸುವುದು ಸರ್ಕಾರದ ಜವಾಬ್ದಾರಿ ಎಂದು ತಿಳಿಸಿದರು.

ಜಿಬಿಎ ಚುನಾವಣೆ ಮುಂದೂಡಲು ಸರ್ಕಾರ ಈವರೆಗೆ ವಿವಿಧ ಕಾರಣಗಳನ್ನು ನೀಡಿದ್ದು, ಸುಪ್ರೀಂ ಕೋರ್ಟ್ ಕೂಡ ಕೆಲ ಸಂದರ್ಭಗಳಲ್ಲಿ ಅವಕಾಶ ನೀಡಿತ್ತು. ಆದರೆ ಇನ್ನು ಮುಂದೆ ಚುನಾವಣೆ ಮುಂದೂಡಲು ಅವಕಾಶ ಇಲ್ಲ ಎಂದು ನ್ಯಾಯಾಲಯ ಸ್ಪಷ್ಟಪಡಿಸಿದೆ. ಆದ್ದರಿಂದ ಈ ತಿಂಗಳಲ್ಲೇ ಚುನಾವಣಾ ದಿನಾಂಕ ಪ್ರಕಟವಾದರೆ ಉತ್ತಮ ಎಂದು ಅಭಿಪ್ರಾಯಪಟ್ಟರು.

ಬಿಜೆಪಿ–ಜೆಡಿಎಸ್ ಮೈತ್ರಿ ಕುರಿತು ಪ್ರತಿಕ್ರಿಯಿಸಿದ ಅವರು, ಜಿಬಿಎ ಚುನಾವಣೆಯಲ್ಲಿ ಎರಡೂ ಪಕ್ಷಗಳ ನಡುವೆ ಸಮನ್ವಯ ಅಗತ್ಯವಿದ್ದು, ಜೆಡಿಎಸ್‌ಗೂ ಸೂಕ್ತ ಸ್ಥಾನಮಾನ ನೀಡಬೇಕು ಎಂದರು. ಯಾವ ಕ್ಷೇತ್ರಗಳಲ್ಲಿ ಯಾವ ಪಕ್ಷ ಸ್ಪರ್ಧಿಸಬೇಕು, ಅಭ್ಯರ್ಥಿಗಳ ಆಯ್ಕೆ ಹೇಗಿರಬೇಕು ಎಂಬುದನ್ನು ನಿರ್ಧರಿಸಲು ಜಂಟಿ ಸಮನ್ವಯ ಸಮಿತಿ ರಚಿಸುವ ಬಗ್ಗೆ ಚರ್ಚೆಯಾಗಿದ್ದು, ಶೀಘ್ರದಲ್ಲೇ ಸಮಿತಿ ರಚನೆಯಾಗಲಿದೆ ಎಂದು ಹೇಳಿದರು.

ಜಿಬಿಎ ಚುನಾವಣೆಗೆ ಪ್ರತ್ಯೇಕ ಪ್ರಣಾಳಿಕೆ ಸಿದ್ಧಪಡಿಸಲು ಪಕ್ಷದೊಳಗೆ ತಂಡ ರಚಿಸುವ ಪ್ರಕ್ರಿಯೆ ಆರಂಭವಾಗಿದೆ. ಶಾಸಕ ಡಾ. ಸಿ.ಎನ್. ಅಶ್ವತ್ಥ ನಾರಾಯಣ ಅವರ ನೇತೃತ್ವದಲ್ಲಿ ಸಮಿತಿ ರಚನೆಯಾಗುವ ಸಾಧ್ಯತೆ ಇದೆ. ನಗರದ ವಿವಿಧ ಭಾಗಗಳ ಅಗತ್ಯಗಳಿಗೆ ಅನುಗುಣವಾಗಿ ಪ್ರತ್ಯೇಕ ಪ್ರಣಾಳಿಕೆ ರೂಪಿಸಿ, ಅಭ್ಯರ್ಥಿಗಳ ಆಯ್ಕೆ ಹಾಗೂ ಸಂಘಟನೆ ಬಲವರ್ಧನೆ ಕುರಿತು ಚರ್ಚೆ ನಡೆಸಲಾಗುವುದು ಎಂದು ತಿಳಿಸಿದರು.

ಬಿಜೆಪಿ ರಾಜ್ಯಾಧ್ಯಕ್ಷರು, ವಿರೋಧ ಪಕ್ಷದ ನಾಯಕರು, ಮಾಜಿ ಮುಖ್ಯಮಂತ್ರಿಗಳಾದ ಬಿ.ಎಸ್. ಯಡಿಯೂರಪ್ಪ ಹಾಗೂ ಡಿ.ವಿ. ಸದಾನಂದ ಗೌಡ ಸೇರಿದಂತೆ ಪಕ್ಷದ ಹಿರಿಯ ನಾಯಕರು ರಾಜ್ಯದ ವಿವಿಧ ಭಾಗಗಳಲ್ಲಿ ಜಂಟಿ ಪ್ರವಾಸ ಕೈಗೊಳ್ಳಲಿದ್ದಾರೆ ಎಂದರು.

ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರದಲ್ಲಿ ಕನಿಷ್ಠ ನಾಲ್ಕು ಶಾಸಕರನ್ನು ಗೆಲ್ಲಿಸುವ ಗುರಿಯೊಂದಿಗೆ ಸಂಸದ ಡಾ. ಕೆ. ಸುಧಾಕರ್ ಅವರೊಂದಿಗೆ ಕೆಲಸ ಮಾಡುವುದಾಗಿ ವಿಶ್ವನಾಥ್ ಹೇಳಿದರು.

ಯಲಹಂಕ ಕ್ಷೇತ್ರದಲ್ಲಿ ಎಸ್‌ಐಆರ್ ಪ್ರಕ್ರಿಯೆ ಯಾವುದೇ ಗೊಂದಲವಿಲ್ಲದೆ ಸುಸೂತ್ರವಾಗಿ ನಡೆಯುತ್ತಿದ್ದು, ಬಿಎಲ್‌ಒ ಹಾಗೂ ಬಿಎಲ್‌ಎಗಳು ಸಮನ್ವಯದಿಂದ ಕಾರ್ಯನಿರ್ವಹಿಸುತ್ತಿದ್ದಾರೆ. ಮತದಾರರ ಅರ್ಜಿ ಸಂಗ್ರಹಕ್ಕಾಗಿ ಮನೆ ಮನೆಗೆ ತೆರಳಿ ಕಾರ್ಯನಿರ್ವಹಿಸುವಂತೆ ಸೂಚನೆ ನೀಡಲಾಗಿದೆ ಎಂದು ಅವರು ತಿಳಿಸಿದರು.



ಮಧುಗಿರಿ ತಾಲ್ಲೂಕು ಮಾದರ ಮಹಾ ಸಭಾದ ಅಧ್ಯಕ್ಷರಾದ ಎನ್ ಗೋಪಾಲಯ್ಯ ನವರ ಹಾಗೂ ಮಧುಗಿರಿ ತಾಲ್ಲೂಕು ಉಸ್ತುವಾರಿ ಸಂಘಟನಾ ಕಾರ್ಯದರ್ಶಿಯಾದ ಎಸ್ ಡಿ ಕೃಷ್ಣಪ್ಪನವರ ನೇತೃತ್ವದಲ್ಲಿ ಕೊಡಿಗೇನಹಳ್ಳಿ ಹೋಬಳಿ ಮಟ್ಟದ ಕರ್ನಾಟಕ ಮಾದರ ಮಹಾ ಸಭಾದ ಸದಸ್ಯತ್ವದ ಅಭಿಯಾನ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು. ಕಾರ್ಯದರ್ಶಿಯಾದ ಟಿ.ಎಂ.ಶಿವಣ್ಣ, ಕಾರ್ಯದರ್ಶಿ ರಂಗಧಾಮಯ್ಯ,ಮಾಜಿ ತಾ ಪಂ ಸದಸ್ಯರಾದ ವಿ.ವೆಂಕಟೇಶ್, ಜಿ.ನರಸಿಂಹಯ್ಯ, ರಂಗಶಾಮಯ್ಯ, ತಿಪ್ಪೇಸ್ವಾಮಿ, ಅಂಜನಮೂರ್ತಿಇತರರು ಉಪಸ್ಥಿತರಿದ್ದರು.

# ಮಧುಗಿರಿಯಲ್ಲಿ ಜುಲೈ 12ರಂದು ನೂತನ ಆರ್ಯವೇದ ಆಸ್ಪತ್ರೆ ಉದ್ಘಾಟನೆ

ಮಧುಗಿರಿ

ಸಾರ್ವಜನಿಕರಿಗೆ ಗುಣಮಟ್ಟದ ಆರೋಗ್ಯ ಸೇವೆ ಒದಗಿಸುವ ಉದ್ದೇಶದಿಂದ ತುಮಕೂರು ಜಿಲ್ಲೆಯಲ್ಲಿ ಎರಡನೇ ನೂತನ ಆರ್ಯವೇದ ಆಸ್ಪತ್ರೆಯನ್ನು ಆರಂಭಿಸಲಾಗುತ್ತಿದೆ ಎಂದು ಶ್ರೀ ರಾಘವೇಂದ್ರ ಆರ್ಯವೇದ ಆಸ್ಪತ್ರೆಯ ಮುಖ್ಯಸ್ಥ ಡಾ. ಜಿ.ಕೆ. ಜಯರಾಮ್ ತಿಳಿಸಿದ್ದಾರೆ.

ಪಟ್ಟಣದ ತುಮಕೂರು ಗೇಟ್ ಸಮೀಪದ ಶ್ರೀ ರಾಘವೇಂದ್ರ ಆಸ್ಪತ್ರೆಯಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಬಿಪಿಎಲ್ ಕಾರ್ಡ್ ಹೊಂದಿರುವವರಿಗೆ ರಿಯಾಯಿತಿ ದರದಲ್ಲಿ ನುರಿತ ವೈದ್ಯರ ತಂಡದ ಮೂಲಕ ಚಿಕಿತ್ಸೆ ನೀಡಲಾಗುವುದು ಎಂದು ಹೇಳಿದರು.

ಮುಂದಿನ ಎರಡು ವರ್ಷಗಳಲ್ಲಿ 100 ವಿದ್ಯಾರ್ಥಿಗಳ ಸಾಮರ್ಥ್ಯದ ಆರ್ಯವೇದ ಕಾಲೇಜನ್ನು ಆರಂಭಿಸುವ ಯೋಜನೆಯೂ ಇದೆ ಎಂದು ತಿಳಿಸಿದ ಅವರು, ಕಳೆದ 49 ವರ್ಷಗಳಿಂದ ಇದೇ ತಾಲೂಕಿನಲ್ಲಿ ಆಸ್ಪತ್ರೆಯ ಮೂಲಕ ಸಾರ್ವಜನಿಕರಿಗೆ ಆರೋಗ್ಯ ಸೇವೆ ನೀಡುತ್ತಿದ್ದು, ಗ್ರಾಮೀಣ ಪ್ರದೇಶಗಳಲ್ಲಿ ಉಚಿತ ಆರೋಗ್ಯ ತಪಾಸಣಾ ಶಿಬಿರಗಳನ್ನು ಆಯೋಜಿಸುವ ಮೂಲಕ ಗುಣಮಟ್ಟದ ವೈದ್ಯಕೀಯ ಸೇವೆ ಒದಗಿಸಲಾಗುತ್ತಿದೆ ಎಂದು ಹೇಳಿದರು.

ಜುಲೈ 12ರಂದು ಬೆಳಿಗ್ಗೆ 10 ಗಂಟೆಗೆ ಆಸ್ಪತ್ರೆಯ ಉದ್ಘಾಟನಾ ಸಮಾರಂಭ ನಡೆಯಲಿದ್ದು, ಮಾಜಿ ಸಚಿವ ಹಾಗೂ ಶಾಸಕ ಕೆ.ಎನ್. ರಾಜಣ್ಣ, ವಿಧಾನ ಪರಿಷತ್ ಸದಸ್ಯ ರಾಜೇಂದ್ರ ರಾಜಣ್ಣ, ಪಾವಗಡದ ರಾಮಕೃಷ್ಣ ಆಶ್ರಮದ ಶ್ರೀ ಜಪಾನಂದ ಮಹಾರಾಜ್ ಸ್ವಾಮೀಜಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಚಂದ್ರಶೇಖರ್ ಬಿ.ಎಂ., ಎಸ್‌ಡಿಎಂ ಆರ್ಯವೇದ ಶಿಕ್ಷಣ ಸಂಸ್ಥೆಯ ನಿರ್ದೇಶಕ ಪ್ರೊ. ಪ್ರಸನ್ನ ನರಸಿಂಹ ರಾವ್ ಸೇರಿದಂತೆ ಹಲವರು ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ ಎಂದು ಮಾಹಿತಿ ನೀಡಿದರು.

ಆಸ್ಪತ್ರೆಯ ವೈದ್ಯ ಉಲ್ಲಾಸ್ ಮಾತನಾಡಿ, ಆರ್ಯವೇದದಲ್ಲಿ ಶಸ್ತ್ರಚಿಕಿತ್ಸೆ ನಡೆಸುವುದಿಲ್ಲ ಎಂಬ ತಪ್ಪು ಕಲ್ಪನೆ ಹಲವರಲ್ಲಿದೆ. ಆದರೆ ನೂತನ ಆಸ್ಪತ್ರೆಯಲ್ಲಿ ಅಗತ್ಯವಿರುವ ಶಸ್ತ್ರಚಿಕಿತ್ಸೆಗಳನ್ನೂ ನಡೆಸಲಾಗುವುದು ಎಂದು ತಿಳಿಸಿದರು.

ಸ್ಥೂಲಕಾಯ, ಮಧುಮೇಹ, ಅಧಿಕ ಕೊಲೆಸ್ಟ್ರಾಲ್, ಸಂಧಿವಾತ, ಮೊಣಕಾಲು ನೋವು, ಸೈಯಾಟಿಕಾ, ಸರ್ವೈಕಲ್ ಹಾಗೂ ಲಂಬಾರ್ ಸ್ಪಾಂಡಿಲೋಸಿಸ್, ವೆರಿಕೋಸ್ ವೇನ್ಸ್ ಸೇರಿದಂತೆ ವಿವಿಧ ಕಾಯಿಲೆಗಳಿಗೆ ವಿಶೇಷ ಚಿಕಿತ್ಸೆ ನೀಡಲಾಗುವುದು. ಪಾರ್ಶ್ವವಾಯು ಪೀಡಿತರಿಗೆ ಚಿಕಿತ್ಸೆ ನೀಡುವ ವಿಶೇಷ ವ್ಯವಸ್ಥೆಯೂ ಆಸ್ಪತ್ರೆಯಲ್ಲಿ ಲಭ್ಯವಿದ್ದು, ಇದರಿಂದ ನೆರೆಯ ಜಿಲ್ಲೆಗಳಿಗೆ ತೆರಳುವ ಅಗತ್ಯ ಕಡಿಮೆಯಾಗಲಿದೆ ಎಂದರು.

ಮಹಿಳೆಯರು ಹಾಗೂ ಪುರುಷರಿಗೆ ಪ್ರತ್ಯೇಕ ಪಂಚಕರ್ಮ ಚಿಕಿತ್ಸಾ ಕೊಠಡಿಗಳು, ಹೊರರೋಗಿ ಹಾಗೂ ಒಳರೋಗಿ ವಿಭಾಗ, ಡ್ರೆಸಿಂಗ್ ಮತ್ತು ಸಣ್ಣ ಶಸ್ತ್ರಚಿಕಿತ್ಸಾ ಕೊಠಡಿ, ಸುಸಜ್ಜಿತ ವಾರ್ಡ್‌ಗಳು, ಯೋಗ ಮತ್ತು ಜೀವನಶೈಲಿ ಸಲಹಾ ಕೇಂದ್ರ ಹಾಗೂ ತುರ್ತು ಚಿಕಿತ್ಸಾ ಸೌಲಭ್ಯಗಳನ್ನು ಆಸ್ಪತ್ರೆಯಲ್ಲಿ ಕಲ್ಪಿಸಲಾಗಿದೆ ಎಂದು ತಿಳಿಸಿದರು. ಪತ್ರಿಕಾಗೋಷ್ಠಿಯಲ್ಲಿ ಸಂಸ್ಥೆಯ ನಿರ್ದೇಶಕಿ ವಿಮಲಾ ಜಯರಾಮ್, ರಾಘವೇಂದ್ರ ಪದವಿಪೂರ್ವ ಕಾಲೇಜಿನ ಉಪನ್ಯಾಸಕ ಮಾರುತಿ ಬಿಜವಾರ್ ಹಾಗೂ ಆಸ್ಪತ್ರೆಯ ಸಿಬ್ಬಂದಿ ಉಪಸ್ಥಿತರಿದ್ದರು.

# ಸಂಭ್ರಮದಲ್ಲಿ ಶಾಲಾ ಸಂಸತ್ ಚುನಾವಣೆ

ಗುಡಿಬಂಡೆ

ತಾಲೂಕಿನ ಮಾಚಹಳ್ಳಿ ಸರ್ಕಾರಿ ಪ್ರೌಢಶಾಲೆಯಲ್ಲಿ 2026–27ನೇ ಸಾಲಿನ ಶಾಲಾ ಸಂಸತ್ ಚುನಾವಣೆ ಹಬ್ಬದ ವಾತಾವರಣದಲ್ಲಿ ಯಶಸ್ವಿಯಾಗಿ ನಡೆಯಿತು. ಗುಡಿಬಂಡೆ ತಾಲೂಕು ಸ್ವೀಪ್ ಸಮಿತಿ ಹಾಗೂ ಶಾಲೆಯ ಮತದಾರರ ಸಾಕ್ಷರತಾ ಕ್ಲಬ್ ಸಹಯೋಗದಲ್ಲಿ ಆಯೋಜಿಸಿದ್ದ ಚುನಾವಣೆಯಲ್ಲಿ ವಿದ್ಯಾರ್ಥಿಗಳು ನೈಜ ಚುನಾವಣೆಯ ಅನುಭವ ಪಡೆದು ಪ್ರಜಾಪ್ರಭುತ್ವದ ಮೌಲ್ಯಗಳನ್ನು ಅರಿತುಕೊಂಡರು.

ಚುನಾವಣೆಯ ಅಂಗವಾಗಿ ಅಭ್ಯರ್ಥಿಗಳ ಪ್ರಚಾರ, ಪರ–ವಿರೋಧ ಚರ್ಚೆಗಳು, ಮತದಾರರ ಮನವೊಲಿಕೆ, ಮತಗಟ್ಟೆಗಳಲ್ಲಿ ಸರತಿ ಸಾಲಿನಲ್ಲಿ ನಿಂತು ಮತ ಚಲಾಯಿಸಿದ ವಿದ್ಯಾರ್ಥಿಗಳು ಹಾಗೂ ಫಲಿತಾಂಶದ ನಿರೀಕ್ಷೆಯಲ್ಲಿದ್ದ ಅಭ್ಯರ್ಥಿಗಳ ಉತ್ಸಾಹ ಸಾಮಾನ್ಯ ಚುನಾವಣೆಯ ವಾತಾವರಣವನ್ನು ಸೃಷ್ಟಿಸಿತು. ಮತದಾನಕ್ಕೂ ಮುನ್ನ ಎಲ್ಲ ವಿದ್ಯಾರ್ಥಿಗಳು ಮತದಾರರ ಪ್ರತಿಜ್ಞೆ ಸ್ವೀಕರಿಸಿದರು.

ಚುನಾವಣೆಯ ಅಧಿಸೂಚನೆ ಪ್ರಕಟವಾದ



ಬಳಿಕ ನಾಮಪತ್ರ ಸಲ್ಲಿಕೆ, ಪರಿಶೀಲನೆ, ನಾಮಪತ್ರ ಹಿಂಪಡೆಯುವುದು, ಪ್ರಚಾರ, ಮತದಾನ, ಮತ ಎಣಿಕೆ, ಫಲಿತಾಂಶ ಪ್ರಕಟಣೆ, ಖಾತೆ ಹಂಚಿಕೆ ಹಾಗೂ ಪ್ರಮಾಣವಚನ ಸ್ವೀಕಾರ ಸೇರಿದಂತೆ ಸಂಪೂರ್ಣ ಚುನಾವಣಾ ಪ್ರಕ್ರಿಯೆಯನ್ನು ವಿದ್ಯಾರ್ಥಿಗಳೇ ನಿರ್ವಹಿಸಿದರು.

ರಹಸ್ಯ ಮತದಾನ ವ್ಯವಸ್ಥೆ, ಮತಪತ್ರ, ಮತದಾರರ ಪಟ್ಟಿ ಹಾಗೂ ಗುರುತಿನ ಚೀಟಿ ಬಳಕೆಯ ಮೂಲಕ ವಿದ್ಯಾರ್ಥಿಗಳಿಗೆ ನೈಜ ಚುನಾವಣೆಯ ಅನುಭವ ಕಲ್ಪಿಸಲಾಯಿತು. ಮತಗಟ್ಟೆ ಸಿಬ್ಬಂದಿ, ಚುನಾವಣಾಧಿಕಾರಿಗಳು ಹಾಗೂ ಮತ ಎಣಿಕೆ ಸಿಬ್ಬಂದಿಗಳಾಗಿಯೂ ವಿದ್ಯಾರ್ಥಿಗಳೇ ಕಾರ್ಯನಿರ್ವಹಿಸಿದರು.

ಮತ ಎಣಿಕೆಯ ಬಳಿಕ ಪ್ರಕಟವಾದ ಫಲಿತಾಂಶದಲ್ಲಿ 8ನೇ ತರಗತಿಯ ಕುಶಲ್ ಜಿ.ಎನ್. ಶಾಲಾ ಸಂಸತ್ತಿನ ಪ್ರಧಾನಮಂತ್ರಿಯಾಗಿ ಆಯ್ಕೆಯಾದರು.

10ನೇ ತರಗತಿಯ ದೀಕ್ಷಾ ಆರೋಗ್ಯ ಸಚಿವರಾಗಿ, 9ನೇ ತರಗತಿಯ ಸ್ವಾತಿ ಪಿ. ಸ್ವಚ್ಛತೆ ಮತ್ತು ನೈರ್ಮಲ್ಯ ಸಚಿವರಾಗಿ ಹಾಗೂ ಸಾಂಸ್ಕೃತಿಕ ಸಚಿವರಾಗಿ, 9ನೇ ತರಗತಿಯ ಚೇತನ್ ಕುಮಾರ್ ಪರಿಸರ ಸಂರಕ್ಷಣಾ ಸಚಿವರಾಗಿ, 9ನೇ ತರಗತಿಯ ರಮೇಶ್ ಕ್ರೀಡಾ ಸಚಿವರಾಗಿ, 8ನೇ ತರಗತಿಯ ಅಖಿಲಾ ನೀರು ಮತ್ತು ಆಹಾರ ಪೂರೈಕೆ ಸಚಿವರಾಗಿ ಹಾಗೂ 10ನೇ ತರಗತಿಯ ಚೇತನ್ ನಾಯ್ಕ ಹಣಕಾಸು ಸಚಿವರಾಗಿ ಆಯ್ಕೆಯಾದರು.

ಶಾಲೆಯ ಮುಖ್ಯ ಶಿಕ್ಷಕ ಸಿ. ಮಂಜಾ ನಾಯ್ಕ ಮಾತನಾಡಿ, ಮಕ್ಕಳಲ್ಲಿ ಪ್ರಜಾಪ್ರಭುತ್ವದ ಹಕ್ಕು ಮತ್ತು ಕರ್ತವ್ಯಗಳ ಬಗ್ಗೆ ಅರಿವು ಮೂಡಿಸುವುದು, ರಹಸ್ಯ ಮತದಾನದ ಮಹತ್ವ ತಿಳಿಸುವುದು, ಉತ್ತಮ ಪ್ರತಿನಿಧಿಗಳನ್ನು ಆಯ್ಕೆ ಮಾಡುವ ಮನೋಭಾವ ಬೆಳೆಸುವುದು ಹಾಗೂ ಸೋಲು–ಗೆಲುವನ್ನು ಸಮಾನವಾಗಿ ಸ್ವೀಕರಿಸುವ ಗುಣವನ್ನು ರೂಢಿಸುವ ಉದ್ದೇಶದಿಂದ ಇಂತಹ ಮಾದರಿ ಶಾಲಾ ಸಂಸತ್ ಚುನಾವಣೆಯನ್ನು ಆಯೋಜಿಸಲಾಗಿದೆ ಎಂದು ತಿಳಿಸಿದರು.


ಕಾರ್ಯಕ್ರಮದಲ್ಲಿ ಮುಖ್ಯ ಶಿಕ್ಷಕಿ ಜಯಮ್ಮ, ಶಿಕ್ಷಕರಾದ ಚಂದ್ರಶೇಖರ್, ರಾಜಾರೆಡ್ಡಿ, ಅತಿಥಿ ಶಿಕ್ಷಕರಾದ ಸೋಮಶೇಖರ, ನವ್ಯ, ರಾಧ, ದ್ವಿತೀಯ ದರ್ಜೆ ಸಹಾಯಕ ಶ್ಯಾಮ್ ಸುಂದರ್ ಹಾಗೂ ಅಡುಗೆ ಸಿಬ್ಬಂದಿ ಸಂಜೀವಮ್ಮ ಮತ್ತು ಪುಷ್ಪಮ್ಮ ಸೇರಿದಂತೆ ಶಾಲೆಯ ಸಿಬ್ಬಂದಿ

12/07/2026
3S ಭಾರತ ಸಾರಥಿ
ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# ಹೆಚ್‌ಎಂಟಿ ಭೂಮಿಗೆ ಅರಣ್ಯ ಇಲಾಖೆಗೆ ಹಕ್ಕಿಲ್ಲ: ಕೇಂದ್ರ ಸಚಿವ ಎಚ್‌ಡಿಕೆ

ಬೆಂಗಳೂರು

ಹೆಚ್‌ಎಂಟಿ ಭೂಮಿ ವಿವಾದಕ್ಕೆ ಸಂಬಂಧಿಸಿದಂತೆ ಅರಣ್ಯ ಸಚಿವ ಈಶ್ವರ ಖಂಡ್ರೆ ವಿರುದ್ಧ ಕೇಂದ್ರದ ಬೃಹತ್ ಕೈಗಾರಿಕೆ ಮತ್ತು ಉಕ್ಕು ಖಾತೆ ಸಚಿವ ಹೆಚ್.ಡಿ. ಕುಮಾರಸ್ವಾಮಿ ತೀವ್ರ ವಾಗ್ದಾಳಿ ನಡೆಸಿದ್ದಾರೆ. ಹೆಚ್‌ಎಂಟಿ ಭೂಮಿಗೂ ಅರಣ್ಯ ಇಲಾಖೆಗೂ ಯಾವುದೇ ಸಂಬಂಧವಿಲ್ಲ. ಆ ಜಮೀನಿನ ಮೇಲೆ ಅರಣ್ಯ ಇಲಾಖೆಗೆ ಯಾವುದೇ ಹಕ್ಕು ಇರುವುದಿಲ್ಲ. ಈ ಬಗ್ಗೆ ಅನುಮಾನವಿದ್ದರೆ ದಾಖಲೆಗಳನ್ನು ಪರಿಶೀಲಿಸಲಿ ಎಂದು ಸವಾಲು ಹಾಕಿದರು.



ಬೆಂಗಳೂರಿನಲ್ಲಿ ಗುರುವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಹೆಚ್‌ಎಂಟಿ ಭೂಮಿಯನ್ನು ವಶಕ್ಕೆ ಪಡೆಯುವ ಸಂಬಂಧ ಅರಣ್ಯಾಧಿಕಾರಿಯೊಬ್ಬರು ನೀಡಿರುವ ನೋಟಿಸ್ ಕುರಿತು ಈಶ್ವರ ಖಂಡ್ರೆ ನೀಡಿರುವ ಹೇಳಿಕೆಗೆ ತೀವ್ರ ಆಕ್ಷೇಪ ವ್ಯಕ್ತಪಡಿಸಿದರು. ಹೆಚ್‌ಎಂಟಿ ಭೂಮಿಯ ಬಗ್ಗೆ ಖಂಡ್ರೆ ಅತಿಯಾದ ಆಸಕ್ತಿ ತೋರಿಸುತ್ತಿದ್ದಾರೆ. ಅದರ ಹಿಂದಿನ ಕಾರಣವೇನು ಎಂಬುದು ಅರ್ಥವಾಗುತ್ತಿಲ್ಲ ಎಂದು ಹೇಳಿದರು.

ಹೆಚ್‌ಎಂಟಿ ಜಮೀನಿನ ಪಕ್ಕದಲ್ಲಿರುವ ಜಕ್ಕೂರು ಪ್ಲಾಂಟೇಶನ್ ಪ್ರದೇಶದಲ್ಲಿ ಸಾಕಷ್ಟು ಅರಣ್ಯ ಭೂಮಿ ಒತ್ತುವರಿಯಾಗಿದೆ. ಅಲ್ಲಿ ಮನೆಗಳು ಮತ್ತು ವಾಣಿಜ್ಯ ಕಟ್ಟಡಗಳು ನಿರ್ಮಾಣವಾಗಿವೆ. 444 ಎಕರೆ ಪ್ರದೇಶದಲ್ಲಿ ಜೈವಿಕ ಉದ್ಯಾನ ನಿರ್ಮಿಸುವುದಾಗಿ ಹೇಳಿದ್ದೀರಿ. ಆದರೆ ಅಲ್ಲೇ ಕಲ್ಯಾಣ ಮಂಟಪಗಳು ನಿರ್ಮಾಣವಾಗಿರುವುದು ಹೇಗೆ? ಅವುಗಳಿಗೆ ಯಾವ ಆಧಾರದ ಮೇಲೆ ಅನುಮತಿ ನೀಡಲಾಗಿದೆ ಎಂದು ಪ್ರಶ್ನಿಸಿದರು.

ಹೆಚ್‌ಎಂಟಿ ಭೂಮಿಗೆ ಸಂಬಂಧಿಸಿದ ವ್ಯಾಜ್ಯ ಸುಪ್ರೀಂ ಕೋರ್ಟ್‌ನಲ್ಲಿ ವಿಚಾರಣೆಯಲ್ಲಿದೆ. ಇದೇ ವೇಳೆ ಹೆಚ್‌ಎಂಟಿ ಪುನಶ್ಚೇತನಕ್ಕೆ ಕೇಂದ್ರ ಸರ್ಕಾರ ಪ್ಯಾಕೇಜ್ ಘೋಷಿಸುವ ಪ್ರಕ್ರಿಯೆಯೂ ಅಂತಿಮ ಹಂತದಲ್ಲಿದೆ. ಇಂತಹ ಸಂದರ್ಭದಲ್ಲಿ ಅರಣ್ಯ ಇಲಾಖೆ ಭೂಮಿ ತೆರವುಗೊಳಿಸುವಂತೆ ಆದೇಶ ನೀಡಿರುವುದು ಕಾನೂನುಬಾಹಿರ. ನಿವೃತ್ತಿಗೆ ಕೇವಲ 15 ದಿನ ಬಾಕಿ ಇದ್ದ ಅಧಿಕಾರಿಯಿಂದ ಇಂತಹ ಆದೇಶ ಹೊರಡಿಸಿರುವುದು ಹಲವು ಅನುಮಾನಗಳಿಗೆ ಕಾರಣವಾಗಿದೆ ಎಂದು ಆರೋಪಿಸಿದರು.

ಹೆಚ್‌ಎಂಟಿ ಭೂಮಿಗೆ ಸಂಬಂಧಿಸಿದ ಎಲ್ಲ ದಾಖಲೆಗಳು ನಮ್ಮ ಬಳಿ ಇವೆ. ನ್ಯಾಯಾಲಯವೂ ತಡೆಯಾಜ್ಞೆ ನೀಡಿದೆ. ಯಾವುದೇ ಕಾರಣಕ್ಕೂ ಈ ಭೂಮಿಯನ್ನು ಮುಟ್ಟಲು ಸಾಧ್ಯವಿಲ್ಲ. ಈಶ್ವರ ಖಂಡ್ರೆ ಅವರು ಅರಣ್ಯ ಸಚಿವರಾಗಿದ್ದ ಅವಧಿಯಲ್ಲಿ ಎಷ್ಟು ಅರಣ್ಯ ಭೂಮಿಯನ್ನು ಉಳಿಸಿದ್ದಾರೆ? ರಾಜ್ಯದಲ್ಲಿ ದೊಡ್ಡ ಪ್ರಮಾಣದಲ್ಲಿ ಅರಣ್ಯ ಭೂಮಿ ಒತ್ತುವರಿಯಾಗಿರುವುದನ್ನು ತೆರವುಗೊಳಿಸಲು ಏನು ಕ್ರಮ ಕೈಗೊಂಡಿದ್ದಾರೆ ಎಂದು ಪ್ರಶ್ನಿಸಿದರು.

ಒಕ್ಕೂಟ ವ್ಯವಸ್ಥೆಯ ಬಗ್ಗೆ ಅರಿವಿಲ್ಲದವರು ಕೇವಲ ಹೆಚ್‌ಎಂಟಿ ಮತ್ತು ಕುದುರೆಮುಖ ವಿಚಾರವನ್ನೇ ಮುಂದಿಟ್ಟುಕೊಂಡು ಮಾತನಾಡುತ್ತಿದ್ದಾರೆ. ಮೊದಲು ರಾಜ್ಯ ಸರ್ಕಾರ ತನ್ನ ವ್ಯಾಪ್ತಿಯಲ್ಲಿರುವ ಅರಣ್ಯ ಭೂಮಿ ಒತ್ತುವರಿಯನ್ನು ತೆರವುಗೊಳಿಸಲಿ ಎಂದು ಸವಾಲು ಹಾಕಿದರು.

ಪಂಚಾಯತ್ ರಾಜ್ ಸಚಿವರು ಪದೇಪದೇ ನನಗೆ ಸಲಹೆ ನೀಡುತ್ತಿದ್ದಾರೆ. ಆದರೆ ಹೆಚ್‌ಎಂಟಿ ಉಳಿಸುವ ವಿಚಾರದಲ್ಲಿ ಯಾವುದೇ ಸಹಕಾರ ನೀಡಿಲ್ಲ. ದೆಹಲಿಯಲ್ಲಿ ನಾನು ನಡೆಸಿರುವ ಸಭೆಗಳು, ಹೆಚ್‌ಎಂಟಿ ಹಾಗೂ ಭದ್ರಾವತಿ ಉಕ್ಕಿನ ಕಾರ್ಖಾನೆ ಪುನಶ್ಚೇತನಕ್ಕಾಗಿ ಮಾಡಿರುವ ಪ್ರಯತ್ನಗಳ ಬಗ್ಗೆ ಮಾಹಿತಿ ಪಡೆದುಕೊಂಡರೆ ಸತ್ಯ ಗೊತ್ತಾಗುತ್ತದೆ ಎಂದು ಹೇಳಿದರು.

ಹೆಚ್‌ಎಂಟಿ ಕನ್ನಡಿಗರ ಆಸ್ತಿ ಎನ್ನುವುದರಲ್ಲಿ ಎರಡು ಮಾತಿಲ್ಲ.

ಅದು ನನ್ನ ಆಸ್ತಿಯೂ ಅಲ್ಲ, ಖಂಡ್ರೆ ಅವರ ಆಸ್ತಿಯೂ ಅಲ್ಲ. ಆದರೆ ಕನ್ನಡಿಗರ ಆಸ್ತಿಯ ಸುಮಾರು 175 ಎಕರೆ ಭೂಮಿ ಒತ್ತುವರಿಯಾಗಿದೆ. ಅದನ್ನು ವಾಪಸ್ ಪಡೆಯಲು ನೀವು ಅರಣ್ಯ ಸಚಿವರಾಗಿದ್ದಾಗ ಏನು ಮಾಡಿದ್ದೀರಿ ಎಂದು ಈಶ್ವರ ಖಂಡ್ರೆ ಅವರನ್ನು ಹೆಚ್.ಡಿ. ಕುಮಾರಸ್ವಾಮಿ ತೀಕ್ಷ್ಣವಾಗಿ ಪ್ರಶ್ನಿಸಿದರು. ರಾಜ್ಯ ರಾಜಕಾರಣಕ್ಕೆ ಮರಳುವ ಕುರಿತು ಕೇಳಿದ ಪ್ರಶ್ನೆಗೆ ಪ್ರತಿಕ್ರಿಯಿಸಿದ ಅವರು, ಸದ್ಯ ತಮ್ಮ ಗಮನ ಕೇಂದ್ರ ಸಚಿವರ ಜವಾಬ್ದಾರಿಗಳ ಮೇಲಿದ್ದು, ಪಕ್ಷದೊಳಗೆ ಹಿರಿಯೂರು ಕ್ಷೇತ್ರದಲ್ಲಿ ಅಭ್ಯರ್ಥಿಯನ್ನು ಕಣಕ್ಕಿಳಿಸುವ ಕುರಿತು ಒತ್ತಡವಿದೆ. ಈ ಬಗ್ಗೆ ಸೂಕ್ತ ಸಮಯದಲ್ಲಿ ಪಕ್ಷದ ಮಟ್ಟದಲ್ಲಿ ನಿರ್ಧಾರ ಕೈಗೊಳ್ಳಲಾಗುವುದು ಎಂದು ಮಾರ್ಮಿಕವಾಗಿ ಉತ್ತರಿಸಿದರು.



ಆಹಾರ ಇಲಾಖೆಯ ವತಿಯಿಂದ ನಿರ್ಮಾಣವಾಗುತ್ತಿರುವ ನೂತನ ಆಹಾರ ಸೌಧದ ಕಾಮಗಾರಿಯ ಪ್ರಗತಿಯನ್ನು ಆಹಾರ ಸಚಿವರಾದ ಕೆಹೆಚ್.ಮುನಿಯಪ್ಪ ಅಧಿಕಾರಿಗಳೊಂದಿಗೆ ಪರಿಶೀಲಿಸಿ ಮಾಹಿತಿಯನ್ನು ಪಡೆದರು. ಈ ಸಂದರ್ಭದಲ್ಲಿ ಸರ್ಕಾರದ ಕಾರ್ಯದರ್ಶಿ ಕನಗವಲ್ಲಿ, ಆಯುಕ್ತರಾದ ರವಿಕುಮಾರ್, ಸಚಿವರ ಆಪ್ತ ಕಾರ್ಯದರ್ಶಿ ಡಾ.ಹೆಚ್.ನಟರಾಜ್ ಹಾಗೂ ಕಾನೂನು ಮಾಪನ ಶಾಸ್ತ್ರ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

## ಬೀದಿ ವ್ಯಾಪಾರಿಗಳಿಗೆ ಪರ್ಯಾಯ ವ್ಯವಸ್ಥೆಗೆ ಸರ್ಕಾರದ ಭರವಸೆ

ಬೆಂಗಳೂರು

ಬೆಂಗಳೂರಿನಲ್ಲಿ ಪಾದಚಾರಿ ಮಾರ್ಗಗಳನ್ನು ಸಾರ್ವಜನಿಕರ ಸುಗಮ ಸಂಚಾರಕ್ಕೆ ಮುಕ್ತಗೊಳಿಸುವ ಕಾರ್ಯಾಚರಣೆ ಯಾವುದೇ ಕಾರಣಕ್ಕೂ ನಿಲ್ಲುವುದಿಲ್ಲ ಎಂದು ಗ್ರೇಟರ್ ಬೆಂಗಳೂರು ಅಭಿವೃದ್ಧಿ ಸಚಿವ ಕೃಷ್ಣ ಬೈರೇಗೌಡ ಸ್ಪಷ್ಟಪಡಿಸಿದ್ದಾರೆ. ಆದರೆ, ಬೀದಿ ವ್ಯಾಪಾರಿಗಳ ಜೀವನೋಪಾಯಕ್ಕೂ ಯಾವುದೇ ಧಕ್ಕೆಯಾಗದಂತೆ ಪರ್ಯಾಯ ವ್ಯವಸ್ಥೆ ಕಲ್ಪಿಸಲು ಸರ್ಕಾರ ಬದ್ಧವಾಗಿದೆ ಎಂದು ಅವರು ಭರವಸೆ ನೀಡಿದ್ದಾರೆ.

ಬೀದಿ ವ್ಯಾಪಾರಿಗಳ ಜಂಟಿ ಹೋರಾಟ ಸಮಿತಿ ಪದಾಧಿಕಾರಿಗಳೊಂದಿಗೆ ನಡೆದ ಸಭೆಯಲ್ಲಿ ಮಾತನಾಡಿದ ಸಚಿವರು, ಸುಪ್ರೀಂ ಕೋರ್ಟ್ ಆದೇಶದಂತೆ ಪಾದಚಾರಿ ಮಾರ್ಗಗಳಲ್ಲಿನ ಎಲ್ಲ ರೀತಿಯ ಒತ್ತುವರಿಗಳನ್ನು ತೆರವುಗೊಳಿಸಲಾಗುತ್ತಿದೆ ಎಂದು ತಿಳಿಸಿದರು. ನಗರದಲ್ಲಿ ನಾಗರಿಕರು ಸುರಕ್ಷಿತವಾಗಿ ಮತ್ತು ಸುಗಮವಾಗಿ ಓಡಾಡಲು ಪಾದಚಾರಿ ಮಾರ್ಗಗಳು ಸಂಪೂರ್ಣ ಮುಕ್ತವಾಗಿರಬೇಕು. ಈ ವಿಷಯದಲ್ಲಿ ಯಾವುದೇ ರಾಜಿ ಇಲ್ಲ ಎಂದು ಹೇಳಿದರು.

ಸರ್ಕಾರ ಸದಾ ಬಡವರ ಪರವಾಗಿದೆ. ಬೀದಿ ವ್ಯಾಪಾರಿಗಳ ಜೀವನೋಪಾಯ ಮುಂದುವರಿಯಬೇಕು ಎನ್ನುವುದು ಸರ್ಕಾರದ ಆಶಯವಾಗಿದೆ. ಆದರೆ ಪ್ರಮುಖ ರಸ್ತೆಗಳ ಪಾದಚಾರಿ ಮಾರ್ಗಗಳಲ್ಲಿ ವ್ಯಾಪಾರಕ್ಕೆ ಅವಕಾಶ ನೀಡಲು ಸಾಧ್ಯವಿಲ್ಲ. ನಗರದ ಸುಮಾರು 1,500 ಕಿಲೋಮೀಟರ್ ಪ್ರಮುಖ ರಸ್ತೆಗಳನ್ನು ಹೊರತುಪಡಿಸಿ ಉಳಿದ ವಾರ್ಡ್ ರಸ್ತೆಗಳಲ್ಲಿ ವ್ಯಾಪಾರ ನಡೆಸಲು ಅವಕಾಶ ಕಲ್ಪಿಸುವ ನಿಟ್ಟಿನಲ್ಲಿ ಪಾಲಿಕೆ ಸಂಪೂರ್ಣ ಸಹಕಾರ ನೀಡಲಿದೆ ಎಂದು ತಿಳಿಸಿದರು.

ನಗರದಲ್ಲಿ ಇದುವರೆಗೆ 430 ಕಿಲೋಮೀಟರ್ ವ್ಯಾಪ್ತಿಯ ಪಾದಚಾರಿ ಮಾರ್ಗಗಳಿಂದ ಒತ್ತುವರಿ ತೆರವುಗೊಳಿಸಲಾಗಿದೆ. ಈ ಕಾರ್ಯಾಚರಣೆ ಮುಂದಿನ ದಿನಗಳಲ್ಲೂ ನಿರಂತರವಾಗಿ ಮುಂದುವರಿಯಲಿದೆ ಎಂದು ಹೇಳಿದರು.

ಪಾದಚಾರಿ ಮಾರ್ಗಗಳಿಂದ ಬೀದಿ ವ್ಯಾಪಾರಿಗಳನ್ನು ಮಾತ್ರವಲ್ಲದೆ, ಅಂಗಡಿಗಳ ವಿಸ್ತರಣೆ, ಪೆಟ್ಟಿ ಅಂಗಡಿಗಳು, ತಳ್ಳುವ ಗಾಡಿಗಳು, ತಾತ್ಕಾಲಿಕ ಶೆಡ್‌ಗಳು, ಮೇಲ್ಛಾವಣಿಗಳು, ಮೆಟ್ಟಿಲುಗಳು, ರ್ಯಾಂಪ್‌ಗಳು, ತಡೆಗೋಡೆಗಳು, ಜಾಹೀರಾತು ಫಲಕಗಳು ಹಾಗೂ ಸಾರ್ವಜನಿಕ ಸಂಚಾರಕ್ಕೆ ಅಡ್ಡಿಯಾಗಿರುವ ಇತರ ಎಲ್ಲ ಅಕ್ರಮ ನಿರ್ಮಾಣಗಳನ್ನೂ ತೆರವುಗೊಳಿಸಲಾಗುತ್ತಿದೆ ಎಂದು ಸಚಿವರು ತಿಳಿಸಿದರು.

ಮುಂದಿನ ಹಂತದಲ್ಲಿ ಪಾದಚಾರಿ ಮಾರ್ಗಗಳ ಮೇಲಿನ ಅಕ್ರಮ ಪಾರ್ಕಿಂಗ್, ಉದ್ಯಾನಗಳ ಸುತ್ತಲಿನ ಅಡೆತಡೆಗಳು ಸೇರಿದಂತೆ ಸಾರ್ವಜನಿಕ ಸ್ಥಳಗಳ ಮೇಲಿನ ಎಲ್ಲ ರೀತಿಯ ಒತ್ತುವರಿಗಳನ್ನು ಹಂತ ಹಂತವಾಗಿ ತೆರವುಗೊಳಿಸಲಾಗುವುದು ಎಂದು ಹೇಳಿದರು. ಸುಪ್ರೀಂ ಕೋರ್ಟ್ ನಿರ್ದೇಶನದಂತೆ ಬೀದಿ ವ್ಯಾಪಾರಿಗಳಿಗೆ ಹೊಸ ಗುರುತಿನ ಚೀಟಿಗಳನ್ನು ತ್ವರಿತವಾಗಿ ವಿತರಿಸಲು ಅಧಿಕಾರಿಗಳಿಗೆ ಸೂಚನೆ ನೀಡುವುದಾಗಿ ತಿಳಿಸಿದ ಸಚಿವರು, ಬೀದಿ ವ್ಯಾಪಾರಿಗಳ ಹಕ್ಕುಗಳಿಗೆ ಸಂಬಂಧಿಸಿದ ಕಾನೂನುಗಳನ್ನು ಹಾಗೂ ನ್ಯಾಯಾಲಯದ ಆದೇಶಗಳನ್ನು ಸಮರ್ಪಕವಾಗಿ ಜಾರಿಗೊಳಿಸಲಾಗುವುದು ಎಂದು ಹೇಳಿದರು.

ಸಭೆಯಲ್ಲಿ ಮಾಜಿ ರಾಜ್ಯಸಭಾ ಸದಸ್ಯ ರಾಜೀವ್ ಗೌಡ, ಮುಖ್ಯ ಆಯುಕ್ತ ಮಹೇಶ್ವರ್ ರಾವ್, ಕಾನೂನು ವಿಭಾಗದ ಮುಖ್ಯಸ್ಥ ಚಂದ್ರಶೇಖರ್ ಪಾಟೀಲ್, ಸಹಾಯಕ ಆಯುಕ್ತ ಮುರಳಿ ಹಾಗೂ ಬೀದಿ ವ್ಯಾಪಾರಿಗಳ ವಿವಿಧ ಸಂಘಟನೆಗಳ ಪದಾಧಿಕಾರಿಗಳು ಉಪಸ್ಥಿತರಿದ್ದರು.

## ಬಫರ್ ರಸ್ತೆ–ರಾಜಕಾಲುವೆ ಅಭಿವೃದ್ಧಿಗೆ ಸಮಗ್ರ ಯೋಜನೆ ರೂಪಿಸಲು ಸೂಚನೆ

ಬೆಂಗಳೂರು

ಬೆಂಗಳೂರು ಪೂರ್ವ ನಗರ ಪಾಲಿಕೆ ಆಯುಕ್ತ ಡಿ.ಎಸ್. ರಮೇಶ್ ಅವರು ಬೆಳ್ಳಂದೂರು ವೇಸ್ಟ್ ವಿಯರ್ (ಔಟ್‌ಲೆಟ್)ನಿಂದ ಓಲ್ಡ್ ಏರ್‌ಪೋರ್ಟ್ ರಸ್ತೆ ಸಮೀಪದ ವರ್ಜೀನಿಯಾ ಮಾಲ್‌ವರೆಗೆ ಪ್ರಸ್ತಾಪಿತ ರಾಜಕಾಲುವೆಯ ಬಫರ್ ವಲಯ ಸಂರಕ್ಷಣೆ, ಸರ್ವಿಸ್ ರಸ್ತೆ ನಿರ್ಮಾಣ ಹಾಗೂ ಪ್ರವಾಹ ನಿಯಂತ್ರಣ ಯೋಜನೆಗೆ ಸಂಬಂಧಿಸಿದಂತೆ ಸ್ಥಳ ಪರಿಶೀಲನೆ ನಡೆಸಿ ಅಧಿಕಾರಿಗಳಿಗೆ ಅಗತ್ಯ ನಿರ್ದೇಶನ ನೀಡಿದರು.

ಪರಿಶೀಲನೆ ವೇಳೆ ಹೊರ ವರ್ತುಲ ರಸ್ತೆ, ಬೆಳ್ಳಂದೂರು ರೈಲು ನಿಲ್ದಾಣ, ಮುನ್ನೇಕೊಳಲು 100 ಅಡಿ ರಸ್ತೆಯ ಎಸ್‌ಟಿಪಿ, ವರ್ತೂರು ಕೆರೆ ಬಫರ್ ವಲಯ ಹಾಗೂ ವರ್ತೂರು ಕೋಡಿ ಜಂಕ್ಷನ್ ಸೇರಿದಂತೆ ಪ್ರಮುಖ ಪ್ರದೇಶಗಳಿಗೆ ಭೇಟಿ ನೀಡಿದ ಆಯುಕ್ತರು, ರಾಜಕಾಲುವೆಯ ಮೂಲ ಗಡಿ, ಬಫರ್ ವಲಯ, ಭೂಸ್ವಾಧೀನಕ್ಕೆ ಒಳಪಡುವ ಪ್ರದೇಶಗಳು, ಸರ್ವಿಸ್ ರಸ್ತೆ ನಿರ್ಮಾಣದ ಸಾಧ್ಯತೆ ಹಾಗೂ ಪ್ರವಾಹ ನಿಯಂತ್ರಣಕ್ಕೆ ಸಂಬಂಧಿಸಿದ ತಾಂತ್ರಿಕ ಅಂಶಗಳನ್ನು ಪರಿಶೀಲಿಸಿದರು. ಈ ಕುರಿತು ಸಮಗ್ರ ವರದಿ ಸಿದ್ಧಪಡಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಯೋಜನೆ ವ್ಯಾಪ್ತಿಯಲ್ಲಿರುವ ರಾಜಕಾಲುವೆ ಹಾಗೂ ಕೆರೆಗಳ ಮೂಲ ಗಡಿಗಳನ್ನು ಕಂದಾಯ ದಾಖಲೆಗಳಿಗೆ ಅನುಗುಣವಾಗಿ ಗುರುತಿಸಲು ಸಂಬಂಧಿತ ಇಲಾಖೆಗಳು ಮತ್ತು ಏಜೆನ್ಸಿಗಳ ಸಹಯೋಗದಲ್ಲಿ ಜಂಟಿ ಸರ್ವೆ ನಡೆಸುವಂತೆ ಅವರು ನಿರ್ದೇಶಿಸಿದರು. ಭೂಸ್ವಾಧೀನಕ್ಕೆ ಒಳಪಡುವ ಪ್ರದೇಶಗಳನ್ನು ನಿಖರವಾಗಿ ಗುರುತಿಸಿ ಗಡಿ ಕಲ್ಲುಗಳನ್ನು ಅಳವಡಿಸುವ ಜೊತೆಗೆ ಸರ್ವೆ ಕಾರ್ಯವನ್ನು ತ್ವರಿತವಾಗಿ ಪೂರ್ಣಗೊಳಿಸಿ ಭೂಸ್ವಾಧೀನ ಪ್ರಕ್ರಿಯೆಯನ್ನು ವಿಳಂಬವಿಲ್ಲದೆ ಮುಂದುವರಿಸುವಂತೆ ಸೂಚಿಸಿದರು.

ಬಫರ್ ರಸ್ತೆಯನ್ನು ಹೊರ ವರ್ತುಲ ರಸ್ತೆಯೊಂದಿಗೆ ಸಂಪರ್ಕಿಸುವುದು, ಅಗತ್ಯವಿರುವ ಸ್ಥಳಗಳಲ್ಲಿ ರೈಲ್ವೆ ಮೇಲ್ಸೇತುವೆ ಹಾಗೂ ಎಲಿವೇಟೆಡ್ ಸೇತುವೆ ನಿರ್ಮಿಸುವುದು, ರಾಜಕಾಲುವೆಗಳ ಮೂಲ ಅಗಲವನ್ನು ಸಂರಕ್ಷಿಸುವುದು, ರಿಟೈನಿಂಗ್ ವಾಲ್ ನಿರ್ಮಾಣ ಹಾಗೂ ನಗರ ಪ್ರವಾಹ ನಿಯಂತ್ರಣಕ್ಕೆ ಅಗತ್ಯವಿರುವ ಎಲ್ಲ ತಾಂತ್ರಿಕ ಅಂಶಗಳನ್ನು ಒಳಗೊಂಡ ಸಮಗ್ರ ಯೋಜನೆ ರೂಪಿಸಿ ಅನುಷ್ಠಾನಗೊಳಿಸುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಬೆಂಗಳೂರು ಜಲಮಂಡಳಿ, ಗೇಲ್ ಇಂಡಿಯಾ, ಕಂದಾಯ ಇಲಾಖೆ, ಭೂಮಾಪನ ಇಲಾಖೆ ಸೇರಿದಂತೆ ವಿವಿಧ ಇಲಾಖೆಗಳೊಂದಿಗೆ ಸಮನ್ವಯ ಸಾಧಿಸಿ ಜಂಟಿ ಸ್ಥಳ ಪರಿಶೀಲನೆ ನಡೆಸುವ ಮೂಲಕ ಯಾವುದೇ ತಾಂತ್ರಿಕ ಅಥವಾ ಆಡಳಿತಾತ್ಮಕ ಅಡೆತಡೆಗಳಿಲ್ಲದೆ ಯೋಜನೆಯನ್ನು ನಿಗದಿತ ಅವಧಿಯಲ್ಲಿ ಪೂರ್ಣಗೊಳಿಸುವಂತೆ ಹಾಗೂ ಭೂಸ್ವಾಧೀನ ಪ್ರಕ್ರಿಯೆಯನ್ನು ಸಮನ್ವಯದೊಂದಿಗೆ ವೇಗಗೊಳಿಸುವಂತೆ ನಿರ್ದೇಶನ ನೀಡಿದರು.

## ತುಮಕೂರು ಡಿಸಿ ದಿಟ್ಟ ಹೆಜ್ಜೆ

ತುಮಕೂರು

ತುಮಕೂರು ನಗರದ ಸಮೀಪದಲ್ಲಿರುವ ಅಂದಾಜು 500 ಕೋಟಿ ರೂಪಾಯಿ ಮೌಲ್ಯದ 106 ಎಕರೆ 23 ಗುಂಟೆ ಅಮೂಲ್ಯ ಸರ್ಕಾರಿ ಭೂಮಿಯನ್ನು ಖಾಸಗಿ ವ್ಯಕ್ತಿಗಳ ಪಾಲಾಗುವುದನ್ನು ತಡೆದು ಸರ್ಕಾರದ ಸ್ವಾಧೀನದಲ್ಲಿ ಉಳಿಸುವ ಮಹತ್ವದ ಆದೇಶವನ್ನು ತುಮಕೂರು ಜಿಲ್ಲಾಧಿಕಾರಿ ಶುಭ ಕಲ್ಯಾಣ್ ಹೊರಡಿಸಿದ್ದಾರೆ. ಈ ಕ್ರಮವನ್ನು ಜಿಲ್ಲೆಯ ಆಡಳಿತಾತ್ಮಕ ಇತಿಹಾಸದಲ್ಲಿಯೇ ಮಹತ್ವದ ಮೈಲಿಗಲ್ಲು ಎಂದು ಪರಿಗಣಿಸಲಾಗಿದೆ.

ತುಮಕೂರು ತಾಲ್ಲೂಕಿನ ಗೂಳೂರು ಹೋಬಳಿಯ ಕೊಂಡಾಪುರ ಗ್ರಾಮದ ಸರ್ವೆ ಸಂಖ್ಯೆ 3 ಹಾಗೂ ಕಲ್ಲುಮಠ ಗ್ರಾಮದ ಸರ್ವೆ ಸಂಖ್ಯೆ 13, 17 ಮತ್ತು 20ರ ಜಮೀನುಗಳಿಗೆ ಸಂಬಂಧಿಸಿದಂತೆ 1974ರಲ್ಲಿ ಭೂಸುಧಾರಣಾ ಕಾಯ್ದೆಯಡಿ ಗೇಣಿ ಅರ್ಜಿಗಳು ಸಲ್ಲಿಕೆಯಾ ಗಿದ್ದವು. ಆದರೆ ಭೂ ದಾಖಲೆಗಳ ಪ್ರಕಾರ ಈ ಜಮೀನುಗಳು ದೇವದಾಯ ಇನಾಂ ಭೂಮಿಯಾಗಿರುವುದರಿಂದ ಭೂಸುಧಾರಣಾ ಕಾಯ್ದೆ ಅನ್ವಯಿಸುವುದಿಲ್ಲ ಎಂದು ಅಧಿಕಾರಿಗಳು ಆಗಲೇ ಅಭಿಪ್ರಾಯ ವ್ಯಕ್ತಪಡಿಸಿದ್ದರು.

## 3.6 ಕಿ.ಮೀ. ಪಾದಚಾರಿ ಮಾರ್ಗ ಒತ್ತುವರಿ ತೆರವು

ಬೆಂಗಳೂರು

ಸಾರ್ವಜನಿಕರ ಸುರಕ್ಷಿತ ಹಾಗೂ ಸುಗಮ ಸಂಚಾರಕ್ಕೆ ಅನುಕೂಲ ಕಲ್ಪಿಸುವ ಉದ್ದೇಶದಿಂದ ಬೆಂಗಳೂರು ಪಶ್ಚಿಮ ನಗರ ಪಾಲಿಕೆ ವ್ಯಾಪ್ತಿಯಲ್ಲಿ ಪಾದಚಾರಿ ಮಾರ್ಗಗಳ ಒತ್ತುವರಿ ತೆರವು ಕಾರ್ಯಾಚರಣೆ ಮುಂದುವರಿದಿದ್ದು, ಗುರುವಾರ ಒಂದೇ ದಿನ 3.6 ಕಿಲೋಮೀಟರ್ ವ್ಯಾಪ್ತಿಯ ಒತ್ತುವರಿಯನ್ನು ತೆರವುಗೊಳಿಸಲಾಗಿದೆ.

ಗ್ರೇಟರ್ ಬೆಂಗಳೂರು ಅಭಿವೃದ್ಧಿ ಸಚಿವ ಕೃಷ್ಣ ಬೈರೇಗೌಡ ಅವರ ನಿರ್ದೇಶನ ಹಾಗೂ ಪಶ್ಚಿಮ ನಗರ ಪಾಲಿಕೆ ಆಯುಕ್ತ ಡಾ. ರಾಜೇಂದ್ರ ಕೆ.ವಿ. ಅವರ ಮಾರ್ಗದರ್ಶನದಲ್ಲಿ ಸಂಚಾರ ಪೊಲೀಸರು, ಕಾನೂನು ಸುವ್ಯವಸ್ಥೆ ಪೊಲೀಸರು ಹಾಗೂ ವಿವಿಧ ಇಲಾಖೆಗಳ ಸಹಯೋಗದೊಂದಿಗೆ ಕಾರ್ಯಾಚರಣೆ ನಡೆಸಲಾಯಿತು.

ಕಾರ್ಯಾಚರಣೆಯಲ್ಲಿ 4 ಪೆಟ್ಟಿ ಅಂಗಡಿಗಳು, 29 ತಳ್ಳುಗಾಡಿಗಳು, 14 ಎಸಿ ಶೀಟ್ ಪ್ರೊಜೆಕ್ಷನ್ ಹಾಗೂ ಕ್ಯಾನೊಪಿಗಳು, 53 ಮೆಟ್ಟಿಲುಗಳು ಮತ್ತು ರ್ಯಾಂಪ್‌ಗಳು, 27 ಜಾಹೀರಾತು ಕಂಬಗಳು ಹಾಗೂ ನಾಮಫಲಕಗಳನ್ನು ತೆರವುಗೊಳಿಸಲಾಯಿತು. ಅಲ್ಲದೆ, ಸುಮಾರು 10.8 ಟನ್ ಕಟ್ಟಡ ತ್ಯಾಜ್ಯ ಮತ್ತು ಇತರೆ ತ್ಯಾಜ್ಯವನ್ನು ವಿಲೇವಾರಿ ಮಾಡಲಾಗಿದೆ.



ರಾಜಾಜಿನಗರ ವಿಭಾಗದ ಪ್ರಕಾಶನಗರದ ಅಯ್ಯಪ್ಪಸ್ವಾಮಿ ದೇವಸ್ಥಾನ ಮುಖ್ಯರಸ್ತೆಯಲ್ಲಿ ಡಾ. ರಾಜ್‌ಕುಮಾರ್ ರಸ್ತೆದಿಂದ 3ನೇ ಮುಖ್ಯರಸ್ತೆಯವರೆಗೆ 0.70 ಕಿಲೋಮೀಟರ್ ವ್ಯಾಪ್ತಿಯಲ್ಲಿ ಕಾರ್ಯಾಚರಣೆ ನಡೆಸಲಾಯಿತು.

ಬಸವನಗುಡಿ ವಿಭಾಗದಲ್ಲಿ ನಾಗಸಂದ್ರ ಮುಖ್ಯರಸ್ತೆಯ ಸುಬ್ಬಾರಾಮ್ ಚೆಟ್ಟಿ ರಸ್ತೆಯಿಂದ ಸೌತ್ ಎಂಡ್ ರಸ್ತೆಯವರೆಗೆ 0.8 ಕಿಲೋಮೀಟರ್ ಹಾಗೂ ಹೊಸಕೆರೆಹಳ್ಳಿ ಅಡ್ಡರಸ್ತೆಯ 80 ಅಡಿ ಮುಖ್ಯರಸ್ತೆಯಿಂದ ಶ್ರೀವಿದ್ಯಾನಗರ ಬಸ್ ನಿಲ್ದಾಣದವರೆಗೆ 1.2 ಕಿಲೋಮೀಟರ್ ವ್ಯಾಪ್ತಿಯಲ್ಲಿ ಒತ್ತುವರಿ ತೆರವು ಮಾಡಲಾಯಿತು.

ಯಡಿಯೂರು ವಿಭಾಗದಲ್ಲಿ ಕರಿಯಪ್ಪ ರಸ್ತೆಯ ಸೌತ್ ಎಂಡ್ ರಸ್ತೆಯಿಂದ ದಿವಾನ್ ಮಾಧವನ್ ರಸ್ತೆಯವರೆಗೆ 0.3 ಕಿಲೋಮೀಟರ್ ಹಾಗೂ ಸುಬ್ರಹ್ಮಣ್ಯಪುರ ರಸ್ತೆಯ 9ನೇ ಮುಖ್ಯರಸ್ತೆಯಿಂದ ಹುಣಸೆಮರ ಸಿಗ್ನಲ್‌ವರೆಗೆ 0.3 ಕಿಲೋಮೀಟರ್ ವ್ಯಾಪ್ತಿಯಲ್ಲಿ ಕಾರ್ಯಾಚರಣೆ ನಡೆಸಲಾಯಿತು.

ಗೋವಿಂದರಾಜನಗರ ವಿಭಾಗದಲ್ಲಿ ರಾಜಾಜಿನಗರ ವೃತ್ತದಿಂದ ಪ್ರಸನ್ನ ಥಿಯೇಟರ್ ಜಂಕ್ಷನ್‌ವರೆಗೆ 0.3 ಕಿಲೋಮೀಟರ್ ವ್ಯಾಪ್ತಿಯ ಪಾದಚಾರಿ ಮಾರ್ಗವನ್ನು ಒತ್ತುವರಿಯಿಂದ ಮುಕ್ತಗೊಳಿಸಲಾಯಿತು.

ನಗರದಲ್ಲಿ ಪಾದಚಾರಿ ಮಾರ್ಗಗಳನ್ನು ಅತಿಕ್ರಮಣದಿಂದ ಮುಕ್ತಗೊಳಿಸುವ ಕಾರ್ಯಾಚರಣೆ ಮುಂದಿನ ದಿನಗಳಲ್ಲೂ ನಿರಂತರವಾಗಿ ಮುಂದುವರಿಯಲಿದೆ ಎಂದು ಪಾಲಿಕೆ ಅಧಿಕಾರಿಗಳು ತಿಳಿಸಿದ್ದಾರೆ.

## ನರಸಾಪುರ–ಎಸ್‌ಎಂವಿಟಿ ಬೆಂಗಳೂರು ರೈಲು ಸೇವೆ ಖಾಯಂ; ವಾರಕ್ಕೊಮ್ಮೆ ಎಕ್ಸ್‌ಪ್ರೆಸ್ ಸಂಚಾರ

ಬೆಂಗಳೂರು

ಪ್ರಯಾಣಿಕರಿಗೆ ಅನುಕೂಲವಾಗುವ ಮಹತ್ವದ ನಿರ್ಧಾರದಲ್ಲಿ, ದಕ್ಷಿಣ ಮಧ್ಯ ರೈಲ್ವೆಯು ನರಸಾಪುರ–ಸರ್ ಎಂ. ವಿಶ್ವೇಶ್ವರಯ್ಯ ಟರ್ಮಿನಲ್ (ಎಸ್‌ಎಂವಿಟಿ) ಬೆಂಗಳೂರು ನಡುವೆ ಸಂಚರಿಸುತ್ತಿದ್ದ ವಿಶೇಷ ಸಾಪ್ತಾಹಿಕ ರೈಲು ಸೇವೆಯನ್ನು ಖಾಯಂ ಎಕ್ಸ್‌ಪ್ರೆಸ್ ರೈಲಾಗಿ ಪರಿವರ್ತಿಸಿದೆ.

ಈವರೆಗೆ ವಿಶೇಷ ರೈಲುಗಳಾಗಿ ಕಾರ್ಯನಿರ್ವಹಿಸುತ್ತಿದ್ದ ರೈಲು ಸಂಖ್ಯೆ 07153/07154 ಇನ್ನು ಮುಂದೆ 17293/17294 ನರಸಾಪುರ–ಎಸ್‌ಎಂವಿಟಿ ಬೆಂಗಳೂರು–ನರಸಾಪುರ ಸಾಪ್ತಾಹಿಕ ಎಕ್ಸ್‌ಪ್ರೆಸ್ ರೈಲುಗಳಾಗಿ ನಿಯಮಿತ ಸೇವೆ ನೀಡಲಿವೆ.

ರೈಲು ಸಂಖ್ಯೆ 17293 ನರಸಾಪುರ–ಎಸ್‌ಎಂವಿಟಿ ಬೆಂಗಳೂರು ಎಕ್ಸ್‌ಪ್ರೆಸ್ ಜುಲೈ 10, 2026ರಿಂದ ಪ್ರತಿ ಶುಕ್ರವಾರ ನರಸಾಪುರದಿಂದ ಮಧ್ಯಾಹ್ನ 3.50ಕ್ಕೆ ಹೊರಟು, ಮರುದಿನ ಬೆಳಿಗ್ಗೆ 9.45ಕ್ಕೆ ಎಸ್‌ಎಂವಿಟಿ ಬೆಂಗಳೂರಿಗೆ ತಲುಪಲಿದೆ. ಈ ರೈಲು ಪಾಲಕೊಲ್ಲು, ವೀರವಾಸರಂ, ಭೀಮಾವರಂ ಜಂಕ್ಷನ್, ಭೀಮಾವರಂ ಟೌನ್, ಅಕಿವಿಡು, ಕೈಕಲೂರು, ಗುಡಿವಾಡ ಜಂಕ್ಷನ್, ವಿಜಯವಾಡ ಜಂಕ್ಷನ್, ತೆನಾಲಿ, ಬಾಪಟ್ಲಾ, ಚೀರಾಲ, ಒಂಗೋಲ್, ಕಾವಲಿ, ನೆಲ್ಲೂರು, ಗುಡೂರು, ರೇಣಿಗುಂಟ, ಕಾಟ್ಪಾಡಿ, ಜೋಲಾರ್‌ಪೇಟೆ, ಕುಪ್ಪಂ, ಬಂಗಾರಪೇಟೆ ಹಾಗೂ ಕೃಷ್ಣರಾಜಪುರಂ ಸೇರಿದಂತೆ ಪ್ರಮುಖ ನಿಲ್ದಾಣಗಳಲ್ಲಿ ನಿಲುಗಡೆ ಹೊಂದಲಿದೆ.

ಇನ್ನೊಂದೆಡೆ, 17294 ಎಸ್‌ಎಂವಿಟಿ ಬೆಂಗಳೂರು–ನರಸಾಪುರ ಎಕ್ಸ್‌ಪ್ರೆಸ್ ಜುಲೈ 11, 2026ರಿಂದ ಪ್ರತಿ ಶನಿವಾರ ಎಸ್‌ಎಂವಿಟಿ ಬೆಂಗಳೂರಿನಿಂದ ಬೆಳಿಗ್ಗೆ 11 ಗಂಟೆಗೆ ಹೊರಟು, ಮರುದಿನ ಬೆಳಿಗ್ಗೆ 5.50ಕ್ಕೆ ನರಸಾಪುರ ತಲುಪಲಿದೆ. ವಾಪಸಿ ಪ್ರಯಾಣದಲ್ಲೂ ಇದೇ ಪ್ರಮುಖ ನಿಲ್ದಾಣಗಳಲ್ಲಿ ರೈಲು ನಿಲುಗಡೆ ಮಾಡಲಿದೆ.

ವಿಶೇಷ ರೈಲು ಸೇವೆಯನ್ನು ಖಾಯಂಗೊಳಿಸಿರುವುದರಿಂದ ಬೆಂಗಳೂರು ಹಾಗೂ ಆಂಧ್ರಪ್ರದೇಶದ ಪಶ್ಚಿಮ ಗೋದಾವರಿ ಭಾಗದ ನಡುವಿನ ಪ್ರಯಾಣಿಕರಿಗೆ ಹೆಚ್ಚಿನ ಅನುಕೂಲವಾಗಲಿದ್ದು, ವಾರಾಂತ್ಯ ಪ್ರಯಾಣ, ಉದ್ಯೋಗ, ಶಿಕ್ಷಣ ಹಾಗೂ ವ್ಯಾಪಾರ ಉದ್ದೇಶದ ಸಂಚಾರಕ್ಕೂ ನೆರವಾಗಲಿದೆ ಎಂದು ರೈಲ್ವೆ ಇಲಾಖೆ ತಿಳಿಸಿದೆ.

# ‘ಜನರ ಸೇವೆಯೇ ಆಡಳಿತದ ಧರ್ಮ; ಕರ್ತವ್ಯ ಲೋಪ ಸಹಿಸುವುದಿಲ್ಲ’

ಬೆಳಗಾವಿ

ಸುವರ್ಣಸೌಧದಲ್ಲಿ ನಡೆದ ಬೆಳಗಾವಿ ವಿಭಾಗ ಮಟ್ಟದ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮುಖ್ಯಮಂತ್ರಿ ಡಿ ಕೆ ಶಿವಕುಮಾರ್ ಅವರು ಆಡಳಿತದ ಕಾರ್ಯಕ್ಷಮತೆ, ಜನಸೇವೆ, ಅಭಿವೃದ್ಧಿ ಮತ್ತು ಅಧಿಕಾರಿಗಳ ಹೊಣೆಗಾರಿಕೆ ಕುರಿತು ಸ್ಪಷ್ಟ ಹಾಗೂ ಕಟ್ಟುನಿಟ್ಟಿನ ಸಂದೇಶ ನೀಡಿದರು.

"ನಾವು ರಾಜಕಾರಣಿಗಳು ಐದು ವರ್ಷಕ್ಕೊಮ್ಮೆ ಜನರ ಮುಂದೆ ಹೋಗಿ ಜನಾದೇಶ ಕೇಳುತ್ತೇವೆ. ಆದರೆ ಅಧಿಕಾರಿಗಳು ಪ್ರತಿದಿನ ಜನರ ವಿಶ್ವಾಸಕ್ಕೆ ಉತ್ತರದಾಯಕರಾಗಿರಬೇಕು. ಕರ್ತವ್ಯ ನಿರ್ವಹಿಸದಿರುವುದು ಕೇವಲ ಆಡಳಿತ ವೈಫಲ್ಯವಲ್ಲ, ಅದು ಜನತೆಗೆ ಮಾಡುವ ದ್ರೋಹ" ಎಂದು ಅವರು ಹೇಳಿದರು.

ಆಡಳಿತದಲ್ಲಿ ಶಿಸ್ತಿಗೆ ಯಾವುದೇ ರಾಜಿ ಇಲ್ಲ ಎಂದು ಎಚ್ಚರಿಸಿದ ಮುಖ್ಯಮಂತ್ರಿ, "ಸಭೆಯ ಮಧ್ಯೆ ಯಾವುದೇ ಅಧಿಕಾರಿ ಮೊಬೈಲ್‌ನಲ್ಲಿ ಮಾತನಾಡುತ್ತಿರುವುದು ಕಂಡುಬಂದರೆ, ಸಭೆ ಮುಗಿಯುವ ವೇಳೆಗೆ ಅವರ ಅಮಾನತು ಆದೇಶ ಸಿದ್ಧವಾಗಿರುತ್ತದೆ. ಶಿಸ್ತು ಎನ್ನುವುದು ಆಡಳಿತದ ಮೊದಲ ನಿಯಮ" ಎಂದು ಹೇಳಿದರು.

ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಅಧಿಕಾರಿಗಳು ತಮ್ಮ ಕಾರ್ಯಕ್ಷೇತ್ರದಲ್ಲೇ ನೆಲೆಸಬೇಕು ಎಂದು ಸೂಚಿಸಿದ ಅವರು, "ಜನರ ಸಮಸ್ಯೆಗಳನ್ನು ಕೇಳಲು ಅಧಿಕಾರಿಗಳು ಜನರ ಬಳಿಯೇ ಇರಬೇಕು. ಸಣ್ಣ ಕೆಲಸಗಳಿಗೂ ಜನರನ್ನು ಒಂದು ಕಚೇರಿಯಿಂದ ಮತ್ತೊಂದು ಕಚೇರಿಗೆ ಅಲೆದಾಡಿಸುವ ಸಂಸ್ಕೃತಿ ಕೊನೆಗಾಣಬೇಕು. ಸಾಧ್ಯವಾದಷ್ಟು ಸಮಸ್ಯೆಗಳು ಸ್ಥಳೀಯ ಮಟ್ಟದಲ್ಲೇ ಇತ್ಯರ್ಥವಾಗಬೇಕು" ಎಂದರು.

ಪ್ರತಿ ಜಿಲ್ಲಾ ಮಟ್ಟದ ಅಧಿಕಾರಿಯೂ ತಮ್ಮ ಅಧೀನ ಅಧಿಕಾರಿಗಳ ಕಾರ್ಯಚಟುವಟಿಕೆಗಳ ಬಗ್ಗೆ ನಿತ್ಯ ಮಾಹಿತಿ ಹೊಂದಿರಬೇಕು ಎಂದು ಸೂಚಿಸಿದ ಅವರು,



ಸಿಎಂ ಡಿ.ಕೆ.ಶಿವಕುಮಾರ್ ಅವರು ಬೆಳಗಾವಿಯ ಸುವರ್ಣ ವಿಧಾನಸೌಧದಲ್ಲಿ ರೈತರು, ಕನ್ನಡ ಪರ ಸಂಘಟನೆಗಳ ಪ್ರತಿನಿಧಿಗಳು, ಸಾರ್ವಜನಿಕರಿಂದ ಗುರುವಾರ ಅಹವಾಲುಗಳನ್ನು ಸ್ವೀಕರಿಸಿದರು.

"ಯಾರು ಯಾವ ಗ್ರಾಮಕ್ಕೆ ಭೇಟಿ ನೀಡಿದರು, ಯಾವ ಸಮಸ್ಯೆ ಪರಿಹರಿಸಿದರು ಎಂಬುದರ ದಾಖಲೆ ಪ್ರತಿದಿನ ನವೀಕರಿಸಬೇಕು. ಫೀಲ್ಡ್ ಆಡಳಿತವೇ ಉತ್ತಮ ಆಡಳಿತದ ಅಳತೆ" ಎಂದು ಹೇಳಿದರು.

ಜನರ ಸಮಸ್ಯೆಗಳಿಗೆ ತ್ವರಿತ ಪರಿಹಾರ ಒದಗಿಸಲು ಸರ್ಕಾರ ಸ್ಥಾಪಿಸಿರುವ *ಪ್ರಜಾಸೇವಾ ಇಲಾಖೆ*ಯನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸಲು ಸೂಚಿಸಿದ ಅವರು, "ಶಾಸಕರು, ಸಚಿವರು ಮತ್ತು ಅಧಿಕಾರಿಗಳು ಜನರ ಬಳಿಗೆ ತೆರಳಬೇಕು. ನಾನು ನಡೆಸುತ್ತಿರುವ ಜನಸ್ಪಂದನ ಮಾದರಿಯನ್ನೇ ಆಡಳಿತದ ಎಲ್ಲ ಹಂತಗಳಲ್ಲೂ ಅಳವಡಿಸಬೇಕು. ಕಾನೂನಿನ ವ್ಯಾಪ್ತಿಯಲ್ಲಿ ಸಾಧ್ಯವಿರುವ ಯಾವುದೇ ಸಮಸ್ಯೆಯನ್ನು ವಿಳಂಬ ಮಾಡದೆ ಪರಿಹರಿಸಬೇಕು" ಎಂದು ನಿರ್ದೇಶನ ನೀಡಿದರು.

ನಗರಾಭಿವೃದ್ಧಿಯಲ್ಲಿ ಯೋಜನಾಬದ್ಧತೆ ಅನಿವಾರ್ಯ ಎಂದು ಹೇಳಿದ ಮುಖ್ಯಮಂತ್ರಿ, "ಅವೈಜ್ಞಾನಿಕ ಬಡಾವಣೆಗಳಿಗೆ ಅವಕಾಶವಿಲ್ಲ. ನಗರಗಳು ಮತ್ತು ಪಟ್ಟಣಗಳು ಮುಂದಿನ ತಲೆಮಾರಿನ ಅಗತ್ಯಗಳನ್ನು ಗಮನದಲ್ಲಿಟ್ಟುಕೊಂಡು ಯೋಜನಾಬದ್ಧವಾಗಿ ಬೆಳೆಯಬೇಕು. ಸರ್ಕಾರದ ನೀತಿ ತೀರ್ಮಾನಗಳನ್ನು ಅಧಿಕಾರಿಗಳು ಅಕ್ಷರಶಃ ಜಾರಿಗೆ ತರಬೇಕು" ಎಂದರು.

ಕಂದಾಯ ಇಲಾಖೆಯ ಇ–ಖಾತೆ ಕ್ರಾಂತಿಯನ್ನು ಉಲ್ಲೇಖಿಸಿದ ಅವರು, "ಒಂದು ರೂಪಾಯಿಯೂ ವೆಚ್ಚವಿಲ್ಲದೆ ಜನರ ಮನೆ ಬಾಗಿಲಿಗೆ ಇ–ಖಾತೆ ತಲುಪಿಸುವ ವ್ಯವಸ್ಥೆ ದೇಶದಲ್ಲೇ ಮಾದರಿಯಾಗಿದೆ. ಇದು ಬೆಂಗಳೂರಿಗೆ ಮಾತ್ರ ಸೀಮಿತವಾಗದೆ ರಾಜ್ಯದ ಪ್ರತಿಯೊಂದು ಜಿಲ್ಲೆಗೆ ವಿಸ್ತರಿಸಲಾಗುತ್ತಿದೆ" ಎಂದು ತಿಳಿಸಿದರು.

ಶಿಕ್ಷಣ ಕ್ಷೇತ್ರದಲ್ಲಿ ಹೊಸ ಪರಿವರ್ತನೆಯ ಘೋಷಣೆ ಮಾಡಿದ ಮುಖ್ಯಮಂತ್ರಿ, "ಕೆಪಿಎಸ್ ಶಾಲೆಗಳ ಯಶಸ್ವಿ ಮಾದರಿಯಂತೆ ಸಿಎಸ್‌ಆರ್ ಶಾಲೆಗಳನ್ನು ಅಭಿವೃದ್ಧಿಪಡಿಸಲಾಗುವುದು. ಗ್ರಾಮೀಣ ಮಕ್ಕಳಿಗೂ ನಗರಮಟ್ಟದ ಶಿಕ್ಷಣ ದೊರೆಯಬೇಕು. ಪ್ರತಿಯೊಂದು ಕ್ಷೇತ್ರದಲ್ಲೂ 10 ರಿಂದ 20 ಗುಣಮಟ್ಟದ ಶಾಲೆಗಳನ್ನು ನಿರ್ಮಿಸುವ ಗುರಿಯೊಂದಿಗೆ ಸರ್ಕಾರ ಮತ್ತು ಕೈಗಾರಿಕಾ ವಲಯ ಒಟ್ಟಾಗಿ ಕೆಲಸ ಮಾಡಲಿದೆ" ಎಂದರು.

ಮತದಾರರ ಪಟ್ಟಿ ಪರಿಷ್ಕರಣೆ ಕುರಿತು ಮಾತನಾಡಿದ ಅವರು, "ಈ ವಿಷಯದಲ್ಲಿ ರಾಜಕಾರಣಕ್ಕೆ ಅವಕಾಶವಿಲ್ಲ. ಪ್ರತಿಯೊಬ್ಬ ಅರ್ಹ ನಾಗರಿಕನ ಮತದಾನದ ಹಕ್ಕು ರಕ್ಷಿಸುವುದು ನಮ್ಮ ಜವಾಬ್ದಾರಿ. ಬಿಎಲ್‌ಒಗಳು ಪ್ರತಿಯೊಂದು ಮನೆಗೆ ಕನಿಷ್ಠ ಮೂರು ಬಾರಿ ಭೇಟಿ ನೀಡಬೇಕು. ಅಗತ್ಯ ದಾಖಲೆಗಳನ್ನು ಸರ್ಕಾರವೇ ಒದಗಿಸುತ್ತದೆ. ಒಬ್ಬ ಅರ್ಹ ಮತದಾರನ ಹಕ್ಕೂ ಕಳೆದುಹೋಗಬಾರದು" ಎಂದು ಸೂಚಿಸಿದರು.

ಯುವಜನರ ಉದ್ಯೋಗಾವಕಾಶಗಳಿಗೆ ಹೊಸ ದಿಕ್ಕು ನೀಡುವ ಉದ್ದೇಶದಿಂದ 'ಯುವ ಉದ್ಯೋಗ ಸೇತು' ಕಾರ್ಯಕ್ರಮವನ್ನು ಆರಂಭಿಸಲಾಗುತ್ತಿದೆ ಎಂದು ಘೋಷಿಸಿದ ಅವರು, ಖಾಸಗಿ ಕ್ಷೇತ್ರದ ಉದ್ಯೋಗಾವಕಾಶಗಳನ್ನು ವಿದ್ಯಾರ್ಥಿಗಳು ಮತ್ತು ಯುವಕರಿಗೆ ಸಂಪರ್ಕಿಸುವ ವ್ಯವಸ್ಥೆಯನ್ನು ಸರ್ಕಾರ ರೂಪಿಸುತ್ತಿದೆ ಎಂದು ಹೇಳಿದರು.

ಸಾಮಾಜಿಕ ಸಾಮರಸ್ಯ ಮತ್ತು ಸಂವಿಧಾನ ಮೌಲ್ಯಗಳ ಪ್ರಸಾರಕ್ಕಾಗಿ ರಾಜ್ಯಾದ್ಯಂತ 10,000 'ಭಾರತ್ ಜೋಡೋ ಯುವ ಸಂಘ'ಗಳನ್ನು ಸ್ಥಾಪಿಸಲಾಗುವುದು. ಪ್ರತಿಯೊಂದು ಸಂಘಕ್ಕೂ ರೂ.10 ಲಕ್ಷ ಅನುದಾನ ನೀಡಲಾಗುವುದು. ಕುವೆಂಪು ಅವರ ವಿಶ್ವಮಾನವ ಸಂದೇಶ ಮತ್ತು ಸಂವಿಧಾನದ ಆದರ್ಶಗಳನ್ನು ಸಮಾಜದ ಮನೆಮನೆಗೆ ತಲುಪಿಸುವ ಸಾಂಸ್ಕೃತಿಕ ಚಳವಳಿಯಾಗಿ ಇದು ರೂಪುಗೊಳ್ಳಲಿದೆ ಎಂದು ಮುಖ್ಯಮಂತ್ರಿ ಹೇಳಿದರು.

ಕೊನೆಗೆ ಕಂದಾಯ ಭೂಮಿಯ ಸಮಗ್ರ ಆಡಿಟ್‌ಗೆ ಸೂಚನೆ ನೀಡಿದ ಅವರು, "ರಾಜ್ಯದ ಪ್ರತಿಯೊಂದು ಇಂಚು ಸರ್ಕಾರಿ ಭೂಮಿಯ ನಿಖರ ಮಾಹಿತಿ ಸರ್ಕಾರದ ಬಳಿ ಇರಬೇಕು. ನಿವೇಶನ ರಹಿತ ಬಡ ಕುಟುಂಬಗಳಿಗೆ ನಿವೇಶನ ಒದಗಿಸುವ ಮಹತ್ವಾಕಾಂಕ್ಷಿ ಕಾರ್ಯಕ್ರಮವನ್ನು ಶೀಘ್ರದಲ್ಲೇ ಜಾರಿಗೊಳಿಸಲಾಗುವುದು" ಎಂದು ತಿಳಿಸಿದರು.

Printed by gandasi sadananda swamy, published by gandasi sadanandaswamy, owned by gandasi sadananda swamy. Printed at LAVANYA MUDRANA No. 79, TR mill, compound, 5th main 9th corss, Chamarajpet Bangalore-560018, published at No.531, prakruthi nilaya, kalikanagar, Andrahalli, Vishwaneedam Post, Bangalore-560091. Editor: Gandasi sadanandaswamy